ಸಂಪುಟ: 21, ಸಂಚಿಕೆ: 167, ಪುಟಗಳು: 8, ಮಂಗಳವಾರ, 26 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಮಂಗಳವಾರ 26, ಮಾರ್ಚ್ -2024)

- ಶ್ರೀ ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಪಾಲ್ಗುಣ ಮಾಸ, ಕೃಷ್ಣ ಪಕ್ಷ,
- ವಾರ: ಮಂಗಳವಾರ
- ತಿಥಿ: ಪಾಡ್ಯ • ನಕ್ಷತ್ರ: ಹಸ್ತ
- ರಾಹುಕಾಲ: 3:31 ರಿಂದ 5:02
- ಗುಳಿಕಕಾಲ: 12:29 ರಿಂದ 2:00
- ಯಮಗಂಡ ಕಾಲ: 9:27 ರಿಂದ 10:58

## ಇಡಿ ಕಸ್ಟಡಿಯಿಂದಲೇ ಎರಡನೇ ಸರ್ಕಾರಿ ಆದೇಶ ಹೊರಡಿಸಿದ ಸಿಎಂ

**ದೆಹಲಿ:** ಮದ್ಯನೀತಿ ಹಗರಣದಲ್ಲಿ ಬಂಧನಕ್ಕೊಳಗಾಗಿರುವ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ಜೈಲಿನಿಂದಲೇ ಆಡಳಿತ ನಡೆಸುತ್ತಿದ್ದಾರೆ. ಇಂದು ಇಡಿ ಕಸ್ಟಡಿಯಲ್ಲಿದ್ದುಕೊಂಡೇ ಎರಡನೇ ಸರ್ಕಾರಿ ಆದೇಶವನ್ನು ಹೊರಡಿಸಿದ್ದಾರೆ. ಕಳೆದ ಕೆಲವು ದಿನಗಳಿಂದ ದೆಹಲಿ ರಾಜಕೀಯದಲ್ಲಿ ಆಮ್ ಆದ್ಮಿ ಪಕ್ಷ (ಎಎಪಿ) ಮತ್ತು ಭಾರತೀಯ ಜನತಾ ಪಕ್ಷ (ಬಿಜೆಪಿ) ನಡುವೆ ರಾಜಕೀಯ ಸಮರ ನಡೆಯುತ್ತಿದೆ.



ಈ ಬಾರಿ ಆರೋಗ್ಯ ಇಲಾಖೆಯ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಹೊಸ ಆದೇಶ ಹೊರಡಿಸಿದ್ದಾರೆ. ಇದಕ್ಕೂ ಮುನ್ನ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಮಾರ್ಚ್ 24 ರಂದು ಇಡಿ ಕಸ್ಟಡಿಯಿಂದ ಮೊದಲ ಆದೇಶ ಹೊರಡಿಸಿದ್ದರು.

ತಮ್ಮ ಆದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವಂತೆ ಜಲಮಂಡಳಿ ಸಚಿವರನ್ನು ಕೋರಿದ್ದರು. ತಮ್ಮ ಆದೇಶ ಹೊರಬಿದ್ದ ನಂತರ, ಜೈಲಿಗೆ ಹೋದ ನಂತರವೂ ಸಿಎಂ ಕೇಜ್ರಿವಾಲ್‌ಗೆ ದೆಹಲಿ ಜನರ ಬಗ್ಗೆ ಕಾಳಜಿ ಇದೆ ಎಂದು ಅತಿಶಿ ಹೇಳಿದ್ದರು. ಅವರು ಸಾರ್ವಜನಿಕರ ಹಿತಾಸಕ್ತಿಗಳಿಗೆ ಸಂಪೂರ್ಣವಾಗಿ ಬದ್ಧರಾಗಿದ್ದಾರೆ. ಅವರು ಎಲ್ಲಿಯೇ ನೆಲೆಸಿದ್ದರೂ ದೆಹಲಿಯ ಜನರ ಸೇವೆಯನ್ನು ಮುಂದುವರಿಸುತ್ತಾರೆ. ಜೈಲಿಗೆ ಹೋದರೆ ಜೈಲಿನಿಂದಲೇ ಸರ್ಕಾರ ನಡೆಸುತ್ತಾರೆ ಎಂದಿದ್ದರು.

ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಜಾರಿ ನಿರ್ದೇಶನಾಲಯವು ಮಾರ್ಚ್ 21 ರಂದು ಬಂಧಿಸಿತ್ತು. ಜೈಲಿಗೆ ಹೋದರೂ ಅರವಿಂದ್ ಕೇಜ್ರಿವಾಲ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿಲ್ಲ. ಜೈಲಿನಿಂದಲೇ ಸರ್ಕಾರ ನಡೆಸುತ್ತಿದ್ದಾರೆ.

ಮತ್ತೊಂದೆಡೆ, ಆಮ್ ಆದ್ಮಿ ಪಕ್ಷ ಇಂದು ಪ್ರಧಾನಿ ನರೇಂದ್ರ ಮೋದಿ ಅವರ ನಿವಾಸಕ್ಕೆ ಘೇರಾವ್ ಘೋಷಿಸಿದೆ. ಯಾವುದೇ ರೀತಿಯ ಪ್ರತಿಭಟನೆ ನಡೆಸಲು ಆಮ್ ಆದ್ಮಿ ಪಕ್ಷಕ್ಕೆ ಅನುಮತಿ ನೀಡಿಲ್ಲ ಎಂದು ದೆಹಲಿ ಪೊಲೀಸರು ಹೇಳಿದ್ದಾರೆ. ಅದೇ ಸಮಯದಲ್ಲಿ, ಎಎಪಿ ಕಾರ್ಯಕರ್ತರು ಬೀದಿಗಿಳಿಯಲು ಸಿದ್ಧರಾಗಿದ್ದಾರೆ.

ಪುಟ 2

## ಮೂರ್ಖರು ಇತರರನ್ನು ಮರುಳು ಮಾಡಲು ಪ್ರಯತ್ನಿಸಿದಾಗ ಅವರೆಷ್ಟು ಮೂರ್ಖರೆಂಬುದು ತಿಳಿಯುತ್ತೆ

**ನವದೆಹಲಿ:** ಮೂರ್ಖರು ಇತರರನ್ನು ಮರುಳು ಮಾಡಲು ಪ್ರಯತ್ನಿಸಿದಾಗ ಅವರೆಷ್ಟು ಮೂರ್ಖರೆಂಬುದು ತಿಳಿಯುತ್ತದೆ ಎಂದು ಕೇಂದ್ರ ಸಚಿವೆ ಸ್ಮೃತಿ ಇರಾನಿ ಕಾಂಗ್ರೆಸ್ ನ ಜೈರಾಮ್ ರಮೇಶ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಮಹಿಳೆಯರಿಗೆ ಸಂಬಂಧಿಸಿದ ವಿಷಯಗಳ ಕುರಿತು ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಟೀಕೆಗೆ ತಿರುಗೇಟು ನೀಡಿದ ಕೇಂದ್ರ ಸಚಿವೆ ಸ್ಮೃತಿ ಇರಾನಿ, ಗಾಂಧಿ ಕುಟುಂಬದ ವಿರುದ್ಧ ವಾಗ್ದಾಳಿ ನಡೆಸಿದ್ದು, ಬಹಳ ಕಾಲದಿಂದ ಭಾರತದ ಸರಿಯಾದ ವಾರಸುದಾರರೆಂದು



ಬಿಂಬಿಸಿಕೊಳ್ಳುತ್ತಿರುವ ರಾಜವಂಶದ ಆಡಳಿತಗಾರರು ಅದರ ಸಂಪತ್ತನ್ನು ಲೂಟಿ ಮಾಡಿದ್ದಾರೆ. ಅವರ ಪತನದ ನಂತರವೂ, ಅವರ ಆಸ್ಥಾನಿಕರು ಸತ್ಯಗಳನ್ನು ತಿರುಚುವುದನ್ನು ಮುಂದುವರೆಸಿದ್ದಾರೆ ಎಂದಿದ್ದಾರೆ.

ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರು ಭಾರತೀಯ ಜನತಾ ಪಕ್ಷದ ಸರ್ಕಾರದ ನಾರಿ ಶಕ್ತಿ ಘೋಷಣೆಗಳು ನಿಜವಾದ ಕ್ರಿಯೆಯಿಲ್ಲದೆ ಪದಗಳಾಗಿ ಉಳಿದಿವೆ ಎಂದು ಆರೋಪಿಸಿದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಅವರನ್ನು ತರಾಟೆಗೆ ತೆಗೆದುಕೊಂಡರು.

ಮಹಿಳಾ ಕಲ್ಯಾಣಕ್ಕಾಗಿ ಬಿಜೆಪಿ ಸರ್ಕಾರ ಹಮ್ಮಿಕೊಂಡಿರುವ ಹಲವು ಯೋಜನೆಗಳನ್ನು ಹಾಳು ಮಾಡಲು ಪ್ರಯತ್ನಿಸುತ್ತಿದ್ದಾರೆ

ಪುಟ 2

## ಸಂಕ್ಷಿಪ್ತ ಸುದ್ದಿ

### ಹೈಕೋರ್ಟ್ ನ್ಯಾಯಮೂರ್ತಿಗಳಿಗೆ ಬೆದರಿಕೆ ಎಫ್ಐಆರ್ ದಾಖಲು

**ಬೆಂಗಳೂರು:** ನಿಮ್ಮ ಸಿಮ್ ಕಾರ್ಡ್‌ನಿಂದ ಕಾನೂನುಬಾಹಿರವಾಗಿ ಆಕ್ಷೇಪಾರ್ಹ ಸಂದೇಶಗಳನ್ನು ಪ್ರಕಟಿಸುತಿದ್ದೀರಿ ಎಂದು ಇಬ್ಬರು ಹೈಕೋರ್ಟ್ ನ್ಯಾಯಮೂರ್ತಿಗಳಿಗೆ ಮುಂಬೈ ಪೊಲೀಸರ ಸೋಗಿನಲ್ಲಿ ಬೆದರಿಕೆ ಹಾಕಿದ ವಿಚಾರಕ್ಕೆ ಸಂಬಂಧಿಸಿದಂತೆ ಇದೀಗ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಪುಟ 2

### ಪತ್ನಿಯ ಅನೈತಿಕ ಸಂಬಂಧ, ಪತಿ ಆತ್ಮಹತ್ಯೆ

**ಬೆಂಗಳೂರು:** ಪತ್ನಿಯ ಅನೈತಿಕ ಸಂಬಂಧ ಮತ್ತು ವಿಚ್ಛೇದನ ಪಡೆಯಲು 5 ಕೋಟಿ ಹಣಕ್ಕೆ ಡಿಮ್ಯಾಂಡ್ ಮಾಡಿದ ಹಿನ್ನೆಲೆ ಪತಿ ಆತ್ಮಹತ್ಯೆ ಮಾಡಿಕೊಂಡ ಆರೋಪ ಕೇಳಿಬಂದಿದೆ. ಪತ್ನಿಯ ಕಿರುಕುಳ ತಾಳಲಾಗದೆ ಗೋಡೆ ಮೇಲೆಯೇ ಡೆತ್ ನೋಟ್ ಬರೆದು ಪತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



ಪುಟ 2

### ಸೋನು ಗೌಡ ಕೇಸ್: ಮಗುವನ್ನು ಮಾರಾಟ ಮಾಡಿಲ್ಲ, ದತ್ತು ನೀಡಿಲ್ಲ

**ಬೆಂಗಳೂರು:** ಕಾನೂನು ಬಾಹಿರವಾಗಿ ಮಗುವನ್ನು ದತ್ತು ಪಡೆದ ಪ್ರಕರಣದಲ್ಲಿ ಟಿಕ್ ಟಾಕ್ ಹಾಗೂ ರೀಲ್ಸ್ ಮಾಡಿ ಫೇಮಸ್ ಆದ ಸೋನು ಶ್ರೀನಿವಾಸ್ ಗೌಡ ಅವರನ್ನು 14 ದಿನ ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ. ಹೀಗಾಗಿ, ಅವರನ್ನು ಬೆಂಗಳೂರಿನ ಪರಪ್ಪನ ಅಗ್ರಹಾರದಲ್ಲಿರುವ ಜೈಲಿಗೆ ಶಿಫ್ಟ್ ಮಾಡಲಾಗಿದೆ.



ಪುಟ 2

## ಸಿಎಂ, ಡಿಸಿಎಂ ಎದುರು ರಮೇಶ್ ಕುಮಾರ್, ಮುನಿಯಪ್ಪ ನಡುವೆ ಮಾತಿನ ವಾರ್

# ಸಂಧಾನ ಸಭೆಯಲ್ಲಿ ಜಟಾಪಟಿ





**ಕೋಲಾರ:** ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎದುರು, ಮಾಜಿ ಸಭಾಪತಿ ರಮೇಶ್ ಕುಮಾರ್ ಮತ್ತು ಸಚಿವ ಕೆ.ಹೆಚ್ ಮುನಿಯಪ್ಪ ಕಿತ್ತಾಡಿಕೊಂಡಿದ್ದಾರೆ. ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ನಾಯಕರ ಮಧ್ಯೆ ಇರುವ ದ್ವೇಷವನ್ನು ಶಮನಗೊಳಿಸುವ ನಿಟ್ಟಿನಲ್ಲಿ ಶನಿವಾರ (ಮಾ.23) ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಕೋಲಾರದಲ್ಲಿ ನಡೆದ ಸಂಧಾನ ಸಭೆ ನಡೆಸಿದರು. ಸಭೆಯಲ್ಲಿ ರಮೇಶ್ ಕುಮಾರ್ ಮತ್ತು ಕೆ.ಹೆಚ್ ಮುನಿಯಪ್ಪ ಮುಖಾಮುಖಿಯಾಗಿದ್ದರು.

ಈ ಸಂಧಾನ ಸಭೆಯಲ್ಲೂ ಇಬ್ಬರು ನಾಯಕರು ಪರಸ್ಪರ ಕಿತ್ತಾಡಿಕೊಂಡಿದ್ದಾರೆ. ಇಬ್ಬರು ನಾಯಕರು ತಮ್ಮ ಹಳೆಯ ಚುನಾವಣೆಗಳ ಸೋಲಿಗೆ ಕಾರಣವೇನು ಎಂಬುವುದರ ಕುರಿತು ಪಟ್ಟಿ ಬಿಚ್ಚಿಟ್ಟರು. ತಮ್ಮ ತಮ್ಮ ಸೋಲಿಗೆ ಪರಸ್ಪರ ಆರೋಪ ಪ್ರತ್ಯಾರೋಪಗಳ ಸುರಿಮಳೆ ಗೈದರು. ವಿರೋಧಿಗಳ ಮನೆಯಲ್ಲಿ ಹೋಗಿ ಕುಳಿತಿರಲಿಲ್ವಾ ಎಂದು ಪರಸ್ಪರ ಮುನಿಯಪ್ಪ ಮತ್ತು ರಮೇಶ್ ಕುಮಾರ್ ಆರೋಪ ಮಾಡಿದರು.

ಈ ಇಬ್ಬರು ನಾಯಕರ ಕಿತ್ತಾಟ ನೋಡಿ ಕೆ.ಹೆಚ್ ಮುನಿಯಪ್ಪ ಅಳಿಯನಿಗೆ ಟಿಕೇಟ್ ನೀಡಲು ಸಿಎಂ ಮತ್ತು ಡಿಸಿಎಂ ಹಿಂದೇಟು ಹಾಕಿದ್ದಾರೆ ಎಂದು ಮೂಲಗಳಿಂದ ಮಾಹಿತಿ ತಿಳಿದುಬಂದಿದೆ. ಈ ಹಿನ್ನೆಲೆಯಲ್ಲಿ ಕೋಲಾರ ಲೋಕಸಭಾ ಎಸ್‌ಸಿ ಮೀಸಲು ಕ್ಷೇತ್ರದಿಂದ ರಾಜ್ಯಸಭೆಯ ಮಾಜಿ ಸದಸ್ಯ ಡಾ.ಎಲ್ ಹನುಮಂತಯ್ಯ ಅವರನ್ನು ಕಣಕ್ಕಿಳಿಸಲು ಕಾಂಗ್ರೆಸ್ ನಿರ್ಧರಿಸಿದೆ ಎಂದು ಮೂಲಗಳು ಖಚಿತ ಪಡಿಸಿವೆ.

**ನಾಯಕರುಗಳ ನಡುವಿನ ಮುನಿಸಿಗೆ ಕಾರಣವೇನು** : ಅದು 2008 ರ ವಿಧಾನಸಭಾ ಚುನಾವಣೆ, ಸಾಕಷ್ಟು ಕುತೂಹಲಕ್ಕೆ ಕಾರಣವಾಗಿತ್ತು. ಈ ಚುನಾವಣೆಯಲ್ಲಿ ರಮೇಶ್ ಕುಮಾರ್ ಹಾಗೂ ಕೆ.ಶ್ರೀನಿವಾಸಗೌಡರ ಸೋತಿದ್ದರು. ನನ್ನ ಸೋಲಿಗೆ ಕೆಹೆಚ್ ಮುನಿಯಪ್ಪ ಅವರೇ ಕಾರಣವೆಂದು ರಮೇಶ್ ಕುಮಾರ್ ಅವರು ಮುನಿಸಿಕೊಂಡಿದ್ದಾರೆ. ಅಂದಿನಿಂದ ಶುರುವಾಗಿದ್ದು ರಮೇಶ್ ಕುಮಾರ್ ಹಾಗೂ ಕೆಹೆಚ್ ಮುನಿಯಪ್ಪ ನುಡವಿನ ಮುನಿಸು ಇನ್ನೂ ಮುಂದುವರೆದಿದೆ.

ಪುಟ 2

## ಸಂದೇಶ್ ಖಾಲಿ ಸಂತ್ರಸ್ತೆಯನ್ನು ಕಣಕ್ಕಿಳಿಸಿದ ಬಿಜೆಪಿ

# ಎಲ್ಲೆಡೆ ರೇಖಾ ವಿರೋಧಿ ಪೋಸ್ಟರ್

**ಪಶ್ಚಿಮ ಬಂಗಾಳ:** 2024 ರ ಲೋಕಸಭಾ ಚುನಾವಣೆಗೆ ಸಂದೇಶ್ ಖಾಲಿ ಪ್ರಕರಣದ ಸಂತ್ರಸ್ತರಲ್ಲಿ ಒಬ್ಬರಾದ ರೇಖಾ ಪಾತ್ರಾ ಅವರನ್ನು ಬಿಜೆಪಿ ಪಶ್ಚಿಮ ಬಂಗಾಳದ ಬಸಿರ್ಹತ್ ಕ್ಷೇತ್ರದಿಂದ ಲೋಕಸಭೆ ಚುನಾವಣೆಗೆ ತನ್ನ ಅಭ್ಯರ್ಥಿಯನ್ನಾಗಿ ಮಾಡಿದೆ. ಇದಾದ ಬಳಿಕ ಎಲ್ಲೆಡೆ ರೇಖಾ ವಿರೋಧಿ ಪೋಸ್ಟರ್ ಗಳು ರಾರಾಜಿಸುತ್ತಿವೆ. ಬಸಿರ್ ಹತ್ ಲೋಕಸಭಾ ಕ್ಷೇತ್ರದಿಂದ ರೇಖಾ ಪಾತ್ರಾ ಅಭ್ಯರ್ಥಿ ಎಂದು ಘೋಷಿಸಿದ ನಂತರ, ಪ್ರದೇಶದ ಕೆಲವು ಸ್ಥಳಗಳಲ್ಲಿ ಅವರ ವಿರುದ್ಧ ಪೋಸ್ಟರ್‌ಗಳು ಕಾಣಿಸಿಕೊಂಡಿವೆ.

ತೃಣಮೂಲ ಕಾಂಗ್ರೆಸ್ ನಾಯಕ ಷಹಜಾನ್ ಶೇಖ್ ಮತ್ತು ಅವರ ವಿರುದ್ಧ ಬಿಜೆಪಿ ಅಭ್ಯರ್ಥಿ ರೇಖಾ ಪಾತ್ರಾ ಅವರ ಉಮೇದುವಾರಿಕೆಯನ್ನು ಖಂಡಿಸಿವೆ. ಪಾತ್ರಾ ವಿರುದ್ಧ ಪೋಸ್ಟರ್‌ಗಳನ್ನು ಹಾಕಿದ್ದಕ್ಕಾಗಿ ರಾಜ್ಯದಲ್ಲಿ ಆಡಳಿತಾರೂಢ ತೃಣಮೂಲ ಕಾಂಗ್ರೆಸ್ (ಟಿಎಂಸಿ) ವಿರುದ್ಧ ಬಿಜೆಪಿ ಬೆರಳು ತೋರಿಸಿದೆ.

ಆದರೆ ಟಿಎಂಸಿ ಆರೋಪವನ್ನು ತಿರಸ್ಕರಿಸಿದೆ. ಇನ್ನೂ ಅಧಿಕೃತವಾಗಿ ಬಿಜೆಪಿಗೆ ಸೇರ್ಪಡೆಯಾಗದ ಪಾತ್ರಾ ಅವರನ್ನು ಬಸಿರ್ಹತ್ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಸಲಾಗಿದೆ. ಸಂದೇಶ್ ಖಾಲಿ ಬಸಿರ್ಹತ್ ಕ್ಷೇತ್ರದ ಭಾಗವಾಗಿದೆ. ಬಿಜೆಪಿಯು ಈ ಸ್ಥಾನದಿಂದ ಪಾತ್ರಾ ಅವರ



ನಾಮನಿರ್ದೇಶನವನ್ನು ಘೋಷಿಸಿದ ಒಂದು ದಿನದ ನಂತರ ಮಾರ್ಚ್ 25 ರಂದು ಪೋಸ್ಟರ್‌ಗಳನ್ನು ಹಾಕಿರುವುದು ಕಂಡುಬಂದಿದೆ. ಅದರಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ರೇಖಾ ನಮಗೆ ಬೇಡ ಎಂದು ಬರೆಯಲಾಗಿತ್ತು.

ಪಾತ್ರಾ ಅವರನ್ನು ಅಭ್ಯರ್ಥಿಯನ್ನಾಗಿ ಮಾಡಿದ್ದಕ್ಕೆ ಕ್ಷೇತ್ರದ ಕೆಲ ಮಹಿಳೆಯರು ಸಂತಸ ವ್ಯಕ್ತಪಡಿಸಿದ್ದಾರೆ. ಸಂದೇಶ್ ಖಾಲಿಯಲ್ಲಿ ಮಹಿಳೆಯರ ಮೇಲೆ ಟಿಎಂಸಿಯ ಶಹಜಹಾನ್ ಷೇಖ್ ನಿಂದ ಲೈಂಗಿಕ ಕಿರುಕುಳ ನಡೆದಿತ್ತು, ಈ ವಿಚಾರವನ್ನು ಬಯಲಿಗೆಳೆದು ಅವರ ವಿರುದ್ಧ ಪ್ರತಿಭಟನೆ ಮಾಡಿದವರಲ್ಲಿ ರೇಖಾ ಮೊದಲಿಗರು.

ಪುಟ 2

## ಮೈಸೂರು ರೆಸಾರ್ಟ್‌ನಲ್ಲಿ ಕುಳಿತು ಸಿಎಂ ಸಿದ್ದರಾಮಯ್ಯ ಆಪರೇಷನ್ ಹಸ್ತ

# ಬಿಎಸ್‌ವೈ ಆಪ್ತರಿಗೆ ಗಾಳ

**ಮೈಸೂರು:** ಲೋಕಸಭೆ ಚುನಾವಣೆಯಲ್ಲಿ ಮೈಸೂರು ಕೊಡಗು ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಅವರನ್ನು ಗೆಲ್ಲಿಸಲು ಪಣ ತೊಟ್ಟಿರುವ ಸಿಎಂ ಸಿದ್ದರಾಮಯ್ಯ ಮೂರು ದಿನಗಳ ಮೈಸೂರು ಪ್ರವಾಸದಲ್ಲಿದ್ದಾರೆ. ಇದೇ ವೇಳೆ, ಮೈಸೂರಿನ ರೆಸಾರ್ಟ್‌ನಲ್ಲಿ ಕುಳಿತುಕೊಂಡೇ 'ಆಪರೇಷನ್ ಹಸ್ತ'ಕ್ಕೆ ಮುಂದಾಗಿದ್ದಾರೆ. ಮಾಜಿ ಸಿಎಂ, ಬಿಜೆಪಿಯ ಹಿರಿಯ ನಾಯಕ ಬಿಎಸ್ ಯಡಿಯೂರಪ್ಪ ಆಪ್ತರಿಗೆ ಸಿಎಂ ಸಿದ್ದರಾಮಯ್ಯ ಗಾಳ ಹಾಕಿದ್ದಾರೆ ಎನ್ನಲಾಗಿದೆ. ಯಡಿಯೂರಪ್ಪ ಆಪ್ತ ಹೆಚ್.ವಿ ರಾಜೀವ್ ನಂತರ ಮತ್ತೊಬ್ಬ ಆಪ್ತನಿಗೆ ಸಿದ್ದರಾಮಯ್ಯ ಗಾಳ ಹಾಕಿದ್ದಾರೆ. ವರುಣ ಕ್ಷೇತ್ರದ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದ ಸದಾನಂದರನ್ನು ಪಕ್ಷಕ್ಕೆ ಸೆಳೆಯಲು ಮುಂದಾಗಿದ್ದಾರೆ.





ಈ ಹಿಂದೆ ಯಡಿಯೂರಪ್ಪ ಹಾಗೂ ವಿಜಯೇಂದ್ರ ಬೆನ್ನಿಗೆ ನಿಂತಿದ್ದ ಸದಾನಂದರನ್ನು ಪಕ್ಷಕ್ಕೆ ಸೆಳೆಯುವಲ್ಲಿ ಸಿದ್ದರಾಮಯ್ಯ ಬಹುತೇಕ ಯಶಸ್ವಿಯಾಗಿದ್ದಾರೆ. ಸದಾನಂದ ವೀರಶೈವ ಸಮುದಾಯದ ಮುಖಂಡ ಸಹ ಆಗಿದ್ದು, ಅವರನ್ನು ಸೆಳೆಯುವ ಮೂಲಕ ವೀರಶೈವ ಮತಗಳ ಕ್ರೂಡೀಕರಣಕ್ಕೂ ಸಿದ್ದರಾಮಯ್ಯ ಯೋಜನೆ ರೂಪಿಸಿದ್ದಾರೆ.

ಪುಟ 2

## ಮಂಡ್ಯ ಮೈತ್ರಿ ಅಭ್ಯರ್ಥಿ ಘೋಷಣೆ

# ಸಕ್ಕರೆ ನಾಡಿನಿಂದ ಹೆಚ್‌ಡಿಕೆ ಸ್ಪರ್ಧೆ ಫಿಕ್ಸ್?

**ಮಂಡ್ಯ:** ಸಕ್ಕರೆ ನಾಡು ಮಂಡ್ಯ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿಯ ವಿಚಾರ ಸಾಕಷ್ಟು ಕುತೂಹಲ ಮೂಡಿಸಿದೆ. ಮಂಡ್ಯ ಕ್ಷೇತ್ರದಿಂದ ಮೈತ್ರಿ ಅಭ್ಯರ್ಥಿಯಾಗಿ ಯಾರು ಸ್ಪರ್ಧೆ ಮಾಡ್ತಾರೆ ಎಂವ ಕೌತುಕ ರಾಜಕೀಯ ವಲಯದಲ್ಲಿ ಮೂಡಿತ್ತು. ಇಂದು ಈ ಎಲ್ಲಾ ಕುತೂಹಲಕ್ಕೂ ತೆರೆ ಬೀಳಲಿದೆ.



ಇಷ್ಟು ದಿನಗಳ ಕಾಲ ಮೈತ್ರಿ ಅಭ್ಯರ್ಥಿ ಕುಮಾರಸ್ವಾಮಿ ಆಗ್ತಾರಾ ಅಥವಾ ನಿಖಿಲ್ ಕುಮಾರಸ್ವಾಮಿ ಆಗುತ್ತಾರಾ ಎಂಬ ಪ್ರಶ್ನೆಗಳು ಎದ್ದಿದ್ದವು. ಇದೀಗ ಮಂಡ್ಯ ಲೋಕಸಭಾ ಕ್ಷೇತ್ರದ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರೇ ಕಣಕ್ಕೆ ಇಳಿಯಲಿದ್ದಾರೆ.

ಮಂಡ್ಯ ಜಿಲ್ಲೆಯ ಜೆಡಿಎಸ್ ನಾಯಕರು ಹಾಗೂ ಕಾರ್ಯಕರ್ತರು ಒತ್ತಡ ಏರಿದಾಗಲೇ ಕುಮಾರಸ್ವಾಮಿ ಅವರು ಮಂಡ್ಯದಿಂದ ಸ್ಪರ್ಧೆ ಮಾಡುವ ಮನಸ್ಸು ಮಾಡಿದ್ರು. ಆದರೆ ರಾಮನಗರ ಜಿಲ್ಲೆಯ ಮುಖಂಡರು ಹಾಗೂ ಕಾರ್ಯಕರ್ತರು ಮಂಡ್ಯ ಸ್ಪರ್ಧೆ ಬೇಡಾ. ರಾಮನಗರದಲ್ಲಿಯೇ ಕುಮಾರಸ್ವಾಮಿ ಇರಬೇಕು.

ಪುಟ 2

## ತಂಗಡಗಿ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು





**ಬೆಂಗಳೂರು:** ಕಾಂಗ್ರೆಸ್ ನಾಯಕ ಹಾಗೂ ಸಚಿವರಾದ ಶಿವರಾಜ್ ತಂಗಡಗಿ ಬಿಜೆಪಿ ಯುವ ಮತದಾರರ ವಿರುದ್ಧ ಪ್ರಚೋದನಾತ್ಮಕ ಹೇಳಿಕೆ ನೀಡಿದ್ದಾರೆ ಎಂದು ಭಾಜಪ ಆರೋಪಿಸಿದೆ. ಈ ಸಂಬಂಧ ರಾಜ್ಯ ಚುನಾವಣಾ ಆಯೋಗಕ್ಕೆ ಬಿಜೆಪಿ ದೂರು ದಾಖಲಿಸಿದೆ. ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್, ಎಂಎಲ್‌ಸಿ ಡಿಎಸ್ ಅರುಣ್ ಹಾಗೂ ವಕ್ತಾರ ಹೆಚ್.ವೆಂಕಟೇಶ್ ದೊಡ್ಡೇರಿ ಅವರ ನಿಯೋಗ ರಾಜ್ಯ ಚುನಾವಣೆ ಆಯೋಗಕ್ಕೆ ದೂರು ಸಲ್ಲಿಸಿದೆ. ಇಷ್ಟು ಮಾತ್ರವಲ್ಲದೇ ನಾನು ಮೋದಿ ಎಂದು ಹೇಳುವೆ,

ಪುಟ 2

## ಪೊಲೀಸ್ ಠಾಣೆಗಳು ವ್ಯಾಪಾರ ಕೇಂದ್ರಗಳಾಗಿ ಮಾರ್ಪಟ್ಟಿವೆ

# ಲೋಕಾಯುಕ್ತ

**ಬೆಂಗಳೂರು:** ಪೊಲೀಸ್ ಠಾಣೆಗಳಲ್ಲಿನ ಹೀನಾಯ ಪರಿಸ್ಥಿತಿಯು ಸಾಮಾನ್ಯ ಜನರಿಗೆ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಕಳೆದುಕೊಳ್ಳುವಂತೆ ಮಾಡಿದೆ. ಪೊಲೀಸರು ವಿನಮ್ರ, ಪ್ರಾಮಾಣಿಕ, ಸೇವಾ ಮನೋಭಾವದವರಾಗಿ ಅಮಾಯಕರನ್ನು ರಕ್ಷಿಸಬೇಕು. ಆದರೆ ದುರದೃಷ್ಟವಶಾತ್, ಭ್ರಷ್ಟಾಚಾರದಿಂದಾಗಿ ಪೊಲೀಸ್ ಠಾಣೆಗಳು ವ್ಯಾಪಾರ ಕೇಂದ್ರಗಳಾಗಿ ಮಾರ್ಪಟ್ಟಿವೆ. ಇದನ್ನು ನಿಲ್ಲಿಸದಿದ್ದರೆ, ಇದು ಖಂಡಿತವಾಗಿಯೂ ಸವಾಲಾಗಿ ಪರಿಣಮಿಸುತ್ತದೆ ಮತ್ತು ಸಮಾಜಕ್ಕೆ ತಪ್ಪು ಸಂದೇಶವನ್ನು ರವಾನಿಸುತ್ತದೆ. ಅಲ್ಲಿ ಧ್ವನಿಯಿಲ್ಲದ, ಅಸಹಾಯಕ ಮತ್ತು ಬಡ ಪೊಲೀಸ್ ಸಿಬ್ಬಂದಿ ಅಧಿಕಾರಿಗಳಿಗೆ ಬಲಿಪಶುಗಳಾಗುವ ಸಾಧ್ಯತೆಯಿದೆ ಎಂದು ಲೋಕಾಯುಕ್ತ ನ್ಯಾಯಾಲಯ ಹೇಳಿದೆ.





ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ನಿರೀಕ್ಷಣಾ ಜಾಮೀನು ಪಡೆಯುವವರೆಗೆ ಆರೋಪಿತ ದಂಪತಿಯನ್ನು ಬಂಧಿಸದಿರಲು 50,000 ರೂ.ಗಳನ್ನು ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತ ಪೊಲೀಸರಿಂದ ಬಂಧಿಸಲ್ಪಟ್ಟ ಕೆಆರ್ ಪುರಂ ಪೊಲೀಸ್ ಇನ್ಸ್‌ಪೆಕ್ಟರ್ ವಜ್ರಮುನಿ ಕೆ ಅವರ ಜಾಮೀನು ಅರ್ಜಿ ವಿಚಾರಣೆ ವೇಳೆ ಲೋಕಾಯುಕ್ತ ನ್ಯಾಯಾಲಯ ಈ ಅಭಿಪ್ರಾಯಪಟ್ಟಿದೆ.

ಪುಟ 2

## ರಾಜ್ಯದ ವಿವಿಧಡೆ ಅಕ್ರಮ ಸಾಗಟ

# ಹಣ, ವಸ್ತು ಜಪ್ತಿ



**ಬಾಗಲಕೋಟೆ:** ಲೋಕಸಭೆ ಚುನಾವಣೆಗೆ ದಿನಾಂಕ ಘೋಷಣೆಯಾಗುತ್ತಿದ್ದಂತೆ ದೇಶದಲ್ಲಿ ನೀತಿ ಸಂಹಿತೆ ಜಾರಿಯಾಗಿದೆ. ಮತಕ್ಕಾಗಿ ಜನರಿಗೆ ಆಮಿಷವೊಂಡುವುದನ್ನು ತಡೆಯಲು ಚುನಾವಣಾ ಆಯೋಗ ಹಲವು ಕ್ರಮಗಳನ್ನು ಕೈಗೊಂಡಿದ್ದು, ಅಕ್ರಮ ಹಣ-ಹೆಂಡೆ ಹಾಗೂ ವಸ್ತುಗಳನ್ನು ಹಂಚುವುದು ಮತ್ತು ಸಾಗಾಟದ ಮೇಲೆ ಕಣ್ಣಿಟ್ಟಿದೆ. ನಾಕಾ ಬಂದಿಗಳನ್ನು ಹಾಕಿದೆ. ನಾಕಾ ಬಂದಿಗಳಲ್ಲಿ ಚುನಾವಣಾ ಅಧಿಕಾರಿಗಳು ಮತ್ತು ಪೊಲೀಸರು ಹಗಲು-ರಾತ್ರಿ ವಾಹನಗಳ ತಪಾಸಣೆ ನಡೆಸುತ್ತಿದ್ದಾರೆ. ಅದರಂತೆ ಚಿಕ್ಕಬಳ್ಳಾಪುರ ಜಿಲ್ಲೆಯ ಸುಲ್ತಾನ್ ಪೇಟೆ ಚೆಕ್ ಪೋಸ್ಟ್ ಮೂಲಕ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 5 ಲಕ್ಷ ಹಣವನ್ನು ಚುನಾವಣಾ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ.

ಪುಟ 2

## ಪಾಕಿಸ್ತಾನದ ಎರಡನೇ ಅತಿದೊಡ್ಡ ನೌಕಾ ವಾಯುನೆಲೆಗೆ ಉಗ್ರರ ದಾಳಿ

**ಇಸ್ಲಮಾಬಾದ್:** ಪಾಕಿಸ್ತಾನದ ಬಲೂಚಿಸ್ತಾನದಲ್ಲಿರುವ ದೇಶದ ಎರಡನೇ ಅತಿದೊಡ್ಡ ನೌಕಾಪಡೆಯ ವಾಯುನೆಲೆ ಮೇಲೆ ಉಗ್ರರು ದಾಳಿ ನಡೆಸಿದ್ದಾರೆ. ಪಾಕಿಸ್ತಾನದ ಭದ್ರತಾ ಪಡೆಗಳು ನಾಲ್ವರು ಉಗ್ರರನ್ನು ಹತ್ಯೆ ಮಾಡಿವೆ. ಸ್ವಯಂಚಾಲಿತ ಶಸ್ತ್ರಾಸ್ತ್ರಗಳು ಮತ್ತು ಗ್ರೆನೇಡ್‌ಗಳೊಂದಿಗೆ ಶಸ್ತ್ರಸಜ್ಜಿತವಾದ ಭಯೋತ್ಪಾದಕರು ಟರ್ಬತ್‌ನಲ್ಲಿರುವ ಪಾಕಿಸ್ತಾನದ ನೌಕಾ ಕೇಂದ್ರ ಪಿಎನ್‌ಎಸ್ ಸಿದ್ದಿಕಿ ಮೇಲೆ ದಾಳಿ ನಡೆಸಿದ್ದಾರೆ.

ಭದ್ರತಾ ಸಿಬ್ಬಂದಿ ಪ್ರತಿದಾಳಿ ನಡೆಸಿ ಉಗ್ರರನ್ನು ಹತ್ಯೆ ಮಾಡಿದ್ದಾರೆ. ಈ ಘರ್ಷಣೆಯಲ್ಲಿ ಪಾಕಿಸ್ತಾನಿ ಭದ್ರತಾ ಪಡೆಗಳಿಗೆ ಯಾವುದೇ ನಷ್ಟವಾಗಿಲ್ಲ ಎಂದು ಹೇಳಲಾಗಿದೆ. ಭಯೋತ್ಪಾದಕರು ಹತರಾದ ನಂತರ,



ಭದ್ರತಾ ಪಡೆಗಳು ಪ್ರದೇಶವನ್ನು ಸುತ್ತುವರೆದಿವೆ ಮತ್ತು ಪ್ರದೇಶದಲ್ಲಿ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದವು. ಪಾಕಿಸ್ತಾನದ ಈ ನೌಕಾ ನೆಲೆಯಲ್ಲಿ ಚೀನಾದ ಡ್ರೋನ್‌ಗಳನ್ನು ಸಹ ನಿಯೋಜಿಸಲಾಗಿದೆ.

ಈ ದಾಳಿಯಲ್ಲಿ ಆರು ಭಯೋತ್ಪಾದಕರು ಭಾಗಿಯಾಗಿದ್ದಾರೆ ಎಂದು ಕೆಲವು ಮೂಲಗಳು ಹೇಳುತ್ತಿವೆ, ಇದರಲ್ಲಿ ನಾಲ್ವರು ಕೊಲ್ಲಲ್ಪಟ್ಟರು ಮತ್ತು ಇಬ್ಬರು ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ

ಪುಟ 2



# ಚನ್ನಕೇಶವ ಸ್ವಾಮಿ ರಥೋತ್ಸವ

**ವಿಜಯಪುರ:** ಪಟ್ಟಣದಲ್ಲಿನ ಶ್ರೀ ಚೆನ್ನಕೇಶವ ಸ್ವಾಮಿ ಬ್ರಹ್ಮ ರಥೋತ್ಸವ ಕಾರ್ಯಕ್ರಮದಲ್ಲಿ ಒಂದೆಡೆ ಚಿಕ್ಕಬಳ್ಳಾಪುರ ಲೋಕಸಭಾ ಅಭ್ಯರ್ಥಿ ಬಿಜೆಪಿ ಪಕ್ಷದ ಕೆ ಸುಧಾಕರ್ ರವರು ಶ್ರೀ ಸೌಮ್ಯಕೇಶವ ಸ್ವಾಮಿ ದೇವರ ಅಡ್ಡ ಪಲ್ಲಕ್ಕಿ ಉತ್ಸವ ಹಾಗೂ ರಥೋತ್ಸವದಲ್ಲಿ ಭಾಗವಹಿಸಿ, ಬಿಜೆಪಿ ಹಾಗೂ ಜೆ.ಡಿ.ಎಸ್ ಕಾರ್ಯಕರ್ತರುಗಳು ಹಾಲು-ಜೇನಿನಂತೆ ಸೇರಿ, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರವನ್ನು ಗೆಲ್ಲಲಿರುವೆವೆಂದು ತಿಳಿಸಿದರು.

ಮತ್ತೊಂದೆಡೆ ಕಾಂಗ್ರೆಸ್ನ ಜಿಲ್ಲಾ ಉಸ್ತುವಾರಿ ಸಚಿವ ಕೆಎಚ್ ಮುನಿಯಪ್ಪ ರವರು, ಶ್ರೀಧರ್ಮರಾಯಸ್ವಾಮಿ ದ್ರೌಪತಮ್ಮನವರ ದೇವಾಲಯಕ್ಕೆ ಭೇಟಿ ನೀಡಿ ರಥೋತ್ಸವದಲ್ಲಿ ಭಾಗವಹಿಸಿ, ಪುರಸಭಾ ಮಾಜಿ ಅಧ್ಯಕ್ಷ ಎಂ ಸತೀಶ್ ಕುಮಾರ್‌ರವರ ನಿವಾಸಕ್ಕೆ ತೆರಳಿ, ಕಾಂಗ್ರೆಸ್ ಮುಖಂಡರುಗಳನ್ನು ಮಾತನಾಡಿಸಿ, ತೆರಳಿದರು.

ರಥೋತ್ಸವದಲ್ಲಿ ಬಿಜೆಪಿ ಅಭ್ಯರ್ಥಿ ಕೆ ಸುಧಾಕರ್ ರವರೊಂದಿಗೆ ಪುರಸಭಾ ಸದಸ್ಯ ಶಿಲ್ಪಾ ಅಜಿತ್, ಟೌನ್ ಬಿಜೆಪಿ ಅಧ್ಯಕ್ಷ ಆರ್ ಸಿ ಮಂಜು ನಾಥ್, ಕಾರ್ಯದರ್ಶಿ ಮುನೀಂದ್ರ, ತಾಲೂಕು ಕಾರ್ಯದರ್ಶಿ ರವಿಕುಮಾರ್, ಮಹಂತಿನ ಮಠದ ಕಾರ್ಯದರ್ಶಿ ವಿ ವಿಶ್ವನಾಥ್. ಸಚಿವ ಕೆಎಚ್ ಮುನಿಯಪ್ಪ ರವರೊಂದಿಗೆ ಕಾಂಗ್ರೆಸ್ ಅಭ್ಯರ್ಥಿಯಾಗಲಿರುವ ರಕ್ಷಾ ರಾಮಯ್ಯ ಬರುವರೆಂದು ನಿರೀಕ್ಷಿಸಲಾಗಿದ್ದು, ಅವರು ಬಾರದಿದ್ದು, ಪುರಸಭಾ ಸದಸ್ಯರಾದ ಎಮ್ ಸತೀಶ್ ಕುಮಾರ್, ನಂಜಣ್ಣ, ಮುನಿಚಿನ್ನಪ್ಪ, ಮತ್ತಿತರರು ಉಪಸ್ಥಿತರಿದ್ದರು.

ಇಲ್ಲಿನ ಕೋಟೆ ಬೀದಿಯಲ್ಲಿ ನೆಲೆಸಿ, ಅರ್ಜುನನಿಂದ ಪ್ರತಿಷ್ಠಾಪನೆಗೊಂಡ ಶ್ರೀ ಚನ್ನಕೇಶವ ಸ್ವಾಮಿ ದೇವಾಲಯದಲ್ಲಿ ಜಾತ್ರಾ ಮಹೋತ್ಸವ ಕಾರ್ಯಕ್ರಮಗಳು ಅದ್ದೂರಿಯಾಗಿ ನಡೆದವು.

ಹೋಳಿ ಹಬ್ಬದ ದಿನದಂದು ರಥೋತ್ಸವ ನಡೆಯುವುದು ವಿಶೇಷವಾಗಿದ್ದು, ಬೆಳಗ್ಗೆಯಿಂದಲೇ ದೇವಾಲಯದಲ್ಲಿ ಸುಪ್ರಭಾತ ಸೇವೆ, ವಿಶೇಷ ಹೂವಿನ ಅಲಂಕಾರ, ಅಭಿಷೇಕ, ಮಹಾಮಂಗಳಾರತಿ ಏರ್ಪಡಿಸಲಾಗಿತ್ತು.

ಸಾವಿರಾರು ಭಕ್ತ ಜನರ ಜಯ ಘೋಷದ ಮಧ್ಯೆ ಗಾಂಧಿಚೌಕದಿಂದ ಹೊರಟ ದೇವರ ಬ್ರಹ್ಮ ರಥವು ಶ್ರೀ ನಗರೇಶ್ವರಸ್ವಾಮಿ ದೇವಾಲಯದ ಮುಂಭಾಗದಿಂದ ಹಾದು ಹೋಗಿ, ಗಂಗಾತಾಯಿ ದೇವಾಲಯ ವೃತ್ತವನ್ನು ಸೇರಿತು.

ರಥೋತ್ಸವದ ಅಂಗವಾಗಿ ಮಹಂತಿನ ಮಠ, ಶ್ರೀ ನಗರೇಶ್ವರಸ್ವಾಮಿ ದೇವಾಲಯ , ಹಾಗೂ ಶ್ರೀ ಚನ್ನಕೇಶವ ಸ್ವಾಮಿ ದೇವಾಲಯದ ಬಳಿ ಸೇರಿದಂತೆ ಅನೇಕ ಕಡೆಗಳಲ್ಲಿ ಪಾನಕ, ಪಣ್ಯಾರ, ಕೋಸಂಬರಿ ವಿತರಣೆ, ಮಂಟಪ ಪಡಿಸೇವೆ ಜರುಗಿದವು.

ಸಂಜೆಯವರೆಗೆ ಗಂಗಾತಾಯಿ ಸರ್ಕಲ್‌ನಲ್ಲಿ ಭಕ್ತರು ನೆರೆದು, ಪೂಜೆ ಸಲ್ಲಿಸಿದ ನಂತರ ಬಜಾರ್ ರಸ್ತೆ ಮೂಲಕ ಶ್ರೀ ರುದ್ರದೇವರ ದೇವಾಲಯದ ಮುಂಭಾಗದಿಂದ ಗಾಂಧಿಚೌಕದವರೆಗೆ ರಥವನ್ನು ಎಳೆದು ಧೂಳೋತ್ಸವವನ್ನು ಹಮ್ಮಿಕೊಳ್ಳಲಾಗಿತ್ತು.

## ಪರೋಪಕಾರಿ ವಾಸು ಸದಾ ಸ್ಮರಣೀಯರು: ಪ್ರಶಾಂತಗೌಡ

**ಮೈಸೂರು:** ಶಾಸಕ, ಶಿಕ್ಷಣ ತಜ್ಞ ಹಾಗೂ ಕೈಗಾರಿಕೋದ್ಯಮಿ ಮಾತ್ರವಲ್ಲದೆ ಪರೋಪಕಾರಿಯಾಗಿ ವಾಸು ಅವರು ಸದಾ ಸ್ಮರಣೀಯರು ಎಂದು ನಗರಪಾಲಿಕೆ ಮಾಜಿ ಸದಸ್ಯ ಪ್ರಶಾಂತಗೌಡ ಸ್ಮರಿಸಿದರು. ದೇವರಾಜ ಮೊಹಲ್ಲಾದ ಆಂಜನೇಯ ಸ್ವಾಮಿ ದೇವಾಲಯದಲ್ಲಿ ವಾಸು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಹಾಗೂ ಸಾರ್ವಜನಿಕರಿಗೆ ಎಳನೀರು ವಿತರಿಸಿ ಅವರ ಜನ್ಮ ದಿನ ಸ್ಮರಿಸಿ ಮಾತನಾಡಿದ ಅವರು, ನಾನು ರಾಜಕೀಯಕ್ಕೆ ಬರಲು ಪ್ರೇರಣೆ ಅವರೇ ಆಗಿದ್ದರು. ಬದುಕಿನ್ನೂದ್ದಕ್ಕೂ ಪರೋಪಕಾರವನ್ನೇ ಜೀವನವನ್ನಾಗಿಸಿಕೊಂಡ ಅವರು ನಮ್ಮೊಂದಿಗಿಲ್ಲವಾದರು ಅವರ ಆದರ್ಶ ಸದಾ ನಮ್ಮೊಟ್ಟಿಗೆ ಇರಲಿದೆ ಎಂದು ನೆನೆದರು. ಕೃಷ್ಣಾನಂದ ಗೋಗಿರಿ ಸ್ವಾಮಿಗಳು, ವಾಸು ಅವರ ಪುತ್ರ ರತೀಶ್ ಗೌಡ, ಪ್ರವೀಣ್ ಜೈನ್, ಸುಂದರ ಕುಮಾರ್ , ಜಗನ್ನಾಥ್, ಪ್ರದೀಪ್ ಕುಮಾರ್, ಯೋಗ ನರಸಿಂಹೇಗೌಡ, ಪಡುವಾರಳ್ಳಿ ಮಂಜು, ಶಿವಕುಮಾರ್ ರೈಲ್ವೇ, ಸತೀಶ್ ಗೌಡ, ಡಾ. ಲೋಕೇಶ್, ಜ್ಞಾನೇಶ್, ರಾಮಪ್ರಸಾದ್, ಗುರುಪ್ರಸಾದ್, ಗೋಪಿನಾಥ್, ಮಹೇಶ್ ಆಗೋ ಇತರರು ಭಾಗವಹಿಸಿದ್ದರು.



## ಕೈ ಅಭ್ಯರ್ಥಿಯಿಂದ ಮಠ, ದರ್ಗಾ, ಚರ್ಚ್ ರನ್

**ಮೈಸೂರು:** ಅಭ್ಯರ್ಥಿ ಘೋಷಣೆಯ ಬೆನ್ನಲ್ಲೇ ಮೈಸೂರಿನಲ್ಲಿ ಲೋಕಸಭಾ ಚುನಾವಣಾ ಕಣ ನಾಮಪತ್ರ ಸಲ್ಲಿಕೆಗೂ ಮುನ್ನವೇ ರಂಗೇರಿದ್ದು, ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ್ ಮಠ, ಚರ್ಚ್ ಹಾಗೂ ಮುಸ್ಲಿಂ ದರ್ಗಾಗೂ ಭೇಟಿ ನೀಡಿ ಮುಖ್ಯಸ್ಥರಿಂದ ಆಶೀರ್ವಾದ ಕೋರಿದ್ದಾರೆ. ಮೈಸೂರು - ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ್ ಮುಸ್ಲಿಂ ಧರ್ಮ ಗುರುಗಳಾದ ಸರ್ಕಾಜೀ ಭೇಟಿ ಮಾಡಿ ಆಶೀರ್ವಾದ ಪಡೆದರು. ಬಳಿಕ ಶ್ರೀ ಹೊಸಮಠ ಚಿದಾನಂದ ಸ್ವಾಮೀಜಿ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ನಂತರ ಕ್ರಿಶ್ಚಿಯನ್ ಧರ್ಮಗುರುಗಳಾದ ಮೊ.ರೆ.ಡಾ.ಬೆರ್ನಾರ್ಡ್ ಮೋರ್ಸ್ ಅವರನ್ನು ಭೇಟಿ ಬೆಂಬಲ ಕೋರಿದರು.ಆಲ್ ಪ್ರೆಡ್ ಜಾನ್ ಮೊರೆಸಾ, ಡೊಮೆನಿಕ್ ಜೆಮ್ಸ್ ಇನ್ನಿತರಿದ್ದರು. ಈ ಸಂದರ್ಭದಲ್ಲಿ ಮೈಸೂರು ಗ್ರಾಮಾಂತರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ. ವಿಜಯ್ ಕುಮಾರ್ ಹಾಗೂ ನಗರಾಧ್ಯಕ್ಷ ಆರ್. ಮೂರ್ತಿ, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಆಯುಬ್ ಖಾನ್, ವಸ್ತು ಪ್ರದರ್ಶನ ಪ್ರಾಧಿಕಾರ ಮಾಜಿ ಅಧ್ಯಕ್ಷ ಅಬ್ದುಲ್ಲಾ, ನಗರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ನಗರ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಕೈಸರ್ ಅಹಮದ್, ನಗರಪಾಲಿಕೆ ಮಾಜಿ ಸದಸ್ಯ ಹಸರತ್ ಉಲ್ಲಾ,ಕೆಪಿಸಿಸಿ ಸದಸ್ಯ ನಜರಬಾದ್ ನಟರಾಜ್, ಮಾಧ್ಯಮ ವಕ್ತಾರ ಕೆ. ಮಹೇಶ್ ಇನ್ನಿತರರು ಉಪಸ್ಥಿತರಿದ್ದರು.



# ಮೇಕೆದಾಟು ಹೋರಾಟಕ್ಕೆ ಗೆಲುವು ಸಿಗುವ ಸಮಯ ಬಂದಿದೆ

**ಚನ್ನಪಟ್ಟಣ:** ಕಳೆದ 6 ತಿಂಗಳಿಂದ ನಡೆಯುತ್ತಿರುವ ಮೇಕೆದಾಟು ಅನುಷ್ಠಾನದ ಹೋರಾಟಕ್ಕೆ ಇದೀಗ ಜನಪ್ರತಿನಿಧಿಗಳು ಸ್ಪಂದಿಸುತ್ತಿದ್ದು ನಮ್ಮ ಹೋರಾಟಕ್ಕೆ ಫಲ ಸಿಗುವ ಕಾಲ ಸನ್ನಿಹಿತವಾಗಿದೆ ಎಂದು ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡರು(ಎನ್‌ಜಿ) ಅಭಿಪ್ರಾಯಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್ ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಸೋಮವಾರ ನಡೆದ 173 ನೇ ದಿನದ ಹೋರಾಟದಲ್ಲಿ ಅವರು ಮಾತನಾಡಿ, ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಸಂಕಷ್ಟ ಸೂತ್ರ ರಚಿಸುವಂತೆ ಹಾಗೂ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಗಮನ ಸೆಳೆಯುವ ನಿಟ್ಟಿನಲ್ಲಿ ಕಕಜ ವೇದಿಕೆ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ ಕಳೆದ 6 ತಿಂಗಳಿಂದ ನಡೆಯುತ್ತಿರುವ ನಿರಂತರ ಹೋರಾಟಕ್ಕೆ ಇದೀಗ ಫಲ ಸಿಗುವ ಸೂಚನೆ ಸಿಕ್ಕಿದೆ. ಮಾಜಿ ಪ್ರಧಾನಿ ದೇವೇಗೌಡರು ಮೇಕೆದಾಟು ನಿರ್ಮಾಣದ ಬಗ್ಗೆ ಗಮನ ನೀಡಿದ್ದು ಜೊತೆಗೆ ಲೋಕಸಭಾ ಚುನಾವಣೆಯ ಮೈತ್ರಿ ಪ್ರಣಾಳಿಕೆಯಲ್ಲಿ ಮೇಕೆದಾಟು ನಿರ್ಮಾಣದ ಅಂಶ ಸೇರಿಸುವಂತೆ ಪ್ರಧಾನಿ ನರೇಂದ್ರ ಮೋದಿಅವರಲ್ಲಿ ಸಮಾಲೋಚನೆ ಮಾಡಿದ್ದಾರೆ. ಇದರ ಬೆನ್ನಲ್ಲೇ ಮೇಕೆದಾಟು ಯೋಜನೆ ಮಾಡುವ ಆಶಯದಿಂದಲೇ ಮಂತ್ರಿಯಾಗಿದ್ದು ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ತರುತ್ತೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಅವರು ಸಹ ಹೇಳಿಕೆ ನೀಡಿದ್ದು, ಇದರ ನಡುವೆ ಮೇಕೆದಾಟು ವಿಚಾರದಲ್ಲಿ ತಮಿಳುನಾಡು ಪರ ವಾದ ಮಾಡುತ್ತಿದ್ದ ವಕೀಲರು ಸಹ ಮೇಕೆದಾಟು ಯೋಜನೆ ನಿರ್ಮಾಣಕ್ಕೆ ನಮ್ಮ ಅಭ್ಯಂತರ ಇಲ್ಲ ಎಂದು ನ್ಯಾಯಾಧೀಶರಿಗೆ ತಿಳಿಸಿದ್ದಾರೆ ಎನ್ನಲಾಗಿದ್ದು, ಈ ನಿಟ್ಟಿನಲ್ಲಿ ನಮ್ಮ ನಿರಂತರ ಹೋರಾಟಕ್ಕೆ ಫಲ ಸಿಗುವ ಕಾಲ ಬಂದಿದೆ ಎಂದರು.

ಕಕಸಜ ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಮಾತನಾಡಿ, ನಮ್ಮ ಹೋರಾಟಕ್ಕೆ ಸ್ಪಂದನೆ ಸಿಗುತ್ತಿದೆ. ಕಳೆದ ಒಂದು ವಾರದಿಂದ ಮೇಕೆದಾಟು ವಿಚಾರದಲ್ಲಿ ಎಲ್ಲೆಡೆ ಚರ್ಚೆಯಾಗುತ್ತಿದ್ದು, ತಮಿಳುನಾಡಿ ಮುಖ್ಯಮಂತ್ರಿ ಸ್ಟಾಲೀನ್ ಅವರು ಮೇಕೆದಾಟು ನಿರ್ಮಾಣಕ್ಕೆ ಅವಕಾಶ ಕೊಡುವುದಿಲ್ಲ ಎಂದು ಅವರ ಪ್ರಣಾಳಿಕೆಯಲ್ಲಿ ಸೇರಿಸಿದ ಬಗ್ಗೆ ಆತಂಕ ಉಂಟಾಗಿತ್ತು. ಆದರೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಅವರು ನಾನು ಮಂತ್ರಿ ಆಗಿರುವುದೇ ಮೇಕೆದಾಟು ನಿರ್ಮಾಣಕ್ಕಾಗಿ ಅದನ್ನು ತಪ್ಪಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದು ಹೇಳಿಕೆ ನೀಡಿದ್ದಾರೆ. ಇದರ ನಡುವೆ ರಾಜ್ಯದ ನೀರಾವರಿಗೆ ತನ್ನದೇ ಕೊಡುಗೆ ನೀಡಿರುವ ಮಾಜಿ ಪ್ರಧಾನಿ ದೇವೇಗೌಡರು ಈಗಾಗಲೆ ಮೇಕೆದಾಟು ಯೋಜನೆ ಅನುಷ್ಟಾನಕ್ಕೆ ತರುವ ನಿಟ್ಟಿನಲ್ಲಿ ಪಕ್ಷಾತೀತವಾಗಿ ಶ್ರಮಿಸೋಣ ಎಂದು ಸಂದೇಶ ನೀಡಿರುವುದು ಮೇಕೆದಾಟು ಯೋಜನೆಯ ಅನುಷ್ಠಾನದ ಕನಸು ಚಿಗುರೊಡೆದಿದೆ ಎಂದರು.

ಬರದಿಂದ ಜನ-ಜಾನುವಾರುಗಳು ಸೇರಿದಂತೆ ಪ್ರಾಣಿ ಪಕ್ಷಿಗಳಿಗೆ ನೀರಿನ ಅಭಾವ ಉಂಟಾಗಿದ್ದು ಮನೆಗಳ ಮೇಲೆ ಪ್ರಾಣಿ-ಪಕ್ಷಿಗಳಿಗೆ ನೀರನ್ನು ಇಡುವ ನಿಟ್ಟಿನಲ್ಲಿ ಮಣ್ಣಿನ ಬಟ್ಟಲುಗಳನ್ನು ನೀಡಿ ವೇದಿಕೆಯಿಂದ ಆಂದೋಲನ ಮಾಡಲಾಗಿತ್ತು. ಈ ಆಂದೋಲನಕ್ಕೆ ಸಮಾಜ ಸೇವಕರಾದ ರಾಧಿಕಾ ರವಿಕುಮಾರ್ ಗೌಡ ದಂಪತಿಗಳು ಕೈಜೋಡಿಸಿದ್ದಾರೆ. ಇದರಿಂದ ಪ್ರೇರಣೆಯಾದ ಕಂದಾಯ ಇಲಾಖೆ ನಿವೃತ್ತ ನೌಕರ ಮುಕುಂದ ಅವರು ಸಹ ತಮ್ಮ ಮನೆಯ ಮೇಲೆ ನೀರು ಇಟ್ಟಿದ್ದು, ಜೊತೆಗೆ ಪಕ್ಷಿಗಳಿಗೆ ಆಹಾರವನ್ನು ನೀಡಲು ಕಾಳುಗಳನ್ನು ಸಹ ಇಟ್ಟಿದ್ದಾರೆ. ಈ ನಿಟ್ಟಿನಲ್ಲಿ ಈ ಆಂದೋಲನ ಪಟ್ಟಣಕ್ಕೆ ಮಾತ್ರ ಸೀಮಿತವಾಗದೆ ತಾಲೂಕಿನಾದ್ಯಂತ ವಿಸ್ತರಣೆ ಆಗಬೇಕು ಎಂದರು. ಪ್ರತಿಭಟನೆಯಲ್ಲಿ ಕಕಜ ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೀಶ್‌ಗೌಡ, ರಾಜ್ಯ ಉಪಾಧ್ಯಕ್ಷರುಗಳಾದ ರಂಜಿತ್‌ಗೌಡ, ಬೆಳಕು ಶ್ರೀಧರ್, ಚಿಕ್ಕೇನಹಳ್ಳಿ ಸಿದ್ದಪ್ಪಾಜಿ, ಜಯರಾಮು, ನಿವೃತ ಶಿಕ್ಷಕ ಜಯರಾಮು, ಶ್ಯಾಮ್, ಏಸು, ಪವನ್, ಆರ್.ಶಂಕರ್. ಪಾನಿಪುರಿ ಚನ್ನಪ್ಪ, ರಾಜು ಇತರರು ಇದ್ದರು.




## ಕೈವಾರ ಯೋಗಿನಾರೇಯಣ ಯತೀಂದ್ರರ ಜಯಂತಿ ಆಚರಣೆ

# ಕೈವಾರ ತಾತಯ್ಯ ಆದರ್ಶ

**ಚಿಕ್ಕಬಳ್ಳಾಪುರ:** ಎಲ್ಲಾ ಜಾತಿ, ಮತ, ಧರ್ಮಗಳನ್ನು ಮೀರಿ ಸರ್ವರಿಗೂ ಜ್ಞಾನದ ಭಾಗ್ಯವನ್ನು ಕರುಣಿಸಿದವರು ಕೈವಾರದ ಯೋಗಿನಾರೇಯಣ ಯತೀಂದ್ರರು ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.

ಸೋಮವಾರ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಡಳಿತ ಮತ್ತು ಕನ್ನಡ ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ''ಶ್ರೀ ಕೈವಾರ ಯೋಗಿನಾರೇಯಣ ಯತೀಂದ್ರರ ಜಯಂತಿ''ಯನ್ನು ಯತೀಂದ್ರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಸಂಸಾರಿಯಾಗಿದ್ದ ಯೋಗಿ ನಾರೇಯಣರು ಜೀವನದ ಎಲ್ಲ ಹಂತಗಳ ಅನುಭವಗಳನ್ನು, ಸಮಸ್ಯೆಗಳನ್ನು ಅರಿತಿದ್ದರು. ವೃತ್ತಿಯಲ್ಲಿ ಬಳೆಗಾರರಾಗಿದ್ದು, ಅವರು ಮಹಿಳೆಯರಿಗೆ ಬಳೆ ತೊಡಿಸುವ ಕಾಯಕದ ಜೊತೆ ಜೊತೆಗೆ ಸಾಮಾಜಿಕ ಸುಧಾರಣಾ ಕಾರ್ಯದಲ್ಲಿ ತೊಡಗಿಸಿಕೊಂಡು ಜ್ಞಾನವನ್ನು ಬಿತ್ತರಿಸುವ ಕಾರ್ಯವನ್ನು ಯಶಸ್ವಿಯಾಗಿ ಮಾಡಿದರು. ಅದರಲ್ಲೂ ಬಡತನದ ಬೇಗೆಗೆ ಸಿಲುಕಿದ್ದ ಮಹಿಳೆಯರಿಗೆ ಜ್ಞಾನ ಮಾರ್ಗದ ಮೂಲಕ ಸಂಕಷ್ಟ ಪರಿಹಾರಕ್ಕೆ ನೆರವಾಗುತ್ತಿದ್ದರು. ಬಹುದಿನದ ತಪಸ್ಸಿನಿಂದ ಗಳಿಸಿದ್ದ ಅಪಾರ ಜ್ಞಾನವನ್ನು ಸಮಾಜದ ಒಳಿತಿಗೆ ಬಳಕೆ ಮಾಡಿದರು. ತಮ್ಮದೇ ಆದ ಜ್ಞಾನ ಬಂಡಾರದ ಅನುಭವದಲ್ಲಿ ಮುಂದೇನಾಗುತ್ತದೆ ಎಂಬುದನ್ನು ಅಂದೆಯೇ ತಮ್ಮ ದಿವ್ಯ ದೃಷ್ಠಿಯಿಂದ ಅರಿತು ದಾಖಲು ಮಾಡಿದ್ದಾರೆ. ಅವರು ಅಂದು ದಾಖಲು ಮಾಡಿರುವ ವಿಚಾರಗಳು ಇಂದಿನ ಪ್ರಚಲಿತ ಘಟನೆಗಳಿಗೂ ಹೋಲಿಕೆಯಾಗುತ್ತಿವೆ. ಅಂತಹ ಪ್ರಸಿದ್ಧ ಕಾಲಜ್ಞಾನಿ ತಾತಯ್ಯ ನವರ ವಿಚಾರಧಾರೆಗಳನ್ನು, ತತ್ವಾದರ್ಶಗಳನ್ನು ಎಲ್ಲರೂ ಅರಿತು ಅನುಸರಿಸಬೇಕು.



ಇಂತಹ ಸಮಾಜ ಸುಧಾರಕರ ಜಯಂತಿ ದಿನಾಚರಣೆಯನ್ನು ಇಂದು ಜಿಲ್ಲಾಡಳಿತದಿಂದ ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗಿದೆ. ಕೈವಾರದಲ್ಲಿ ಇಂದು ಇವರ ಜಯಂತೋತ್ಸವದ ಅಂಗವಾಗಿ ಹಲವು ಕಾರ್ಯಕ್ರಮಗಳು ಜರುಗುತ್ತಿವೆ. ಅದರಲ್ಲೂ ಪ್ರಸಿದ್ಧ ಸಂಗೀತ ಕಲಾವಿದರು ಇಲ್ಲಿಗೆ ಆಗಮಿಸಿ ಅವರ ಕೀರ್ತನೆಗಳನ್ನು ಹಾಡುವುದು ದೇಶದ, ರಾಜ್ಯದ ಗಮನ ಸೆಳೆದಿದೆ. ಯಾವುದೇ ವಸ್ತು, ವ್ಯಕ್ತಿಗೆ ದೊರಕದ ಮನ್ನಣೆ, ಮಹತ್ವ ಮತ್ತು ಮೌಲ್ಯ ಜ್ಞಾನಕ್ಕೆ ಲಭಿಸುತ್ತದೆ ಎಂಬುದಕ್ಕೆ ಕೈವಾರ ತಾತಯ್ಯನವರೇ ಉತ್ತಮ ನಿದರ್ಶನ ಎಂದು ಅವರು ಬಣ್ಣಿಸಿದರು.

ಅಪರಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ಅವರು ಮಾತನಾಡಿ, ಕೈವಾರ ತಾತಯ್ಯ ನವರು ''ಭಾರತದ ನೋಸ್ಟ್ರಾಡಾಮಸ್'' ಎಂದು ಖ್ಯಾತಿಯಾಗಿದ್ದಾರೆ. ಅವರ ದಿವ್ಯದೃಷ್ಠಿ ಹಾಗೂ ಅಪರ ಜ್ಞಾನದ ಅನುಭವದಿಂದ ಅಂದು ಅವರು ಊಹಿಸಿ ದಾಖಲು ಮಾಡಿರುವ ಘಟನೆಗಳು ಮತ್ತು ವಿಚಾರಗಳು ಇಂದು ಸಹ ಘಟಿಸುತ್ತಿರುವುದನ್ನು ನಾವೆಲ್ಲರೂ ಗಮನಿಸಬಹುದು. ಇಂತಹ ಕಾಲಜ್ಞಾನಿಯ, ಸಮಾಜ ಸುಧಾರಕರ ಜಯಂತಿಯನ್ನು ಈ ಬಾರಿ ಸರಳ ಮತ್ತು ಅರ್ಥ ಪೂರ್ಣವಾಗಿ ಆಚರಿಸಲಾಗುತ್ತಿದೆ. 2024ರ ಲೋಕಸಭೆ ಚುನಾವಣಾ ನಿಮಿತ್ತ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಯಂತಿ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಣೆ ಮಾಡಲು ಸಾಧ್ಯವಾಗುತ್ತಿಲ್ಲ. ಮುಂದಿನ ವರ್ಷಗಳಲ್ಲಿ ಇವರ ಜಯಂತಿಯನ್ನು ಸಂಭ್ರಮ, ಸಡಗರದೊಂದಿಗೆ ಆಚರಣೆ ಮಾಡಲಾಗುತ್ತದೆ. ಪ್ರತಿ ಹಂತದಲ್ಲೂ ಜಿಲ್ಲಾಡಳಿತದೊಂದಿಗೆ ಸಹಕಾರ ನೀಡುತ್ತಿರುವ ಸಮುದಾಯದ ಮುಖಂಡರಿಗೆ ಧನ್ಯವಾದಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಾ|| ಎನ್. ಭಾಸ್ಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಎನ್.ಮನಿಷ್, ಚುನಾವಣಾ ತಹಸೀಲ್ದಾರ್ ಮುನಿಶಾಮಿರೆಡ್ಡಿ, ಸಮುದಾಯದ ಮುಖಂಡರಾದ ನಾರಾಯಣಸ್ವಾಮಿ, ವಿಜಯ, ಚೇತನ್, ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಮುಂತಾದವರು ಇದ್ದರು.

**ವಿಜಯಪುರ;ಎಸ್. ಎಸ್.ಎಲ್.ಸಿ ಹಾಗೂ 5,8,9 ತರಗತಿಗಳಿಗೆ ಮೌಲ್ಯಾಂಕನ ಪರೀಕ್ಷೆಗಳು ಸೋಮವಾರದಿಂದ ಆರಂಭವಾಗಿರುವುದರ ನಡುವೆಯೂ ಮಕ್ಕಳು ಪರೀಕ್ಷಾ ಭಯವಿಲ್ಲದೇ, ಹೋಳಿಯ ಬಣ್ಣದೋಕುಳಿಯಲ್ಲಿ ಆಟವಾಡಿದರು.**



## ಮತ ಜಾಗೃತಿ ಮೂಡಿಸಿದ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜು

**ಮೈಸೂರು:** ನಾನು ಕಡ್ಡಾಯವಾಗಿ ಮತದಾನ ಮಾಡುವೆ, ನೀವೂ ಕಡ್ಡಾಯವಾಗಿ ಮತದಾನ ಮಾಡಿ ಎಂಬಿತ್ಯಾದಿ ಘೋಷ ವಾಕ್ಯ ಗಳ ಭಿತ್ತಿಪತ್ರ ಹಿಡಿದು ಮೈಸೂರಿನ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜು ವಿದ್ಯಾರ್ಥಿಗಳು ಮತ ಜಾಗೃತಿ ಮೂಡಿಸಿದರು. ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್ ರಾಷ್ಟ್ರೀಯ ಸೇವಾಯೋಜನೆ, ವಿಶ್ವೇಶ್ವರಯ್ಯ ತಾಂತ್ರಿಕ ಪ್ರಾದೇಶಿಕ ಕಛೇರಿ ಮತ್ತು ರಮ್ಮನಹಳ್ಳಿ ಪಟ್ಟಣ ಪಂಚಾಯತಿ ಸಹಯೋಗದೊಂದಿಗೆ ಹಂಚ್ಯಾ ಗ್ರಾಮದಲ್ಲಿ ನಡೆದ ಲೋಕಸಭಾ ಚುನಾವಣೆ ಸ್ವೀಪ್ ಕಾರ್ಯಕ್ರಮವನ್ನು ನಡೆಸಲಾಯಿತು. ಈ ವೇಳೆ ಕಾಲೇಜು ವಿದ್ಯಾರ್ಥಿಗಳು ಬೀದಿ ನಾಟಕ, ಜಾಥಾ ನಡೆಸುವ ಮೂಲಕ ಮತದಾನ ಕುರಿತು ಜಾಗೃತಿ ಮೂಡಿಸಿದರು. ಈ ವೇಳೆ ನನ್ನ ಹಕ್ಕು, ನಾನು ಕಡ್ಡಾಯವಾಗಿ ಮತದಾನ ಮಾಡುವೆ ಘೋಷಣೆ ಎಂಬಿತ್ಯಾದಿ ನಾಮಫಲಕ ಕಂಡವು. ಎನ್ ಎಸ್ ಎಸ್ ಅಧಿಕಾರಿ ಮತ್ತು ಶಿಬಿರಾಧಿಕಾರಿ ಎಸ್.ಎಂ.ಮಧುಸೂದನ, ಪಟ್ಟಣ ಪಂಚಾಯತಿ ಅಧಿಕಾರಿಗಳಾದ ರಾಮಸ್ವಾಮಿ, ಸಿದ್ದಯ್ಯ, ಚೆನ್ನನಾಯಕ ಇನ್ನಿತರರು ಇದ್ದರು.






# ಗ್ಯಾರಂಟಿ ಯೋಜನೆಗಳು ಕಾಂಗ್ರೆಸ್ ಗೆಲುವಿಗೆ ಶ್ರೀರಕ್ಷೆ

**ಮೈಸೂರು:** ಹೆಬ್ಬಾಳನ ಲೋಕ ನಾಯಕ ನಗರ ಕಾಂಗ್ರೆಸ್ ಅಭ್ಯರ್ಥಿ ಎಂ ಲಕ್ಷ್ಮಣ್ ಪರ ಬೂತ್ ಮಟ್ಟದ ಸಭೆಯಲ್ಲಿ ಮತಯಾಚನೆ ಶಾಸಕ ಕೆ ಹರೀಶ್ ಗೌಡ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿಯ ಡಿಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ನೀಡುವುದರ ಮೂಲಕ ಎಲ್ಲಾ ವರ್ಗದವರನ್ನು ಮೇಲೆತ್ತುವ ಕೆಲಸ ಮಾಡಿದೆ, ಈ ಗ್ಯಾರಂಟಿ ಯೋಜನೆಗಳೇ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಶ್ರೀ ರಕ್ಷೆಯಾಗಲಿದೆ ಎಂದು ಶಾಸಕ ಕೆ ಹರೀಶ್ ಗೌಡ ವಿಶ್ವಾಸ ವಿತ್ತಪಡಿಸಿದರು

ನಗರದ ಹೆಬ್ಬಾಳ್ ಲೋಕ ನಾಯಕ ನಗರ ದಲ್ಲಿ ಕಾಂಗ್ರೆಸ್ ಬೂತ್ ಮಟ್ಟದ ಸಭೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ ಲಕ್ಷ್ಮಣ್ ಪರ ಮತಯಾಚಿಸಿ ಮಾತನಾಡಿದವರು ರಾಜ್ಯ ಸರ್ಕಾರದ ಸಾಧನೆಗಳನ್ನು ಕ್ಷೇತ್ರದ ಮತದಾರರಿಗೆ ಮನೆ ಮನೆಗೆ ಹೋಗಿ ತಿಳಿಸುವುದರ ಮೂಲಕ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅತಿ ಹೆಚ್ಚು ಮತ ನೀಡುವುದರೊಂದಿಗೆ ನಮ್ಮ ಅಭ್ಯರ್ಥಿ ಗೆಲುವಿಗೆ ಶ್ರಮಿಸಬೇಕು ಎಂದರು. ಭಾಸ್ಕರ್ ಗೌಡ, ಮಾಜಿ ಮಹಾಪೌರರಾದ ಪ್ರಕಾಶ್, ಇಂದ್ರ ಗಾಂಧಿ ಬ್ಲಾಕ್ ಅಧ್ಯಕ್ಷರಾದ ಮಂಚೇಗೌಡನ ಕೊಪ್ಪಲು ರವಿ, ಮಾಜಿನಗರ ಪಾಲಿಕೆ ಸದಸ್ಯರಾದ ಶ್ರೀನಿವಾಸ್, ಎಪಿಎಂಸಿ ಮಾಜಿ ಅಧ್ಯಕ್ಷರಾದ ಬಸವರಾಜು, ಸ್ಥಳೀಯ ಮುಖಂಡರಾದ ಕೇಬಲ್ ಮಹೇಶ್, ವಾರ್ಡ್ ಅಧ್ಯಕ್ಷರು ನಾಗರಾಜು, ಮಾಜಿ ಸಿಂಡಿಕೇಟ್ ಸದಸ್ಯರಾದ ಗೋಪಿನಾಥ್, ವಾರ್ಡ್ ಮಹಿಳಾ ಅಧ್ಯಕ್ಷರಾದ ಕಮಲಮ್ಮ, ಹಾಗೂ ಇನ್ನಿತರ ಮುಖಂಡರುಗಳು ಹಾಜರಿದ್ದರು

# ಎಲ್ಲ ರಂಗದಲ್ಲೂ ಮಹಿಳೆಯರ ಪಾತ್ರ ಹಿರಿದು

**ಮೈಸೂರು:** ನಗರದ ಸ್ವರಲೋಕ ಸಾಂಸ್ಕೃತಿಕ ಕಲಾ ವೇದಿಕೆ ವತಿಯಿಂದ ಮೈಸೂರಿನ ಪುರಭವನದಲ್ಲಿ ವಿಶ್ವ ಮಹಿಳಾ ದಿನಾಚರಣೆ ಹಾಗೂ ಕರೋಕೆಗಾಯನ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಚಲನಚಿತ್ರ ಹಾಸ್ಯನಟಿ ಶ್ರೀಮತಿ ರೇಖಾದಾಸ್ ಅವರು ಜ್ಯೋತಿ ಬೆಳಗಿಸಿ, ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಎಲ್ಲಾ ರಂಗಗಳಲ್ಲಿಯೂ ಮಹಿಳೆಯರಿಗೆ ಸಮಾನ ಸ್ಥಾನವನ್ನು ಸರ್ಕಾರವು ಕಲ್ಪಿಸಿದೆ. ಇದು ಅತ್ಯಂತ ಹರ್ಷದಾಯಕ ಸಂಗತಿ. ಮಹಿಳೆಯು ನಾಕೂ ಕೋಣೆಗಳ ಮಧ್ಯೆಜೀವನ ನಡೆಸುತ್ತಿದ್ದ ಕಾಲವೊಂದಿತ್ತು. ಆದರೆ ಪ್ರಸ್ತುತ ದಿನಗಳಲ್ಲಿ ಎಲ್ಲಾ ರಂಗಗಳಲ್ಲಿಯೂ ಮಹಿಳೆಯರು ಹೆಚ್ಚಿನ ಸ್ಥಾನವನ್ನು ಪಡೆದಿದ್ದಾರೆ. ರಾಜಕೀಯ, ಚಲನಚಿತ್ರ, ರಂಗಭೂಮಿ, ನೌಕಾಪಡೆ, ವಾಯುಪಡೆ, ವೈದ್ಯಕೀಯ, ವಿಜ್ಞಾನ ಕ್ಷೇತ್ರಗಳಲ್ಲಿ ಹೆಣ್ಣು ಮಕ್ಕಳು ಗಣನೀಯ ಪ್ರಮಾಣದಲ್ಲಿ ಸಾಧನೆ ಮಾಡಿರುವುದು ಇದಕ್ಕೆ ಸಾಕ್ಷಿಯಾಗಿದೆ ಎಂದರು.

ಈಗಾಗಲೇ ಚಲನಚಿತ್ರ ಹಾಗೂ ರಂಗಭೂಮಿಯಲ್ಲಿ ಸ್ತ್ರೀ ಪಾತ್ರಗಳ ಅಭಿನಯದಿಂದ ಸಮಾಜದಲ್ಲಿ ಉತ್ತಮವಾದ, ಆರೋಗ್ಯಕರವಾದ ಬದಲಾವಣೆಯನ್ನು ಕಾಣುತ್ತಿದ್ದೇವೆ ಎಂದು ಅಭಿಪ್ರಾಯಪಟ್ಟರು. ಹಿಂದೆ ಚಲನಚಿತ್ರ ಮತ್ತು ರಂಗಭೂಮಿ ಕಲೆಗಳಿಗೆ ಹೆಣ್ಣು ಮಕ್ಕಳ ಅಭಿನಯಕ್ಕೆ ಸಂಖ್ಯೆ ಕಡಿಮೆ ಇರುತ್ತಿತ್ತು. ಆದರೆ ಇಂದಿನ ಸ್ಪರ್ಧಾಯುಗದಲ್ಲಿ ಪೈಪೋಟಿ ಹೆಚ್ಚಿ, ಮಹಿಳೆಯರು ಭಾಗವಹಿಸುತ್ತಿರುವುದು ಸಂತೋಷವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ತೀರ್ಪುಗಾರರಾಗಿ ಆಗಮಿಸಿದ್ದ ಹಿನ್ನೆಲೆ ಗಾಯಕಿ ಜೋಗಿ ಸುನಿತಾ ಅವರು ಮಾತನಾಡಿ, ಚಲನಚಿತ್ರ ಮತ್ತುಜಾನಪದ ಕ್ಷೇತ್ರಗಳಲ್ಲಿ ಮಹಿಳೆಯರು ಹೆಚ್ಚು ಗಾಯನ,



ಸಂಗೀತ, ನೃತ್ಯ ಕ್ಷೇತ್ರಗಳಲ್ಲಿ ಭಾಗವಹಿಸಿರುವುದು ಹೆಮ್ಮೆಯ ವಿಷಯ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸ್ವರಲೋಕ ಸಾಂಸ್ಕೃತಿಕ ವೇದಿಕೆಯ ಅಧ್ಯಕ್ಷರಾದ ಹಾಗೂ ಆಯೋಜಕರಾದ ಯಶಸ್ವಿನಿ ಲೋಕೇಶ್ವರ್ ಅವರು ಮಾತನಾಡಿ, ಕರೋಕೆ ಗೀತೆಗಳನ್ನಾಡಿದ ಗಾಯಕ, ಗಾಯಕಿಯರಿಗೆ ಶುಭ ಹಾರೈಸಿದರು.ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳೆಯರಾದ ಡಾ.ರೇಖಾ ಅರುಣ್, ನಳಿನಿ ತಮ್ಮಯ್ಯ, ಇನ್ಸ್‌ಪೆಕ್ಟರ್ ಮಮತಾ ಹಾಗೂ ಧನಲಕ್ಷ್ಮಿ, ಶುಶ್ರೂಷಕಿ ಕೆ.ಕೆ.ಯಶೋಧ, ರಂಗಭೂಮಿ ಕಲಾವಿದೆ ಮೇರಿ ವಸಂತ್, ಪ್ರಾಧ್ಯಾಪಕಿ ಪ್ರಿಯಾಂಕರವರನ್ನು ಸನ್ಮಾನಿಸಿ, ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಗೌರವ ಅಧ್ಯಕ್ಷರಾದ ಕಲಾವಿದ ಗೋಪಾಲ್‌ರಾವ್, ಉಪಾಧ್ಯಕ್ಷ ಲೋಕೇಶ್‌ಕೆ.ಎಸ್., ವಿಜಯಶ್ರೀ, ಪ್ರಧಾನ ಕಾರ್ಯದರ್ಶಿ ಪ್ರಿಯಾಎಸ್. ಕಾರ್ಯದರ್ಶಿ ಕವಿತಾ, ಖಜಾಂಚಿಅಂಕಿತಾ, ಸಂಘಟನಾ ಕಾರ್ಯದರ್ಶಿ ಶಿವರಾಜ್ ಸಿ.ಎಸ್. ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೆ 153ಕ್ಕೂ ಹೆಚ್ಚು ವಿವಿಧ ಜಿಲ್ಲೆಗಳಿಂದ ಗಾಯಕ, ಗಾಯಕಿಯರು ಕರೋಕೆ ಗಾಯನದಲ್ಲಿ ಭಾಗವಹಿಸಿದ್ದರು.

# ಯುವಜನತೆ ಹೆಚ್ಚು ರಾಜಕೀಯಕ್ಕೆ ಬರಲಿ




**ಮೈಸೂರು:** ಹೆಚ್ಚಿನ ಸಂಖ್ಯೆಯಲ್ಲಿ ಯುವ ಸಮೂಹ ರಾಜಕೀಯಕ್ಕೆ ಬರಬೇಕಿದೆ ಎಂದು ರಾಷ್ಟ್ರೀಯ ಯುವಜನ ಸಬಲೀಕರಣ ಇಲಾಖೆ ಪ್ರಾದೇಶಿಕ ನಿರ್ದೇಶಕ ಎಂ.ಎನ್.ನಟರಾಜ್ ಹೇಳಿದರು.

ಮೈಸೂರಿನ ನೆಹರು ಯುವಕೇಂದ್ರ, ಶೇಷಾದ್ರಿ ಪುರಂ ಪದವಿ ಪೂರ್ವ ಕಾಲೇಜು ಮೇಟಗಳ್ಳಿ ರಾಷ್ಟ್ರೀಯ ಸೇವಾ ಯೋಜನಾ ಕೇಂದ್ರವು ಜಿಲ್ಲಾ ಮಟ್ಟದ ಯೂತ್ ಪಾರ್ಲಿಮೆಂಟ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇಂದು ಲೋಕಸಭಾ ಚುನಾವಣಾ ಸಮಯ ಮಹಿಳೆಯರಿಗೆ ಹೆಚ್ಚಿನ ಪ್ರಾತಿನಿಧ್ಯ ಸಿಗಬೇಕಿದೆ. ನೀವೂ ಸುಭದ್ರ ಭಾರತಕ್ಕೆ ಜಾಗೃತಿಯಿಂದ ಮತದಾನ ಮಾಡಬೇಕಿದೆ. ಜತೆಗೆ ನಾಯಕತ್ವ ಗುಣಗಳನ್ನು ಬೆಳೆಸಿಕೊಂಡು ಹೆಚ್ಚಿನ ಮಂದಿ ರಾಜಕೀಯಕ್ಕೆ ಬರುವ ಮೂಲಕ ಜನಸೇವೆಯಲ್ಲಿ ತೊಡಗಿಸಿಕೊಳ್ಳಿ ಎಂದು ಹೇಳಿದರು. ಸ್ವೀಪ್ ಜಿಲ್ಲಾ ಮಟ್ಟದ ಅಧಿಕಾರಿ ರೇಖಾ ಜೆ.ಶೆಟ್ಟಿ ಅವರು ಚುನಾವಣಾ ನೀತಿ ವಿಧಿ ಬೋಧನೆ ಮಾಡಿದರು. ಜತೆಗೆ ಪ್ರತಿಯೊಬ್ಬರು ಮತದಾನದಲ್ಲಿ ಪಾಲ್ಗೊಳ್ಳಬೇಕು. ಮತದಾನ ಹಾಗೂ ಚುನಾವಣೆ ಎಂಬುದು ಪ್ರಜಾಪ್ರಭುತ್ವದ ಹಬ್ಬವಾಗಿದೆ. ಇದರಲ್ಲಿ ಸಂತಸದಿಂದ ಪಾಲ್ಗೊಳ್ಳಬೇಕಾದುದು ಪ್ರತಿಯೊಬ್ಬರ ಕರ್ತವ್ಯ ಎಂದು ತಿಳಿಸಿದರು. ಜಿಲ್ಲಾ ಯುವಜನ ಅಧಿಕಾರಿ ಅಭಿಷೇಕ್ ಚಾವರೆ, ಎನ್ ವೈಕೆಎಸ್ ಲೆಕ್ಕಾಧಿಕಾರಿ ಸತೀಶ್ ಪಡೋಳ, ತಾಲ್ಲೂಕು ಸಂಯೋಜನಾಧಿಕಾರಿ ಲಕ್ಷ್ಮಿಕಾಂತ್, ಕೃಪಲಾನಿ, ಇಂಗ್ಲಿಷ್ ಪ್ರಾಧ್ಯಾಪಕ ಯೋಗೇಶ್, ಶೇಷಾದ್ರಿ ಪುರಂ ಪದವಿ ಪೂರ್ವ ಮೇಟಗಳ್ಳಿ ಕಾಲೇಜು ಪ್ರಾಂಶುಪಾಲ ಡಾ.ಕೆ.ಸೌಮ್ಯ ಈರಪ್ಪ, ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾಧಿಕಾರಿ ಆರ್.ರಾಘವೇಂದ್ರ ಇದ್ದರು.

## ಅಂಬೇಡ್ಕರ್, ಬಾಬು ಜಗಜೀವನ್ ರಾಂ ಜಯಂತಿ

**ಮಂಡ್ಯ:** ಜಿಲ್ಲೆಯಲ್ಲಿ ಅರ್ಥಪೂರ್ಣವಾಗಿ ಏಪ್ರಿಲ್ 14 ರಂದು ಡಾ: ಬಿ.ಆರ್ ಅಂಬೇಡ್ಕರ್ ಹಾಗೂ ಏಪ್ರಿಲ್ 5 ರಂದು ಡಾ: ಬಾಬು ಜಗಜೀವನ್ ರಾಂ ಜಯಂತಿ ಆಚರಣೆಗೆ ಮಾಡಲು ಇಂದು ಜಿಲ್ಲಾಧಿಕಾರಿ ಡಾ; ಕುಮಾರ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ನಿರ್ಧಾರಿಸಲಾಯಿತು.

ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು ಡಾ: ಬಾಬು ಜಗಜೀವನ್ ರಾಂ ಹಾಗೂ ಡಾ: ಬಿ.ಆರ್.ಅಂಬೇಡ್ಕರ್ ಅವರುಗಳು ಸಮಾಜಕ್ಕೆ ಅಪಾರವಾದ ಕೊಡುಗೆ ನೀಡಿದ್ದಾರೆ. ಅವರುಗಳ ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಬೇಕು ಎಂದರು. ಇಬ್ಬರೂ ಮಹನೀಯರು ನೀಡಿರುವ ತತ್ವ ಹಾಗೂ ಆದರ್ಶಗಳು ಪ್ರತಿಯೊಬ್ಬರಿಗೂ ದಾರಿದೀಪ. ಅವರ ಚಿಂತನೆಗಳನ್ನು ಎಲ್ಲರಿಗೂ ತಿಳಿಸಬೇಕು ಎಂದರು.



ಏಪ್ರಿಲ್ 5 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದ ಪಾರ್ಕ್9ನಲ್ಲಿರುವ ಬಾಬೂ ಜಗಜೀವನ್ ರಾಂ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಸಭಾ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆಸಲಾಗುವುದು ಎಂದರು. ಏಪ್ರಿಲ್ 14 ರಂದು ಬೆಳಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದ ಪಾರ್ಕ್9ನಲ್ಲಿರುವ ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಅದೇ ಸ್ಥಳದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗುವುದು. ಅಪರ ಜಿಲ್ಲಾಧಿಕಾರಿ ಡಾ: ಹೆಚ್.ಎಲ್ ನಾಗರಾಜು ಅವರು ಉಪನ್ಯಾಸ ನೀಡಲಿದ್ದಾರೆ. ಹಾಜರಾತಿ ಕಡ್ಡಾಯ ಈ ಎರಡು ಜಯಂತಿಗಳಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಭಾಗವಹಿಸಬೇಕು. ಚುನಾವಣಾ ಕೆಲಸಕ್ಕೆ ಮಾತ್ರ ವಿನಾಯಿತಿ ಇರುತ್ತದೆ ಎಂದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಸಿದ್ದಲಿಂಗೇಶ್, ಹಾಗೂ ವಿವಿಧ ಮುಖಂಡರುಗಳು ಉಪಸ್ಥಿತರಿದ್ದರು.

## ಜಿ.ಕೆಬ್ಬಳಿಯಲ್ಲಿ ಅಗ್ನಿ ಅವಘಡ: ಜಿಲ್ಲಾಧಿಕಾರಿಗಳಿಂದ ಪರಿಶೀಲನೆ

**ಮಂಡ್ಯ:** ಮಂಡ್ಯ ತಾಲ್ಲೂಕಿನ ಕೆರಗೋಡು ಹೋಬಳಿಯ ಜಿ ಕೆಬ್ಬಳಿಯ ಆಲೆಮಾನೆಯಲ್ಲಿ ಪಟಾಕಿ ಸಿಡಿಮದ್ದಿನ ಅಗ್ನಿ ಅವಘಡದಿಂದ 45 ವರ್ಷದ ವ್ಯಕ್ತಿ ಮೃತಪಟ್ಟಿದ್ದು, 55 ವರ್ಷದ ವ್ಯಕ್ತಿಗೆ ಶೇ 35 ರಷ್ಟು ಗಾಯಗೊಂಡಿರುತ್ತಾರೆ ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗಾಯಾಳು ವ್ಯಕ್ತಿಯು ಮಿಮ್ಸ್ ನಲ್ಲಿ ಚಿಕಿತ್ಸೆಗೆ ಒಳಪಟ್ಟಿರುತ್ತಾರೆ ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್ ಅವರು ಉಪಸ್ಥಿತರಿದ್ದರು. ಘಟನಾ ಸ್ಥಳಕ್ಕೆ ಪಿ.ಎಸ್ ಜಯರಾಮಯ್ಯ ಮುಖ್ಯ ಅಗ್ನಿಶಾಮಕ ಅಧಿಕಾರಿ ಮೈಸೂರು ಪ್ರಾಂತ್ಯ, ಪಿ ಚಂದನ್ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿ ಮೈಸೂರು ವಲಯ, ಸ್ಥಳಕ್ಕೆ ಆಗಮಿಸಿ ಸ್ಥಳ ಪರಿಶೀಲನೆ ನಡೆಸಿರುತ್ತಾರೆ. ರಾಘವೇಂದ್ರ ಬಿ ಎಂ ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಮಂಡ್ಯ ಜಿಲ್ಲೆ. ಶ್ರೀ ವೆಂಕಟೇಶ್ ಅಗ್ನಿಶಾಮಕ ಠಾಣಾಧಿಕಾರಿ ಮಂಡ್ಯ, ಹಾಗೂ ಅಧಿಕಾರಿ ಸಿಬ್ಬಂದಿಯವರು ಕಾರ್ಯಾಚರಣೆಯಲ್ಲಿ ಭಾಗವಹಿಸಿ ಬೆಂಕಿಯನ್ನು ಸಂಪೂರ್ಣ ನಂದಿಸಿರುತ್ತಾರೆ.



## ಚುನಾವಣಾ ರಾಯಭಾರಿಗಳ ನೇಮಕ

ಮೈಸೂರು: ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಸಂಬಂಧ ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಚುನಾವಣಾ ಭಾಗವಹಿಸುವಿಕೆ (ಸ್ವೀಪ್) ಅಡಿಯಲ್ಲಿ ಮತದಾರರಲ್ಲಿ ಮತದಾನ ಮಾಡುವ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ಮೈಸೂರು ಜಿಲ್ಲೆಯ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ವ್ಯಕ್ತಿಗಳನ್ನು ಮುಖ್ಯ ಚುನಾವಣಾಧಿಕಾರಿಗಳು ರಾಯಭಾರಿಗಳನ್ನಾಗಿ ಆಯ್ಕೆ ಮಾಡಿರುತ್ತಾರೆ. ಅದರಂತೆ ಮಾಡೆಲಿಂಗ್ ಕ್ಷೇತ್ರದ ತನಿಷ್ಕಾ ಮೂರ್ತಿ, ಅಂತಾರಾಷ್ಟ್ರೀಯ ವನ್ಯಜೀವಿ ಛಾಯಚಿತ್ರಗಾರರಾದ ಬಿ.ಎಸ್.ಕೃಪಾಕರ್ ಹಾಗೂ ಕೆ.ಸೇನಾನಿ ಅವರನ್ನು ಚುನಾವಣಾ ರಾಯಭಾರಿಗಳನ್ನಾಗಿ ಆಯ್ಕೆ ಮಾಡಲಾಗಿದ್ದು, ಇವರು ಜಿಲ್ಲಾಡಳಿತದ ವತಿಯಿಂದ ಕೈಗೊಳ್ಳುವ ಮತದಾನ ಜಾಗೃತಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಮತದಾರರಲ್ಲಿ ಅರಿವು ಮೂಡಿಸಲು ಜಿಲ್ಲಾಡಳಿತದೊಂದಿಗೆ ಕೈಜೋಡಿಸಲಿದ್ದಾರೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಕೆ.ಎಂ.ಗಾಯತ್ರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹಿರಂಗ ಹರಾಜು ಪ್ರಕಟಣೆ

**ಮಂಡ್ಯ:** ಮಳವಳ್ಳಿ ಸ್ವಾರ್ಕ್‌ನಲ್ಲಿ ಹಳೆಯ ನಿರುಪಯುಕ್ತ ಕಂಪ್ಯೂಟರ್‌ಗಳು ಹಾಗೂ ಇತರೆ ಪರಿಕರಗಳನ್ನು ಮಾರ್ಚ್ 26 ರಂದು ಬೆಳಗ್ಗೆ 11 ಗಂಟೆಗೆ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುತ್ತದೆ. ಸದರಿ ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಇಚ್ಛೆಯುಳ್ಳ ಅರ್ಹ ಬಿಡ್ಡುದಾರರು ಮಾರ್ಚ್ 26 ರಂದು ಬೆಳಗ್ಗೆ 11 ಗಂಟೆಗೆ ಬಹಿರಂಗ ಹರಾಜಿನಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08231-200112, 9844943747 ನ್ನು ಸಂಪರ್ಕಿಸಬಹುದು ಎಂದು ಮಳವಳ್ಳಿ ರಾಜ್ಯ ತರಭೇತಿ ಮತ್ತು ಸಂಶೋಧನಾ ಕೇಂದ್ರ, ಜಂಟಿ ನಿರ್ದೇಶಕರು ತಿಳಿಸಿರುತ್ತಾರೆ.



**ಪರೀಕ್ಷೆ ಪರಿಶೀಲನೆ**

ಮಂಡ್ಯ ಜಿಲ್ಲೆಯ 62 ಪರೀಕ್ಷಾ ಕೇಂದ್ರಗಳಲ್ಲಿ ಎಸ್.ಎಸ್.ಎಲ್. ಸಿ ಪರೀಕ್ಷೆ ನಡೆಯುತ್ತಿದ್ದು, ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಶ್ರೀ ಲಕ್ಷ್ಮಿ ಜನಾರ್ಧನ ಶಿಕ್ಷಣ ಟ್ರಸ್ಟ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಪರೀಕ್ಷಾ ಕೇಂದ್ರದಲ್ಲಿ ಮೂಲಭೂತ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್ ಉಪಸ್ಥಿತರಿದ್ದರು.

## ಯೋಗಿನಾರೇಯಣ ಯತೀಂದ್ರರ ಜಯಂತ್ಯುತ್ಸವ

**ಕೋಲಾರ:** ನಗರದ ಶ್ರೀ ಟಿ ಚನ್ನಯ್ಯ ರಂಗ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೋಲಾರ ಇವರ ಸಹಯೋಗದೊಂದಿಗೆ ಶ್ರೀ ಯೋಗಿನಾರಾಯಣ ಯಾತಿಂದ್ರರ ಜಯಂತೋತ್ಸವ ಕಾರ್ಯಕ್ರಮ ನಡೆಯಿತು.

ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ವಕೀಲ ಶ್ರೀನಿವಾಸ್ ಕೈವಾರ ನಾರಾಯಣ ತಾತಯ್ಯನವರ ಜಯಂತಿಗೆ ಲೋಕಸಭೆ ಚುನಾವಣೆಯ ನೀತಿ ಸಂಹಿತೆಯ ಕಾರಣದ ಹಿನ್ನೆಲೆ ಸರಳ ರೀತಿಯಲ್ಲಿ ಆಚರಣೆ ಮಾಡಲಾಗಿದೆ ಇನ್ನು ಮುಂದಿನ ವರ್ಷದಲ್ಲಿ ಹೆಚ್ಚಿನ ಜನಸಂಖ್ಯೆಲ್ಲಿ ಸಮುದಾಯದವರನ್ನು ಸೇರಿಸಿ ಕಾರ್ಯಕ್ರಮ ಮಾಡುವ ಜೊತೆಯಲ್ಲಿ ಸಮುದಾಯದ ಉಪ ಜಾತಿಗಳನ್ನು ಜನಾಂಗದ ವ್ಯಕ್ತಿಗಳು ಹೇಳುವ ಬದಲಿಗೆ ದಾಖಲಾತಿಗಳಲ್ಲಿ ಮೂಲ ಬಲಿಜ ಎಂದು ನಮೂದಿಸಲು ಕಾರ್ಯವನ್ನು ಬೆಳಸಿಕೊಳ್ಳಬೇಕೆಂದು ಕಿವಿ ಮಾತು ಹೇಳಿದರು, ಕೆ ಎಸ್ ಆರ್ ಟಿ ಸಿ ಬಲಿಜ ಸಂಘದ ಜಿಲ್ಲಾದ್ಯಕ್ಷರಾದ ಪ್ರಸಾದ್ ಮಾತನಾಡಿ ಸಮಾಜದಲ್ಲಿ ಕೈವಾರ ತಾತಯ್ಯನವರು ಕೇವಲ ಬಲಿಜ ಸಮುದಾಯಕ್ಕೆ ಮಾತ್ರ ಸೀಮಿತವಲ್ಲ ಅವರು ದೇಶಕ್ಕೆ ಮಾದಯಾಗಿದ್ದಾರೆ ಇವರ ತತ್ವ ಪದಗಳು ವಿಶ್ವಕ್ಕೆ ಮಾದರಿಯಾಗಿದೆ ಇಷ್ಟೇ ಅಲ್ಲದೆ ಇವರು ರಚಿಸಿರುವ ಕಾಲಜ್ಞಾನ ಎಲ್ಲಾ



ಭಾಷೆಗಳಲ್ಲೂ ಮುದ್ರಿತವಾಗಿದೆ ಆದ್ದರಿಂದ ಜನರು ಜೀವನದಲ್ಲಿ ಕೈವಾರ ತಾತಯ್ಯನವರ ಕೀರ್ತನೆಗಳನ್ನು ಮತ್ತು ತತ್ವಗಳನ್ನು ಅಳವಡಿಕೊಂಡು ಎಲ್ಲರೂ ಒಂದೇ ಎಂಬ ಸಂದೇಶದೊಂದಿಗೆ ಉತ್ತಮ ಸಮಾಜದ ಕಡೆ ಸಾಗೋಣ ಎಂದರು. ಇದೇ ಸಂದರ್ಭದಲ್ಲಿ ಸಹಾಯಕ ನಿರ್ದೇಶಕಿ ಗೀತಾರವರನ್ನು ಸಮಾಜದ ವತಿಯಿಂದ ಸನ್ಮಾನಿಸಲಾಯಿತು ಸನ್ಮಾನ ಸ್ವೀಕರಿಸಿ ಮಾತನಾಡಿದ ಗೀತಾರವರು ತಾತಯ್ಯನವರ ಬಗ್ಗೆ ಇನ್ನೂ ಸಾಕಷ್ಟು ಅಧ್ಯಯನಗಳ ಅವಶ್ಯಕತೆಯಿದ್ದು ಇವರ ಬಗ್ಗೆ ತಿಳಿಯುವುದು ಸಾಕಷ್ಟಿದೆಕೈವಾರ ತಾತಯ್ಯನವರು ಭಕ್ತಿ ಜ್ಞಾನ ತತ್ವ ಯೋಗ ಧ್ಯಾನ ಸಾಧಕರಾಗಿ ಧರ್ಮ ರಕ್ಷಣೆಗಾಗಿ ಶ್ರಮಿಸಿದರು, ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ ಇಡೀ ವಿಶ್ವಕ್ಕೆ ಆಧ್ಯಾತ್ಮಿಕ ಸಂದೇಶ ಸಾರಿದ ಕಾಲ ಜ್ಞಾನಿ, ಅವರು ನೀಡಿದ ಉಪದೇಶ ಪ್ರತಿಯೊಬ್ಬ ವ್ಯಕ್ತಿಗೆ ಸನ್ಮಾರ್ಗದ ಪಥವಾಗಬೇಕು ಎಂದರು . ಜಿಲ್ಲಾಅಧ್ಯಕ್ಷರು ರಘು (ಚಿಟ್ಟಿ ), ಸುರೇಶ ಎಸ್, ರಾಜೇಶ್ ಸಿ ಟಿ ಓ, ವೆಂಕಟಸ್ವಾಮಿ,ಪುಸ್ತಿ ನಾರಾಯಣಸ್ವಾಮಿ,ರಮೇಶ್ ,ಮಂಜು ಎಂ ,ಜಿ ಮಹೇಶ್ ಬಾಬು, ಬಾಲಾಜಿ, ಕೆ ವಿ ರುಕ್ಮಾಂಗದ, ಕಿಟ್ಟಣ್ಣ,, ರವೀಂದ್ರ, ಚಲಪತಿ,ಗೋವರ್ಧನ್ ,ಮುಂತಾದ ಸಮಾಜದ ಮುಖಂಡರು ಭಾಗವಸಿದ್ದರು.

**ಮುಖ್ಯವಾಹಿನಿಯತ್ತ ಗಮನ**

## ಗುಡ್ಡಗಾಡು ಮಕ್ಕಳಲ್ಲಿ ಶಿಕ್ಷಣದ ಅರಿವು

**ಚಾಮರಾಜನಗರ:** ಒಬ್ಬ ಹುಡುಗ ಕೋವಿಡ್ ಸಂದರ್ಭದಲ್ಲಿ 8ನೇ ತರಗತಿಗೇ ಶಾಲೆ ಬಿಟ್ಟ.. ಮತ್ತೊಬ್ಬ ಬಾಲಕ ಮನೆಯಲ್ಲಿ ಆರ್ಥಿಕ ಪರಿಸ್ಥಿತಿ ಚೆನ್ನಾಗಿಲ್ಲದೆ 9ನೇ ತರಗತಿಗೆ ಓದು ನಿಲ್ಲಿಸಿ ಕೂಲಿ ಕೆಲಸಕ್ಕೆ ಹೋಗುತ್ತಿದ್ದ..ಇನ್ನೊಬ್ಬಳು ಹುಡುಗಿ ಓದಿನಲ್ಲಿ ಆಸಕ್ತಿ ಕಳೆದುಕೊಂಡು ಮನೆಯಲ್ಲೇ ಇದ್ದಳು..

ಹೀಗೆ ವಿವಿಧ ಕಾರಣಗಳಿಂದ ವಿದ್ಯಾಭ್ಯಾಸ ಮೊಟಕುಗೊಳಿಸಿಕೊಂಡಿರುವ ಸೋಲಿಗ, ಜೇನು ಕುರುಬ, ಬೆಟ್ಟ ಕುರುಬ ಸಮಾಜದ 30 ಜನ ಕಾಡಿನ ಮಕ್ಕಳನ್ನು ಹುಡುಕಿ ರಾಜ್ಯದಲ್ಲೇ ಮೊದಲ ಬಾರಿಗೆ ತರಬೇತಿ ನೀಡಿ ಸೋಮವಾರದಿಂದ ಆರಂಭವಾದ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಸಲಾಗುತ್ತಿದೆ.

ಚಾಮರಾಜನಗರ ಜಿಲ್ಲಾ ಪಂಚಾಯಿತಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಇಂತಹದ್ದೊಂದು ಮಹತ್ವದ ಕಾರ್ಯ ಮಾಡುತ್ತಿದೆ. ಜಿಲ್ಲಾಧಿಕಾರಿ ಕೆ.ಟಿ. ಶಿಲ್ಪಾನಾಗ್ ಸೂಚನೆ ಮೇರೆಗೆ ಜಿಲ್ಲೆಯ ಹಾಡಿಗಳಲ್ಲಿ ಶಾಲೆ ಬಿಟ್ಟು ಮನೆಯಲ್ಲಿರುವ ಮಕ್ಕಳ ಮಾಹಿತಿಯನ್ನು ಕಲೆ ಹಾಕಲಾಯಿತು. ಇವರಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯಬೇಕಾದ 8 ಹೆಣ್ಣು ಮಕ್ಕಳು, 22 ಗಂಡು ಮಕ್ಕಳನ್ನು ಗುರುತಿಸಲಾಯಿತು. ಮನೆಯಲ್ಲಿ ಶೈಕ್ಷಣಿಕ ವಾತಾವರಣ ಇಲ್ಲದ ಹಿನ್ನೆಲೆಯಲ್ಲಿ ಈ ಮಕ್ಕಳಿಗೆ ಮೂರು ತಿಂಗಳು ವಸತಿ ಶಾಲೆಗಳಲ್ಲಿ ಇರಿಸಲಾಗಿತ್ತು. ಇಬ್ಬರು ವಿದ್ಯಾರ್ಥಿಗಳು ಮನೆಯಲ್ಲೇ ಓದಿ ಪರೀಕ್ಷೆ ಬರೆಯಲು ತೀರ್ಮಾನಿಸಿದರು. ಉಳಿದ 28 ವಿದ್ಯಾರ್ಥಿಗಳಿಗೆ 2023ರ ಡಿ.1ರಿಂದ 2024ರ ಮಾ.22ರವರೆಗೆ ರೋಟರಿ ಪಂಚಶೀಲ ಸಹಯೋಗದಲ್ಲಿ ವಿಶೇಷ ಪುನಶ್ಚೇತನಾ ಶಿಬಿರದಲ್ಲಿ ತರಬೇತಿ ನೀಡಿ ಮಾ.25ರಿಂದ ಶುರುವಾಗಲಿರುವ ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ಕಳುಹಿಸಲಾಗುತ್ತಿದೆ.

ಓದಿನ ಕಡೆ ಆಸಕ್ತಿ ಬೆಳೆಸುವ ಸವಾಲು.. ಶಾಲೆ ಬಿಟ್ಟಿದ್ದ 30 ಜನ ಕಾಡಿನ ಮಕ್ಕಳಿಗೆ ಓದಿನ ಕಡೆ ಆಸಕ್ತಿ ಬೆಳೆಸುವುದು ದೊಡ್ಡ ಸವಾಲಾಗಿತ್ತು ಎಂದು ಅಧಿಕಾರಿಗಳು ಹೇಳುತ್ತಾರೆ. ತಾಲೂಕಿನ ಹರದನಹಳ್ಳಿಯ ಪರಿಶಿಷ್ಟ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ ಮಕ್ಕಳಿಗೆ ತರಬೇತಿ ನೀಡಲಾಯಿತು. ಶಾಲೆ ಬಿಟ್ಟು ಮನೆಯಲ್ಲೇ ಇದ್ದವರು, ಕೆಲಸಕ್ಕೆ ಹೋಗುತ್ತಿದ್ದ ವಿದ್ಯಾರ್ಥಿಗಳನ್ನು ಶಾಲಾ ವಾತಾವರಣಕ್ಕೆ ಒಗ್ಗಿಸಲು ಸಿನಿಮಾ ತೋರಿಸುವುದು, ಪ್ರವಾಸಕ್ಕೆ ಕರೆದುಕೊಂಡು ಹೋಗುವುದು, ಕ್ರೀಡಾಕೂಟ ಆಯೋಜಿಸುವುದು ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಮಾಡಲಾಯಿತು. ಇದರೊಂದಿಗೆ 28 ವಿದ್ಯಾರ್ಥಿಗಳಿಗೆ ಶಿಕ್ಷಣ ಇಲಾಖೆಯ 26 ಶಿಕ್ಷಕರು ಪಾಠ ಮಾಡಿದರು. ವಿವಿಧ ಹಂತಗಳಲ್ಲಿ ಪರೀಕ್ಷೆಗಳನ್ನು ನೀಡಿ ಎಸ್ಸೆಸ್ಸೆಲ್ಸಿ ಮುಖ್ಯ ಪರೀಕ್ಷೆಗೆ ಸಜ್ಜುಗೊಳಿಸಲಾಗಿದೆ. ಮಾ.22ರಂದು ಮಕ್ಕಳಿಗೆ ವಸತಿ ಶಾಲೆಯಿಂದ ಬೀಳ್ಕೊಡುಗೆ ನೀಡಲಾಗಿದೆ. ವಿದ್ಯಾರ್ಥಿಗಳು ಈಗ ಪರೀಕ್ಷೆ ಬರೆಯಬೇಕಾದ ಕೇಂದ್ರಗಳ ಸಮೀಪದಲ್ಲಿರುವ ವಸತಿ ಶಾಲೆಗಳಲ್ಲಿ ಇದ್ದಾರೆ. ಇಲ್ಲಿಂದಲೇ ಪರೀಕ್ಷಾ ಕೇಂದ್ರಗಳಿಗೆ ತೆರಳಲಿದ್ದಾರೆ.

### ಏನಂತಾರೆ ಕಾಡಿನ ಮಕ್ಕಳು..

**ನನ್ನ ಮನೆಯಲ್ಲಿ ಆರ್ಥಿಕ ಸಮಸ್ಯೆ ಇತ್ತು. ಓದಿನ ಕಡೆ ಆಸಕ್ತಿಯೂ ಇರಲಿಲ್ಲ. ಈ ಕಾರಣಕ್ಕೆ ನಾನು 9ನೇ ತರಗತಿಗೆ ದಾಖಲಾದ ಬಳಿಕ ಶಾಲೆಗೆ ಹೋಗಲೇ ಇಲ್ಲ. ಊರಲ್ಲೇ ಸಣ್ಣಪುಟ್ಟ ಕೆಲಸ ಮಾಡಿಕೊಂಡು ಇದ್ದೆ. ಈಗ ಅಧಿಕಾರಿಗಳು ನನಗೆ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಸುತ್ತಿದ್ದಾರೆ ಎಂದು ಜೀರಿಗೆಗದ್ದೆಯ ಮಾದೇಶ್ ಹೇಳಿದ್ದಾನೆ. ವಿಜಯವಾಣಿಯೊಂದಿಗೆ ಮಾತನಾಡಿರುವ ಮಾದೇಶ್, ಪರೀಕ್ಷೆಗೆ ತಯಾರಿ ನಡೆಸಲು ಮೂರು ತಿಂಗಳು ತರಬೇತಿ ನೀಡಿದ್ದಾರೆ. ಈಗ ನನಗೆ ಓದುವ ಆಸಕ್ತಿ ಬಂದಿದೆ. ಮುಂದೆ ವಿದ್ಯಾಭ್ಯಾಸ ಮುಂದುವರೆಸುತ್ತೇನೆ ಎಂದಿದ್ದಾರೆ. ಗಾಣಿಗಮಂಗಲ ಗ್ರಾಮದ ಮನೋಜ್ಕುಮಾರ್ ಮಾತನಾಡಿ, ನಾನು 8ನೆ ತರಗತಿ ಓದುವಾಗ ಕೋವಿಡ್ ಸೋಂಕು ಉಲ್ಬಣಿಸಿತು. ಹೀಗಾಗಿ ಶಾಲೆಗೆ ಹೋಗುವುದನ್ನು ಬಿಟ್ಟೆ. ಮನೆಯಲ್ಲಿ ಹಣಕಾಸು ಸಮಸ್ಯೆ ಇದ್ದಿದ್ದರಿಂದ ಬೇಕರಿ ಕೆಲಸಕ್ಕೆ ಹೋಗುತ್ತಿದ್ದೆ ಎಂದು ಹೇಳಿದ್ದಾನೆ.**

### ಶಿಕ್ಷಣ ವಂಚಿತರೇ ಹೆಚ್ಚು

**ಜಿಲ್ಲೆಯ ಕಾಡುಗಳಲ್ಲಿ ವಾಸವಿರುವ ಸೋಲಿಗ ಸಮುದಾಯದ ಯುವಕ-ಯುವತಿಯರಲ್ಲಿ ಶಿಕ್ಷಣ ವಂಚಿತರೇ ಹೆಚ್ಚಾಗಿದ್ದಾರೆ. ಎಸ್ಸೆಸ್ಸೆಲ್ಸಿ, ಪಿಯುಸಿ ಅರ್ಧಕ್ಕೆ ಬಿಟ್ಟು ಹಾಡಿಗಳಲ್ಲಿ ವಾಸವಿರುವ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ. ಈ ಯುವಕರಿಗೆ ಮುಂದಿನ ಭವಿಷ್ಯದ ಅರಿವಿಲ್ಲ. ತಂದೆ-ತಾಯಿ ಮಾಡುತ್ತಿರುವ ಕೂಲಿಯನ್ನೇ ಇವರೂ ಮುಂದುವರೆಸುತ್ತಿದ್ದಾರೆ. ಹಾಡಿಗಳಲ್ಲಿ ಅಕ್ರಮ ಮದ್ಯದ ಎಗ್ಗಿಲ್ಲದೆ ನಡೆಯುತ್ತಿರುವುದರಿಂದ ಮುಂದಿನ ದಿನಗಳಲ್ಲಿ ಕುಡಿತದ ಚಟಕ್ಕೆ ದಾಸರಾಗುವ ಸಾಧ್ಯತೆಗಳೂ ಇವೆ. ಬಿಆರ್ಟಿ ಹುಲಿ ಸಂರಕ್ಷಿತಾರಣ್ಯಾಧಿಕಾರಿಯಾಗಿದ್ದ ಸಂತೋಷ್ಕುಮಾರ್ ಅವರು ಹಾಡಿಗಳಲ್ಲಿರುವ ನಿರುದ್ಯೋಗಿ ಯುವಕರಿಗೆ ಲಂಟಾನದಿಂದ ಆನೆಗಳು ಮತ್ತು ಇತರೆ ಕಲಾಕೃತಿಗಳನ್ನು ತಯಾರು ಮಾಡುವುದನ್ನು ಕಲಿಸಿದ್ದರು.**

> **10ನೇ ತರಗತಿ ಪರೀಕ್ಷೆಯಲ್ಲಿ ಎರಡು ವಿಷಯ ಅನುತ್ತೀರ್ಣನಾಗಿದ್ದೆ. ಬಳಿಕ ತಮಿಳುನಾಡಿಗೆ ಹೋಗಿ ಸ್ಟಿಕ್ಕರ್ ಕಟ್ಟಿಂಗ್ ಕೆಲಸ ಮಾಡುತ್ತಿದ್ದೆ. 6 ವರ್ಷಗಳ ಬಳಿಕ ಈಗ ಮತ್ತೆ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯುತ್ತಿದ್ದೇನೆ. ನನ್ನ ತಮ್ಮ ಪದವಿ ಓದುತ್ತಿದ್ದಾನೆ. ನಾನು ಈಗ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯುತ್ತಿದ್ದೇನೆ ಎಂದಿದ್ದಾನೆ.**
>
> **ಪ್ರಶಾಂತ್** ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿ

## ರೈತರಿಗೆ ಬರ ಪರಿಹಾರ ನೀಡುವಂತೆ ಒತ್ತಾಯ

**ಮಂಡ್ಯ :** ಕಾವೇರಿ ನೀರನ್ನು ಕಾಲುವೆ ಗಳಿಗೆ ಹರಿಸಿ, ರೈತರಿಗೆ ಬರ ಪರಿಹಾರ ನೀಡುವಂತೆ ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತರು ಮಂಡ್ಯದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದರು.

ನಗರದ ಸರ್ ಎಂ ವಿ ಪ್ರತಿಮೆ ಎದುರಿನಿಂದ ಮೆರವಣಿಗೆ ಹೊರಟು ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ರವಾನಿಸಿದರು.

ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ರಾಷ್ಟ್ರೀಯ ಜಲ ನೀತಿ ಇಲ್ಲದಿದ್ದರೂ ಸಹ ತಮಿಳುನಾಡಿಗೆ ನೀರು ಬಿಡುಗಡೆ ಮಾಡುವ ಮೂಲಕ ರಾಜ್ಯ ಸರ್ಕಾರ ರಾಜ್ಯದ ಜನತೆ ಮತ್ತು ಜಾನುವಾರುಗಳ ಹಿತ ಬಲಿ ಕೊಟ್ಟಿತು,ಜಲಾಶಯಗಳಲ್ಲಿ ಇದ್ದ ನೀರು ನೆರೆ ರಾಜ್ಯಕ್ಕೆ ಹರಿದ ಪರಿಣಾಮ ಇಲ್ಲಿನ ರೈತರು ಬೆಳೆ ಹಾಕದ ಪರಿಸ್ಥಿತಿ ನಿರ್ಮಾಣವಾಯಿತು, ಜಮೀನಿನಲ್ಲಿರುವ ಬೆಳೆ ಬಿರು ಬಿಸಿಲಿಗೆ ಒಣಗಿ ತರಗಾಗುತ್ತಿದೆ, ಕೆರೆ ಕಟ್ಟೆಗಳಲ್ಲಿ ನೀರು ಇಲ್ಲದೆ ಜನ ಜಾನುವಾರುಗಳಿಗೆ ಕುಡಿಯಲು ನೀರಿಲ್ಲದಂತಾಗಿದೆ,ಆದರೂ ಸಹ ಆಳುವ ಸರ್ಕಾರ ಚುನಾವಣೆಯಲ್ಲಿ ಬಿಸಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾವೇರಿ,ಕೃಷ್ಣ,ಭೀಮಾ ನದಿ ಕರ್ನಾಟಕ ಸುತ್ತುವರದಿದ್ದರೂ ಸಹ ನೆರೆ ರಾಜ್ಯಗಳೊಂದಿಗೆ ಉಂಟಾಗಿರುವ ಜಲ ವಿವಾದ ಗಳಲ್ಲಿ ಕೇಂದ್ರ -ರಾಜ್ಯ ಸರ್ಕಾರ ಮತ್ತು ಚುನಾಯಿತ ಜನಪ್ರತಿನಿಧಿಗಳ ರಾಜಕೀಯ ಇಚ್ಛಾ ಶಕ್ತಿ ಕೊರತೆಯಿಂದ ಕಾನೂನು ಹೋರಾಟದಲ್ಲಿ ಸಂಪೂರ್ಣ ವೈಫಲ್ಯತೆ ಕಂಡಿದೆ ಇದರಿಂದ ಕರ್ನಾಟಕದ ನೀರಿನ ಪಾಲು ಮರೀಚಿಕೆಯಾಗಿದೆ.

ಭೀಕರ ಬರಗಾಲದಿಂದ ಪರಿಸ್ಥಿತಿ ದಿನದಿಂದ ದಿನಕ್ಕೆ ಉಲ್ಬಣಿಸುತ್ತಿದ್ದು, ರೈತರ ಮತ್ತು ಜನ ಜಾನುವಾರಗಳ ಪರಿಸ್ಥಿತಿ ಬಿಗಡಾಯಿಸಿದೆ ಆದರೂ ಸಹ ರಾಜ್ಯ ಸರ್ಕಾರ ನಯಾ ಪೈಸೆ ಪರಿಹಾರ ನೀಡಿಲ್ಲ, ಕಾವೇರಿ,ಕೃಷ್ಣ,ಭೀಮಹಾಗೂ ಹೇಮಾವತಿ ಅಚ್ಚುಕಟ್ಟು ಪ್ರದೇಶದ ನಾಲೆಗಳಿಗೆ ನೀರು ಹರಿಸಬೇಕು, ಬೆಳೆದು ನಿಂತಿರುವ ಬೆಳೆ ರಕ್ಷಣೆಗೆ ಮುಂದಾಗಬೇಕು, ಜನ ಜಾನುವಾರುಗಳಿಗೆ ಕುಡಿಯಲು ನೀರು ಒದಗಿಸಬೇಕು ಹಾಗೂ ರೈತರು, ಕೃಷಿ ಕಾರ್ಮಿಕರಿಗೆ ತಲಾ ಐವತ್ತು ಸಾವಿರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಲೋಕಸಭಾ ಚುನಾವಣೆಯನ್ನು ಮುಕ್ತ ನಾಯಸಮ್ಮತ, ಪಾರದರ್ಶಕವಾಗಿ ನಡೆಸಲು ಮುಂದಾಗಬೇಕು, ಚುನಾವಣಾ ಆಯುಕ್ತರಾಗಿದ್ದ ಟಿ ಎನ್ ಶೇಷನ್ ದಕ್ಷತೆ ಮತ್ತು ಪ್ರಾಮಾಣಿಕತೆಯಿಂದ ಚುನಾವಣೆ ನಡೆಸಿದ ಇತಿಹಾಸ ಇದೆ, ಅದನ್ನು ಮೀರಿ ಚುನಾವಣೆ ನಡೆಸುವ ಮೂಲಕ ಭಾರತ ಸಂವಿಧಾನದ ನೈಜ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಸಂರಕ್ಷಿಸಬೇಕು ಎಂದು ಆಗ್ರಹಿಸಿದರು.

ಸಮಿತಿಯ ರಾಜ್ಯಾಧ್ಯಕ್ಷ ವೆಂಕಟಗಿರಿಯಯ್ಯ, ಅನಿಲ್ ಕುಮಾರ್ ಕೆರಗೋಡು, ಕೆಎಂ ಶ್ರೀನಿವಾಸ್,ಬಿ ಆನಂದ,ಎಸ್ ಕುಮಾರ, ಸೋಮಶೇಖರ್, ಭಾಗ್ಯಮ್ಮ, ಗೀತಾ ಮೇಲುಕೋಟೆ, ಸುಕನ್ಯಾ,ಸುರೇಶ್ ಕುಮಾರ್, ಬಸವರಾಜ್, ಬಲರಾಮ ನೇತೃತ್ವ ವಹಿಸಿದ್ದರು.



### ಗೌಡಗೆರೆ ದುರ್ಗಮ್ಮನ 35ನೇ ವರ್ಷದ ಜಾತ್ರಾ ಮಹೋತ್ಸವ

**ಹುಳಿಯಾರು ಹೋಬಳಿಯ ಗೌಡಗೆರೆ ಶ್ರೀ ದುರ್ಗಮ್ಮನವರ 35 ನೇ ವರ್ಷದ ಜಾತ್ರಾ ಮಹೋತ್ಸವವು ಕುರಿಹಟ್ಟಿ, ಕೆ.ಸಿ.ಪಾಳ್ಯ, ಕೋಡಿಪಾಳ್ಯ ಗ್ರಾಮದಲ್ಲಿ ಮಡಲಕ್ಕಿ ಸೇವೆ ನಡೆಸುವ ಮೂಲಕ ಆರಂಭವಾಯಿತು. ಮಾ.26 ರ ಮಂಗಳವಾರ ಕಂಕಣಧಾರಣೆ, ಮಧುವಣಗಿತ್ತಿ, ಆರತಿಬಾನ, ಮಾ.27 ಬುಧವಾರ ಕೆಂಕೆರೆ ಕಾಳಮ್ಮ, ಹುಳಿಯಾರು ದುರ್ಗಮ್ಮ, ಕೆ.ಸಿ.ಪಾಳ್ಯ ಅಂತರಘಟ್ಟಮ್ಮ ದಏವರುಗಳ ಕೂಡುಭೇಟಿ ನಂತರ ಗಂಗಾಸ್ನಾನ, ಮಾ.28 ರ ಗುರುವಾರ ಬೆಳಗ್ಗೆ ಕಳಸ ನಂತರ ಅನ್ನಸಂತರ್ಪಣೆ, ಮಾ.29 ರ ಶುಕ್ರವಾರ ಸಂಜೆ ಉಯ್ಯಾಲೋತ್ಸವ, ಮಾ.30 ರ ಶನಿವಾರ ಸಿಡಿ ಉತ್ಸವ, ಕಂಕಣ ವಿಸರ್ಜನೆ, ಓಕಳಿ ಸೇವೆ ನಡೆಯಲಿದೆ.**

## ಕೆ.ಸಿ.ಪಾಳ್ಯದ ಶುದ್ಧ ನೀರಿನ ಘಟಕ ಲೋಕಾರ್ಪಣೆ

**ಹುಳಿಯಾರು:** ಕೆಟ್ಟು ಒಂದು ವರ್ಷವಾದರೂ ದುರಸ್ತಿ ಕಾಣದ ಹುಳಿಯಾರು ಹೋಬಳಿಯ ಕೆಂಕೆರೆ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಕೆ.ಸಿ.ಪಾಳ್ಯ ಶುದ್ಧ ಕುಡಿಯುವ ನೀರಿನ ಘಟಕ ಪತ್ರಿಕೆಯ ವರದಿಯ ಫಲಶೃತಿಯಿಂದಾಗಿ ಸಂಪೂರ್ಣ ದುರಸ್ತಿಯಾಗಿ ಸೋಮವಾರ ಮತ್ತೆ ಲೋಕಾರ್ಪಣೆಯಾಯಿತು.

ಕೆ.ಸಿ.ಪಾಳ್ಯ ನೀರಿನ ಘಟಕ ಕೆಟ್ಟು ವರ್ಷವಾಗಿದ್ದರೂ ದುರಸ್ತಿ ಮಾಡದ ಪರಿಣಾಮ ಲಕ್ಷಾಂತರ ರೂ. ವೆಚ್ಚದ ಯಂತ್ರೋಪಕರಣಗಳು ತುಕ್ಕು ಹಿಡಿಯುತ್ತಿತ್ತು. ಅಲ್ಲದೆ ಶುದ್ಧ ನೀರು ತರಲು ನಾಲ್ಕೈದು ಕಿಮೀ ದೂರದ ಹುಳಿಯಾರು, ಕೆಂಕೆರೆಗೆ ಹೋಗಿ ಬರುವ ಅನಿವಾರ್ಯತೆ ನಿರ್ಮಾಣವಾಗಿತ್ತು. ಕೆಲವರು ಕೊಳಯಿಯಲ್ಲಿ ಬರುವ ಫ್ಲೋರೈಡ್ ನೀರನ್ನೇ ಕುಡಿವಂತಾಗಿತ್ತು.

ಈ ಬಗ್ಗೆ ಪತ್ರಿಕೆ ವರದಿ ಮಾಡಿತ್ತು. ವರದಿ ಗಮನಿಸಿದ ತಾಲೂಕು ಪಂಚಾಯ್ತಿ ಕಾರ್ಯನಿರ್ವಾಹಣಾಧಿರಿಗಳಾದ ವಸಂತಕುಮಾರ್ ಅವರು ಖುದ್ದು ಗ್ರಾಮಕ್ಕೆ ಭೇಟಿ ನೀಡಿ ಪಿಡಿಒ ತಿಪ್ಪೇಸ್ವಾಮಿ ಅವರಿಗೆ ಶೀರ್ಘ ದುರಸ್ತಿ ಮಾಡಿ ಗ್ರಾಮದ ಜನರಿಗೆ ಶುದ್ಧ ನೀರು ಕುಡಿಯುವಂತೆ ಮಾಡಲು ಸೂಚನೆ ನೀಡಿ ಹೋಗಿದ್ದರು. ಅದರಂತೆ ಘಟಕ ದುರಸ್ತಿ ಮಾಡಲಾಗಿತ್ತು. ಶನಿವಾರ ಇಒ ವಸಂತಕುಮಾರ್ ಮತ್ತೆ ಗ್ರಾಮಕ್ಕೆ ಭೇಟಿ ನೀಡಿ ಘಟಕದ ನೀರನ್ನು ತಾವೇ ಮೊದಲು ಕುಡಿಯುವ ಮೂಲಕ ಶುದ್ಧತೆಯ ಖಾತ್ರಿ ಮಾಡಿಕೊಂಡರಲ್ಲದೆ ನೀರಿನ ಪಿಎಚ್ ಮಟ್ಟ ಪರಿಶೀಲಿಸಿ ಸಾರ್ವಜನಿಕರು ಬಳಕೆಗೆ ಸಮ್ಮತಿ ಸೂಚಿಸಿದರು. ನಂತರ ಊರಿನವರು ಬಂದು ನೀರು ಹಿಡಿದು ಸಂಭ್ರಮಿಸದರು. ನಾಲ್ಕೈದು ಕಿಮೀ ದೂರದಿಂದ ತರುವುದನ್ನು ತಪ್ಪಿಸಿದ ಇಒಗೆ ಹಾರ ಹಾಕಿ ಸಿಹಿ ಹಂಚಿ ಖುಷಿ ಪಟ್ಟರು.



## ತಾತಯ್ಯನವರ ತತ್ವಗಳು ಸಮಾಜಕ್ಕೆ ಅವಶ್ಯಕ

**ವಿಜಯಪುರ:** ಕೈವಾರ ತಾತಯ್ಯ ಅವರು ಸಮಾಜದಲ್ಲಿ ಬೇರೂರಿದ್ದ ಹಲವು ಮೂಢನಂಬಿಕೆ ಅನಿಷ್ಟ ಪದ್ದತಿಗಳ ವಿರುದ್ಧ ಹೋರಾಟ ಮಾಡಿದ್ದರು. ಅವರ ಸಂದೇಶ, ತತ್ವಗಳು ಸಮಾಜಕ್ಕೆ ಅತ್ಯಂತ ಅವಶ್ಯಕ ಎಂದು ಬಲಿಜ ಜನಾಂಗದ ಮುಖಂಡ ವಿ.ಎನ್.ವೆಂಕಟೇಶ್ ತಿಳಿಸಿದರು.

ಪಟ್ಟಣದ ಪುರಸಭಾ ಆವರಣದಲ್ಲಿ ಪುರಸಭಾ ಹಾಗೂ ಬಲಿಜ ಕುಲಬಂಧುಗಳಿಂದ ಆಯೋಜಿಸಿದ್ದ ಯೋಗಿನಾರೇಯಣ ಯತೀಂದ್ರರ ಜಯಂತಿ (ಕೈವಾರ ತಾತಯ್ಯ ) ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಾತಯ್ಯನವರು ಕೈವಾರದ ಯೋಗಿನಾರೇಯಣ ತಾತಯ್ಯನವರು ನಮ್ಮ ವಿಜಯಪುರದ ಇತಿಹಾಸ ಪ್ರಸಿದ್ದ ಚನ್ನಕೇಶವಸ್ವಾಮಿ ದೇವಾಲಯದಲ್ಲಿ ಸುಮಾರು ಐದಕ್ಕೂ ಹೆಚ್ಚು ಕೀರ್ತನೆಗಳನ್ನು ರಚನೆ ಮಾಡಿರುವುದು ನಮ್ಮೆಲ್ಲರ ಸೌಭಾಗ್ಯ ಅಂದು ತಾತಯ್ಯನವರು ವಿಜಯಪುರದಲ್ಲಿ ಸುಮಾರು ಮೂರ್ ನಾಲ್ಕು ದಿನ ಬಂದು ಉಳಿದಿದ್ದರೂ ಎಂಬ ಇತಿಹಾಸವು ಉಂಟು, ಮಾನವ ಜನ್ಮವು ಗುರುಗಳ ಸೇವೆಯನ್ನು ಯಾರು ಪಾಲಿಸುತ್ತಾನೆ ಅವನು ಪರಮ್ಮಾತ್ಮನನ್ನು ಸೇರಿದಂತೆ ಎಂದು ಕೈವಾರ ಕ್ಷೇತ್ರದ ಧರ್ಮಾಧಿಕಾರಿ ಜಯರಾಮ್ ಗುರುಗಳು ತಿಳಿಸಿದ್ದಾರೆ ಎಂದರು.

ಸಮಾಜದಲ್ಲಿ ಎಲ್ಲರೂ ಸಮಾನರು ಎಂಬ ಸಂದೇಶವನ್ನು ಸಾರಿದ ಕೈವಾರ ತಾತಯ್ಯ ಅವರು ಅಂದಿನ ಕಾಲದಲ್ಲೇ ಅನಿಷ್ಟ ಪದ್ಧತಿಗಳ ವಿರುದ್ಧ ಹೋರಾಡಿದವರು. ಅವರ ತತ್ವ ಪದಗಳಿಂದ ಮಾನವ ಕುಲಕ್ಕೆ ಮಾದರಿ ಎಂದರು.

ಬಲಿಜ ಜನಾಂಗದ ಅಧ್ಯಕ್ಷ ಮುನಿರಾಜ್ ಮಾತನಾಡಿ, ಪ್ರತಿ ವರ್ಷವು ಯೋಗಿನಾರಾಯಣ ತಾತಯ್ಯನವರ ಜಯಂತಿಯನ್ನು ನಮ್ಮ ಕುಲ ಬಂಧುಗಳು ಪಟ್ಟಣದಲ್ಲಿ ಅದ್ದೂರಿಯಾಗಿ ನಡೆಸುತ್ತಿದ್ದರು ಈ ವರ್ಷವೂ ನೀತಿ ಸಮಿತಿ ಇದ್ದ ಕಾರಣ ತಾತಯ್ಯನವರ ಜಯಂತಿಯನ್ನು ಸರಳವಾಗಿ ಮಾಡುತ್ತಿದ್ದೇವೆ ಎಂದರು. ಈ ಕಾರ್ಯಕ್ರಮದಲ್ಲಿ ಪಟ್ಟಣದ ಬಲಿಜ ಜನಾಂಗದ ಕುಲ ಬಂಧುಗಳು ಶ್ರೀ ಯೋಗಿನಾರಾಯಣ ತಾತಯ್ಯನವರ ಪಲ್ಲಕ್ಕಿಯೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ತಾತಯ್ಯನವರ ಕೀರ್ತನೆಗಳನ್ನು ಜಪಿಸುವ ಮೂಲಕ ಮೆರವಣಿಗೆಯನ್ನು ಮಾಡಲಾಯಿತು.

ಈ ಸಂದರ್ಭದಲ್ಲಿ ಪುರಸಭಾ ಮುಖ್ಯಾಧಿಕಾರಿ ಸಂತೋಷ್ ಕುಮಾರ್, ಪುರಸಭಾ ಅಧಿಕಾರಿಗಳಾದ ತ್ಯಾಗರಾಜ್, ಲಾವಣ್ಯ, ಮಾಜಿ ಪುರಸಭಾ ಸದಸ್ಯ ಬಲಮುರಿ ಶ್ರೀನಿವಾಸ್, ಗೋವಿಂದರಾಜ್, ಹರೀಶ್, ಮುನಿರಾಜ್, ರಮೇಶ್, ಶಂಕರಪ್ಪ, ಚಂದ್ರು, ನಾಗಯ್ಯ, ಮಹಾತ್ಮ ಆಂಜನೇಯ್ಯ ಹಾಗೂ ಬಲಿಜ ಜನಾಂಗದ ಎಲ್ಲಾ ಕುಲಬಂಧುಗಳು, ಬಜನಮಂಡಳಿಯ ಎಲ್ಲಾ ಭಕ್ತವೃಂದ ಹಾಜರಿದ್ದರು.



## ಪೂರ್ವ ಪ್ರಾಥಮಿಕ ಶಿಕ್ಷಣ ಮಕ್ಕಳ ಬೆಳವಣಿಗೆಗೆ ಪೂರಕ

**ಮೈಸೂರು:** ನಗರದ ಆಲನಹಳ್ಳಿ ಬಡಾವಣೆಯಲ್ಲಿರುವ ಯುರೋ ಕಿಡ್ಸ್ ಶಾಲೆಯ ಪ್ರಥಮ ವಾರ್ಷಿಕೋತ್ಸವ ಸಮಾರಂಭ ಜಗನ್ಮೋಹನ ಅರಮನೆಯಲ್ಲಿ ನೆರವೇರಿತು. ಕಾರ್ಯಕ್ರಮಕ್ಕೆ ಜ್ಯೋತಿ ಬೆಳಗಿಸಿ ಮಾತನಾಡಿದ ಮಂಡ್ಯ ಕೃಷಿ ಸಂಶೋಧನಾ ಕೇಂದ್ರದ ಭತ್ತದ ತಳಿ ವಿಜ್ಞಾನಿ ಡಾ.ಸಿ.ಎ.ದೀಪಕ್ ಅವರು ಪೂರ್ವ ಪ್ರಾಥಮಿಕ ಶಿಕ್ಷಣ ಮಕ್ಕಳ ಮುಂದಿನ ಬೆಳವಣಿಗೆಗೆ ಪೂರಕ ವಾತಾವರಣವನ್ನು ನಿರ್ಮಿಸುತ್ತದೆ. ಶಾಲಾ ವಾತಾವರಣಕ್ಕೂ ಮೊದಲು ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಮನೆಯನ್ನು ಬಿಟ್ಟು, ಶಾಲೆಗೆ ಬಂದ ಮಕ್ಕಳಿಗೆ ಸ್ವಾವಲಂಬನೆ, ಆಸಕ್ತಿ, ಕಲಿಕೆ, ವಿವಿಧ ಆಟೋಟಗಳು, ಸಹಪಾಠಿ ಮಕ್ಕಳ ಜೊತೆ ಬೆರೆಯುವುದು ಹೀಗೆ ಹತ್ತು ಹಲವು ಕುತೂಹಲಕಾರಿ ವಿಷಯಗಳನ್ನು ಮನವರಿಕೆ ಮಾಡಿಕೊಡುವುದು ಬಹಳ ಮುಖ್ಯವಾದ ಉದ್ದೇಶ ಹಾಗೂ ಲಕ್ಷಣವಾಗಿದೆ ಎಂದು ತಿಳಿಸಿದರು. ಇಂದು ಸ್ಪರ್ಧಾ ಪ್ರಪಂಚದಲ್ಲಿ ಶಿಕ್ಷಣ ಸಂಸ್ಥೆಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಪೈಪೋಟಿಯನ್ನುಂಟು ಮಾಡುತ್ತಿದೆ. ಆದ್ದರಿಂದ ವಿಷಯ ಜ್ಞಾನದ ಜೊತೆಗೆ ನಾವು ಬದುಕುವ ಕಲೆಯನ್ನು ಕಲಿಸುವುದು, ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು, ಕ್ರಿಯಾಶೀಲತೆಯನ್ನು ಉಂಟು ಮಾಡುವುದು ಅತ್ಯಗತ್ಯ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯುರೋಕಿಡ್ಸ್‌ನ ಮುಖ್ಯಸ್ಥರಾದ ಕೃಷ್ಣೇಗೌಡ ಅವರು ವಹಿಸಿ ಮಾತನಾಡಿ, ಮಕ್ಕಳ ಬೆಳವಣಿಗೆಗೆ ಶಾಲಾ ವಾರ್ಷಿಕೋತ್ಸವಗಳು ಅಡಿಪಾಯವನ್ನು ಹಾಕುವುದರ ಜೊತೆಗೆ ಪ್ರತಿಭೆಯನ್ನು ಗುರುತಿಸುವಲ್ಲಿ ಮುಖ್ಯವಾಗುತ್ತದೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಭಾಗವಹಿಸಲು ನೆರವಾಗುತ್ತದೆಂದು ತಿಳಿಸಿದರು. ವೇದಿಕೆಯಲ್ಲಿ ಡಾ.ಯೋಗಿತಾ, ವ್ಯವಸ್ಥಾಪಕರಾದ ಶ್ರೀಮತಿ ಶಿಲ್ಪ ಕೃಷ್ಣೇಗೌಡ, ಮುಖ್ಯ ಶಿಕ್ಷಕರಾದ ಚೈತ್ರ ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೆ ಮೌರ್ಯ ಕೃಷ್ಣೇಗೌಡ ಸ್ವಾಗತಿಸಿದರೆ, ಮುಖ್ಯ ಶಿಕ್ಷಕಿ ಚೈತ್ರ ನಿರೂಪಿಸಿದರು. ವೇದಿಕೆ ಕಾರ್ಯಕ್ರಮದ ನಂತರಚಿಣ್ಣರಿಂದ ಸಾಂಸ್ಕೃತಿಕ ಕಾರ್ಯಕ್ರಮ ಅತ್ಯಂತ ಯಶಸ್ವಿಯಾಗಿ ನೆರವೇರಿತು.



### ರಾಜ್ಯ ಸರ್ಕಾರದ ವಿರುದ್ಧ ಗುಡುಗಿದ ಮಹಿಳಾ ಮೋರ್ಚಾದ ರಾಜ್ಯಾಧ್ಯಕ್ಷೆ, ರಾಜ್ಯ ಸರ್ಕಾರ ಒಂದು ಭಂಡ ಸರ್ಕಾರ

# ನಾರಿ ಶಕ್ತಿಯನ್ನು ರಾಷ್ಟ್ರೀಯ ಶಕ್ತಿಯನ್ನಾಗಿಸಿದ ಪ್ರಧಾನಿ ಮೋದಿ

**ಚಾಮರಾಜನಗರ:** ದೇಶದಲ್ಲಿ ಶೇ.50ಕ್ಕಿಂತ ಹೆಚ್ಚು ಇರುವ ಮಹಿಳಾ ಶಕ್ತಿಯನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ 300 ಕ್ಕೂ ಹೆಚ್ಚು ಯೋಜನೆ ಗಳನ್ನು ನೀಡಿ ಅವರನ್ನು ರಾಷ್ಟ್ರೀಯ ಶಕ್ತಿಯನ್ನಾಗಿಸಿದ ಕೀರ್ತಿ ಪ್ರಧಾನಿ ನರೇಂದ್ರ ಮೋದಿಯವರಿಗೆ ಸಲ್ಲುತ್ತದೆ ಎಂದು ಮಹಿಳಾ ಮೋರ್ಚಾದ ರಾಜ್ಯಾಧ್ಯಕ್ಷೆ ಮಂಜುಳ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಜಿಲ್ಲಾ ಮಹಿಳಾ ಮೋರ್ಚಾದ ಪದಾಧಿ ಕಾರಿಗಳ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಕಳೆದ 10 ವರ್ಷಗಳಿಂದ ಹಿಂದೆ ಅಧಿಕಾರ ಬಂದ ಪ್ರಧಾನಿ ನರೇಂದ್ರ ಮಹಿಳೆಯರ ಸಬಲೀಕರಣಕ್ಕಾಗಿ ಜಾರಿಗೆ ತಂದ ಯೋಜನೆ ಗಳಿಂದ ಇಂದು ದೇಶದ ಕೋಟ್ಯಾಂತರ ಮಹಿಳೆಯರು ಸ್ವಾಭಿಮಾನದ ಬದುಕು ಕಟ್ಟಿಕೊಂಡಿದ್ದಾರೆ ಇಂತಹ ಯೋಜನೆಗಳನ್ನು ಜಾರಿ ಮಾಡಿ ವಿಶ್ವ ಖ್ಯಾತಿ ಹೊಂದಿರುವ ನರೇಂದ್ರಮೋದಿ ಮತ್ತೆ ಪ್ರಧಾನಿ ಮಾಡಬೇಕಿದೆ ಎಂದರು.

ಕಳೆದ 65 ವರ್ಷಗಳಿಂದ ಕಾಂಗ್ರೆಸ್ ಮಹಿಳೆಯರ ಮೀಸಲಾತಿ ನೀಡುವ ಪರಿಕಲ್ಪನೆ ಬಂದಿರಲಿಲ್ಲ. ಅದರೆ ನಮ್ಮ ಪ್ರಧಾನಿ ನರೇಂದ್ರಮೋದಿಯವರು ನಾರಿ ಶಕ್ತಿ ವಂದನಾ ಅಧಿನಿಯಮ -2023 ಮಸೂದೆ ಜಾರಿ ಲೋಕಸಭಾ, ಹಾಗೂ ವಿಧಾನ ಸಭೆಯಲ್ಲಿ ಶೇ.33 ಮೀಸಲಾತಿ ನೀಡಿದೆ. ಸ್ಥಳೀಯ ಸಂಸ್ಥೆ ಗಳಿಗೆ ಶೇ.50 ರಷ್ಟು ಮೀಸಲಾತಿ ಸೌಲಭ್ಯ ಕಲ್ಪಿಸುವ ಎಲ್ಲ



ರಂಗದಲ್ಲಿಯೂ ಮಹಿಳೆಯರು ಮುಖ್ಯವಾಹಿನಿಗೆ ಬರುವಂತೆ ಮಾಡಿದ್ದಾರೆ ಹೀಗಾಗಿ ಚಾಮರಾಜನಗರ ಗಡಿ ಲೋಕಸಭಾ ಕ್ಷೇತ್ರದಿಂದ ಕಾಶ್ಮೀರದವರಗೆ ಬಿಜೆಪಿ ಒಕ್ಕೂಟದ ಅಭ್ಯರ್ಥಿ ಗಳನ್ನು ಗೆಲ್ಲಿಸುವ ಮೂಲಕ ಮೋದಿಯವನ್ನು ಮತ್ತೆ ಪ್ರಧಾನಿ ಮಾಡಲು ನಾವೆಲ್ಲರೂ ಶ್ರಮಿಸಬೇಕು ಎಂದರು.

ಕಾಂಗ್ರೆಸ್ ಸರ್ಕಾರ ವಿರುದ್ದ ವಾಗ್ದಾಳಿ : ರಾಜ್ಯ ಕಾಂಗ್ರೆಸ್ ಸರ್ಕಾರ ರಾಜಮಾರ್ಗದಲ್ಲಿಹೋಗದೆ ಅನ್ಯ ಮಾರ್ಗದಲ್ಲಿಹೋಗಿ ಗ್ಯಾರಂಟಿ ಯೋಜನೆಗಳ ಮೂಲಕ ಅಧಿಕಾರ ಹಿಡಿದಿದ್ದು, ಈ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಮತ ಹಾಕಿದರೆ ಮಾತ್ರ ಗ್ಯಾರಂಟಿ ಯೋಜನೆ ಮುಂದುವರಿಯುತ್ತ ಎನ್ನುವ ಮೂಲಕ ಅ ಪಕ್ಷದ ಶಾಸಕರೇ ಮಾತನಾಡಿದ್ದಾರೆ. ಇದರರ್ಥ ಇವರು ನೀಡುವ 2 ಸಾವಿರಕ್ಕೆ ಮಹಿಳೆಯರು ಸ್ವಾಭಿಮಾನ ಮಾಡಿಕೊಳ್ಳಬೇಕೆ , ಇಂತಹ ಸುಳ್ಳು ಪೊಳ್ಳು ಗ್ಯಾರಂಟಿ ಮಹಿಳೆಯರು ಜಗ್ಗುವುದಿಲ್ಲ ಟೀಕಿಸಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ಮಾತನಾಡಿ, ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳು ಮುಗಿದೋಯಿತು. ಬಹಳ ದಿನಗಳ ಕಾಲ ನಿಲ್ಲಲ್ಲ ಇದನ್ನು ಮೋಸ ಮಾಡಿ ಚುನಾವಣಾ ಅಸ್ತವಾಗಿ ಬಳಸಿಕೊಂಡರು. ಗ್ಯಾರಂಟಿ ಯೋಜನೆಗಳನ್ನು ಕೊಟ್ಟು ಮತ್ತೊಂದು ಕಡೆ ಬೆಲೆಗಳ ಹೆಚ್ಚು ಮಾಡುವ ಮೂಲಕ ಕಿತ್ತುಕೊಳ್ಳವ ಕೆಲಸ ಮಾಡಿದೆ ಎಂದು ಆರೋಪಿಸಿದರು. ಲೋಕಸಭಾ ಕ್ಷೇತ್ರದ ಚುನಾವಣಾ ಸಂಚಾಲಕ ಪ್ರೊ.ಕೆ.ಆರ್.ಮಲ್ಲಿಕಾರ್ಜುನಪ್ಪ ಮಾತನಾಡಿ,ಪ್ರಧಾನಿ ನರೇಂದ್ರ ಅವರು ನಾರಿಶಕ್ತಿ ವಂದನೆ ಯೋಜನೆಯ ಮೂಲಕ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ.ಅದನ್ನು ಪ್ರತಿಮನೆಮನೆ ಅರಿವು ಮೂಡಿಸಬೇಕು. ಇಡೀದೇಶ, ಭಾರತೀಯರನ್ನು ಮುನ್ನಡೆಸುತ್ತಿದ್ದಾರೆ. ಇಡೀ ವಿಶ್ವದಲ್ಲೇ ಮಹಿಳೆಯರ ಸೂಚ್ಯಂಕ ದುಪ್ಪಟ್ಟು ಆಗಿದೆ ಎಂದರು.

ಮಹಿಳಾ ಮೋರ್ಚಾದ ಜಿಲ್ಲಾಧ್ಯಕ್ಷೆ ಕಮಲಮ್ಮ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ಮಹಿಳಾ ಮೋರ್ಚಾದ ಕಾರ್ಯಕಾರಿಣಿ ಸದಸ್ಯೆ ಜಯಶೀಲರಾಜಶೇಖರ್, ಮೈಸೂರು ಜಿಲ್ಲಾಧ್ಯಕ್ಷೆ ರೇಣುಕಾರಾಜು, ಪ್ರಧಾನ ಕಾರ್ಯದರ್ಶಿ ನಂದಿನಿಮಹೇಶ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸರಸ್ವತಿ, ಕಾರ್ಯದರ್ಶಿಗಳಾದ ಮಮತ ಬಾಲಸುಬ್ರಹ್ಮಣ್ಯ, ಶೈಲ, ಉಪಾಧ್ಯಕ್ಷರಾದ ದಾಕ್ಷಯಿಣಿ, ವನಜಾಕ್ಷಿ, ಜಿಲ್ಲೆಯ 8 ಮಂಡಲಗಳ ಅಧ್ಯಕ್ಷರುಗಳು, ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು.

## ಡಿಪ್ಲೊಮಾ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಮೈಸೂರಿನಲ್ಲಿರುವ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ (ಸಿಪೆಟ್) ಕೌಶಲ್ಯ ಮತ್ತು ತಾಂತ್ರಿಕ ತರಬೇತಿ ಕೇಂದ್ರ. ಸಿಪೆಟ್ ಸಂಸ್ಥೆಯು ಭಾರತ ಸರ್ಕಾರದ ರಸಾಯನ ಪೆಟ್ರೋರಸಾಯನ ಮತ್ತು ರಸಗೊಬ್ಬರ ಸಚಿವಾಲಯದ ಸ್ವಾಯತ್ತ ಸಂಸ್ಥೆಯಾಗಿದೆ.ಸಂಸ್ಥೆಯು ದೇಶದ ಪಾಲಿಮರ್/ಪೆಟ್ರೋಕೆಮಿಕಲ್ಸ್/ ಪ್ಲಾಸ್ಟಿಕ್ಸ್ ಕೈಗಾರಿಕಾ ವಲಯಕ್ಕೆ ಬೇಕಾದ ಮಾನವ ಸಂಪನ್ಮೂಲಕ್ಕೆ ಶೈಕ್ಷಣಿಕ ತರಬೇತಿ ನೀಡಲಾಗುತ್ತಿದೆ ಮತ್ತು CIPET ಕರ್ನಾಟಕದ ವಿದ್ಯಾರ್ಥಿಗಳು ಪಾಲಿಮರ್ ಕೈಗಾರಿಕಾ ವಲಯದಲ್ಲಿ ಜಾಗತಿಕವಾಗಿ ಗುರುತಿಸಲ್ಪಟ್ಟಿದ್ದಾರೆ. CIPET 2024-25ನೇ ಸಾಲಿನ ಉದ್ಯೋಗಾರಿತ ಮತ್ತು ಉದ್ಯೋಗ ಖಚಿತ ಡಿಪ್ಲೊಮಾ,ಕೋರ್ಸ್ ಗಳ ಪ್ರವೇಶಕ್ಕೆ ಆನ್ ಲೈನ್ /ಆಫ್ ಲೈನ್ ಮೂಲಕ ಅರ್ಜಿಯನ್ನುಆಹ್ವಾನಿಸಲಾಗಿದೆ. www.cipet.gov.in ವೆಬ್ ಸೈಟ್ ಮೂಲಕನೋಂದಣಿಯಾಗಲು 2024ರ ಮಾರ್ಚ್ 26 ರಿಂದ ಪ್ರಾರಂಭವಾಗುತ್ತಿದೆ. ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಟೆಕ್ನಾಲಜಿ ,ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಮೌಲ್ಡ್ ಟೆಕ್ನಾಲಜಿ ಥಿಜಚಿಡಿಕೋರ್ಸ್ ಗಳಿಗೆ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ.(ವಿಜ್ಞಾನ) ಪರೀಕ್ಷೆಯಲ್ಲಿ ತೇರ್ಗಡೆಯಾದವರು/ ಹಾಜರಾದವರು ಆನ್ ಲೈನ್ /ಆಫ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.ಹೆಚ್ಚಿನ ಮಾಹಿತಿಗೆ ದೂ:0821-2510618, 9480253024, 9791431827, 9466585669 ಗೆ ಸಂಪರ್ಕಿಸಬಹುದೆಂದು ಸಿಪೆಟ್ ಸಂಸ್ಥೆಯ ನಿರ್ದೇಶಕರು ಮತ್ತು ಮುಖ್ಯಸ್ಥರಾದ ಆರ್.ಟಿ. ನಾಗರಳ್ಳಿ ಯವರು ತಿಳಿಸಿದ್ದಾರೆ.

## ವೇತನ ಸಹಿತ ರಜೆ ಘೋಷಣೆ

**ಬೆಂಗಳೂರು:** ಭಾರತ ಚುನಾವಣಾ ಆಯೋಗವು 2024ರ ಲೋಕಸಭಾ ಚುನಾವಣೆಯನ್ನು ದಿನಾಂಕ:16-03-2024 ರಂದು ಘೋಷಿಸಿದ್ದು, ಅದರಂತೆ ಕರ್ನಾಟಕ ರಾಜ್ಯದಲ್ಲಿ ಎರಡು ಹಂತದಲ್ಲಿ ಚುನಾವಣೆ ನಿಗಧಿಯಾಗಿರುತ್ತದೆ. ದಿನಾಂಕ:26-04-2024 (ಶುಕ್ರವಾರ) ರಂದು ಮೊದಲನೆಯ ಹಂತ ಹಾಗೂ ದಿನಾಂಕ:07-05-2024 (ಮಂಗಳವಾರ) ರಂದು ಎರಡನೇ ಹಂತದ ಲೋಕಸಭಾ ಚುನಾವಣೆ ನಡೆಯಲಿದ್ದು, ಯಾದಗಿರಿ ಜಿಲ್ಲೆಯ 36-ಶೋರಾಪುರ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯು ಸಹ ದಿನಾಂಕ:07-05-2024 (ಮಂಗಳವಾರ) ರಂದು ನಿಗಧಿಯಾಗಿರುತ್ತದೆ. ಸದರಿ ದಿನಾಂಕಗಳಂದು ಮತದಾನ ನಡೆಯಲಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೋಂದಾಯಿತರಾದ ಅರ್ಹ ಮತದಾರರಾಗಿರುವ ಎಲ್ಲಾ ಅರ್ಹ ಕಾರ್ಮಿಕರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾ ದಿನಗಳು) ಕಾಯ್ದೆಯ ಕಲಂ 3-ಎ ಹಾಗೂ 1951ರ ಪ್ರಜಾ ಪ್ರತಿನಿಧಿ ಕಾಯ್ದೆಯ ಕಲಂ.135(ಬಿ) ರಡಿಯಲ್ಲಿ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಸಂಸ್ಥೆಗಳು / ನಿಯೋಜಕರು ಅನುವು ಮಾಡಿ ಕೊಡಬೇಕಾಗಿರುತ್ತದೆ. ಚುನಾವಣೆಯು ನಡೆಯುವ ಕ್ಷೇತ್ರಗಳಲ್ಲಿ ಮತ ಚಲಾಯಿಸುವ ಅರ್ಹ ಕಾರ್ಮಿಕರು ಮತದಾನದಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಮತ್ತು ಇತರೆ ಸಂಸ್ಥೆಗಳ ಮಾಲೀಕರು ವೇತನ ಸಹಿತ ರಜೆ ನೀಡುವಂತೆ ಆದೇಶಿಸಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆ / ನಿಯೋಜಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಗಂಗೋತ್ರಿ ಪಬ್ಲಿಕ್ ಶಾಲೆಯಲ್ಲಿ ಘಟಿಕೋತ್ಸವ

**ಮೈಸೂರು:** ನಗರದ ಬೋಗಾದಿ ಮುಖ್ಯರಸ್ತೆಯಲ್ಲಿರುವ ಗಂಗೋತ್ರಿ ಪಬ್ಲಿಕ್ ಶಾಲೆಯಲ್ಲಿ ಘಟಿಕೋತ್ಸವ ಕಾರ್ಯಕ್ರಮವನ್ನು ಇತ್ತೀಚೆಗೆ ಹಮ್ಮಿಕೊಳ್ಳಲಾಗಿತ್ತು. ಶಾಲಾ ಆಡಳಿತಾಧಿಕಾರಿ ಕಾಂತಿ ನಾಯಕ್ ರವರು ಮಾತನಾಡಿ ಪುಟಾಣಿ ಮಕ್ಕಳ ಭಾಷಾ ಪ್ರೌಢಿಮೆ, ಸಮಯ ಪ್ರಜ್ಞೆ, ವಾಕ್ಚಾತುರ್ಯವನ್ನು ಹೊಗಳುತ್ತಾ ಪ್ರಶಂಸೆ ವ್ಯಕ್ತಪಡಿಸಿದರು. ಮುಖ್ಯ ಶಿಕ್ಷಕ ಮಹಮ್ಮದ್ ಫಾರೂಕ್‌ರವರು ಯುಕೆಜಿ ಮಕ್ಕಳಿಗೆ ಪ್ರಮಾಣ ವಚನವನ್ನು ಬೋಧಿಸಿದರು. ಈ ಕಾರ್ಯಕ್ರಮದಲ್ಲಿ ಮಕ್ಕಳು ಹಾಗೂ ಪೋಷಕರು ಭಾಗವಹಿಸಿ ಮೆರಗು ತಂದರು. ಪ್ರಿಕೆಜಿ ಮತ್ತು ಎಲ್‌ಕೆಜಿ ಮಕ್ಕಳು ಕಾರ್ಯಕ್ರಮವನ್ನು ನಿರೂಪಣೆ ಮಾಡುವ ಮೂಲಕ ಎಲ್ಲರ ಮನ ಗೆದ್ದರು. ಯುಕೆಜಿ ಮಕ್ಕಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ನಂತರ ಎಲ್‌ಕೆಜಿ ಮತ್ತು ಯುಕೆಜಿ ಮಕ್ಕಳ ಪೋಷಕರು ಶಾಲೆಯ ತರಬೇತಿಯ ಹಾಗೂ ಮಕ್ಕಳ ಬೆಳವಣಿಗೆ ನರ್ಸರಿ ಶಿಕ್ಷಕಿಯರ ಪಾತ್ರದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ನಂತರ ಪ್ರಿಕೆಜಿ ಹಾಗೂ ಯುಕೆಜಿ ಮಕ್ಕಳು ವಾರ್ಷಿಕ ವರದಿಯನ್ನು ಮಂಡಿಸಿದರು. ಕಾರ್ಯಕ್ರಮದಲ್ಲಿ ಮಕ್ಕಳಿಗೆ ಉಡುಗೊರೆ ನೀಡಿ, ಸಿಹಿ ಹಂಚುವುದರ ಮೂಲಕ ಅದ್ದೂರಿಯಾಗಿ ಆಚರಿಸಲಾಯಿತು. ವೇದಿಕೆ ಕಾರ್ಯಕ್ರಮದ ನಂತರ ಪುಟಾಣಿಗಳು ಸಾಂಸ್ಕೃತಿಕ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಟ್ಟರು.

## ಬೆಳೆ ವಿಮೆ ಹಣ ನೀಡಲು ಒತ್ತಾಯ

ಹುಳಿಯಾರು: ಫಸಲ್ ಬಿಮಾ ಯೋಜನೆ ಅಡಿಯಲ್ಲಿ 2023-24ನೇ ಸಾಲಿನ ಮುಂಗಾರು ಹಂಗಾಮಿನ ಅವಧಿಗೆ ನೋಂದಣಿ ಮಾಡಿಸಿರುವ ರೈತರಿಗೆ ತಕ್ಷಣ ವಿಮೆ ಹಣ ಜಮೆ ಮಾಡಬೇಕು ಎಂದು ಹೊಸಹಳ್ಳಿ ಚಂದ್ರಣ್ಣ ಬಣದ ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಒತ್ತಾಯಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು ಈ ವರ್ಷ ತೀವ್ರ ಮಳೆ ಕೊರತೆಯಿಂದಾಗಿ ಸಂಪೂರ್ಣ ಬೆಳೆ ನಷ್ಟವಾಗಿದೆ. ರೈತರು ಸಾಲ ಮಾಡಿ ಬಿತ್ತನೆ ಮಾಡಿದ್ದರು. ಬೆಳೆ ಪೂರ್ಣ ಕೈಕೊಟ್ಟಿರುವ ಕಾರಣ ಸಾಲ ಮರುಪಾವತಿ ಮತ್ತು ಜೀವನ ನಿರ್ವಹಣೆಗೆ ಕಷ್ಟವಾಗಿದೆ. ಆದ್ದರಿಂದ ಅತಿ ಶೀಘ್ರವಾಗಿ ವಿಮೆ ಹಣ ಬಿಡುಗಡೆಗೊಳಿಸಬೇಕು ಎಂದು ಕೋರಿದರು. 1 ಎಕರೆ ರಾಗಿ ಬೆಳೆ ನಷ್ಟವಾದರೆ 20 ಸಾವಿರ ರೂ. ಪರಿಹಾರ ನೀಡುವುದಾಗಿ ವಿಮಾ ಕಂಪನಿ ತಿಳಿಸಿತ್ತು. ಅದರಂತೆ ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ 4779 ರೈತರು ರಾಗಿ ಬೆಳೆಗೆ ವಿಮೆ ಕಟ್ಟಿದ್ದಾರೆ. ಇವರೆಲ್ಲರಿಗೂ ಕಳೆದ 3 ತಿಂಗಳ ಹಿಂದೆಯೇ ಶೇ.20 ರಷ್ಟು ವಿಮೆ ಪರಿಹಾರ ಹಣವನ್ನು ಬ್ಯಾಂಕ್ ಖಾತೆ ಹಾಕಲಾಗಿತ್ತು. ಈಗ ಉಳಿದ ಶೇ.80 ಪಾವತಿ ಮಾಡಬೇಕಿದೆ ಎಂದು ಒತ್ತಾಯಿಸಿದ್ದಾರೆ.

# ಉಯ್ಯೋ ಉಯ್ಯೋ ಮಳೆರಾಯ ಹಾಡು ಬಿಡುಗಡೆ...!

**ಚಾಮರಾಜನಗರ:** ಗ್ರಾಮೀಣ ಸೊಗಡಿನ ಕಥೆಯನ್ನು ಹೊಂದಿರುವ ಭರ್ಜರಿ ಗಂಡು ಚಿತ್ರದ ಉಯ್ಯೋ ಉಯ್ಯೋ ಮಳೆರಾಯ ಹಾಡು ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಬಿಡುಗಡೆಯಾಯಿತು. ಶ್ರೀಚಾಮರಾಜೇಶ್ವರ ದೇವಾಲಯಕ್ಕೆ ಚಿತ್ರ ತಂಡ ಭೇಟಿ ನೀಡಿ ವಿಶೇಷಪೂಜೆ ಸಲ್ಲಿಸಿತು. ದೇವಸ್ಥಾನದ ಅರ್ಚಕ ರಾಮಕೃಷ್ಣ ಭಾರದ್ವಜ್ ಉಯ್ಯೋ ಉಯ್ಯೋ ಮಳೆರಾಯ ಹಾಡನ್ನು ಬಿಡುಗಡೆಗೊಳಿಸಿ ಮಾತನಾಡಿ,

ಚಾಮರಾಜೇಶ್ವರಸ್ವಾಮಿಯ ಅನುಗ್ರಹದಿಂದ ಭರ್ಜರಿಗಂಡು ಚಿತ್ರ ಶತಮಾನೋತ್ಸವ ಆಚರಿಸಲಿ, ಚಿತ್ರ ತಂಡಕ್ಕೆ ಶುಭವಾಗಲಿ ಎಂದು ಆಶಿಸಿದರು.

ಚಿತ್ರದ ನಿರ್ಮಾಪಕ ಹಾಗೂ ನಿರ್ದೇಶಕ ಪ್ರಸಿದ್ ಮಾತನಾಡಿ, ಕಿರಣ್ ರಾಜ್ ನಾಯಕ ನಟನಾಗಿ,

ಯಶ ಶಿವಕುಮಾರ್ ನಾಯಕಿಯಾಗಿ ನಟಿಸಿದ್ದು, ಜಿಲ್ಲೆಯ ಆಯದ್ದಸ್ಥಳಗಳಲ್ಲಿ ಚಿತ್ರೀಕರಣ ಮಾಡಲಾಗಿದೆ. ಹಾಡು ಚೆನ್ನಾಗಿ ಮೂಡಿ ಬಂದಿದ್ದು. ಚಿತ್ರದಲ್ಲಿ ನಾಲ್ಕು ಫೈಟ್ ಗಳಿದ್ದು ಕಾಮಿಡಿ ಹಾಗೂ ಪ್ರೇಮ ಕಥೆಯೊಂದಿಗೆ ಚಿತ್ರ ಸಾಗಲಿದೆ ವಿಶೇಷವಾಗಿ ಈ ಚಿತ್ರವು ಗ್ರಾಮೀಣ ಸೊಗಡಿನ ಕಥೆಯನ್ನು ಹೊಂದಿದೆ. ಬರೀ ಪ್ರೀತಿಗಷ್ಟೆ ಸೀಮಿತವಾಗದೆ ನಾಯಕ ತನ್ನ ಊರಿಗೆ ಹಾಗೂ ಊರ ಜನರಿಗೆ ಏನೆಲ್ಲಾ ಮಾಡುತ್ತಾನೆ ಎಂಬುವುದೆ ಚಿತ್ರದ ಒಂದ್ ಲೈನ್ ಕಥೆಯಾಗಿದೆ ಎಂದು ಚಿತ್ರದ ನಿರ್ದೇಶಕರು ಮಾಹಿತಿ ನೀಡಿದರು.

ಉಯ್ಯೋ ಉಯ್ಯೋ ಹಾಡಿಗೆ ಖ್ಯಾತ ಗಾಯಕ ರಘುದೀಕ್ಷಿತ್ ಧ್ವನಿಯಾಗಿದ್ದು, ಗುಮ್ಮಿನೇನಿ ವಿಜಯ್ ಸಂಗೀತ ಸಂಯೋಜನೆ ಮಾಡಿದ್ದರೆ.

ಉಯ್ಯೋ ಉಯ್ಯೋ ಮಳೆರಾಯ ಈ ಹಾಡನ್ನು ಡಾ.ವಿ.ನಾಗೇಂದ್ರಪ್ರಸಾದ್ ಬರೆದಿದ್ದಾರೆ. ಚಾಮರಾಜನಗರ ನಗರದ ಕಿಟ್ಟಿಕೌಶಿಕ್ ಛಾಯಾಗ್ರಹಣದಲ್ಲಿ ಚಿತ್ರ ಉತ್ತಮವಾಗಿ ಮೂಡಿಬಂದಿದೆ. ಈ ಚಿತ್ರವನ್ನು ಪ್ರಸಿದ್ದ್ ಫಿಲಂಸ್ ಬ್ಯಾನರ್ ನಡಿಯಲ್ಲಿ ಅನಿಲ್ ಕುಮಾರ್, ಮದನ್ ಗೌಡ ನಿರ್ಮಿಸಿದ್ದಾರೆ. ಈಗಾಗಲೇ ಚಿತ್ರದ ಟ್ರೇಲರ್ ಬಿಡುಗಡೆಯಾಗಿದ್ದು, ಭರ್ಜರಿ ಗಂಡುಗೆ ಭರ್ಜರಿ ರೆಸ್ಪಾನ್ಸ್ ಸಿಕ್ಕಿದೆ. ಏಪ್ರಿಲ್ 5 ರಂದು ಚಿತ್ರ ತೆರೆ ಕಾಣಲಿದೆ ಎಂದರು. ಈ ಸಂದರ್ಭದಲ್ಲಿ ಚಿತ್ರದ ನಾಯಕ ನಟ ಕಿರಣ್‌ರಾಜ್, ಸಿನಿ ಪತ್ರಕರ್ತ ಚಿತ್ರನಟ ಶ್ರೀಸಾಯಿಮಂಜು, ಚಿತ್ರದ ಛಾಯಾಗ್ರಹಕ ಕಿಟ್ಟಿಕೌಶಿಕ್ ಇತರರು ಹಾಜರಿದ್ದರು.



### ಶ್ರೀ ರಂಭಾಪುರಿ ಜಗದ್ಗುರುಗಳ ಅಭಿಮತ

# ನೈತಿಕ ಮೌಲ್ಯಗಳ ಅಗತ್ಯವಿದೆ

**ರಂಭಾಪುರಿ ಪೀಠ(ಬಾಳೆಹೊನ್ನೂರು):** ಸುಖ ಶಾಂತಿದಾಯಕ ಬದುಕಿಗೆ ಧರ್ಮ ಮತ್ತು ಧರ್ಮಾಚರಣೆ ಮುಖ್ಯ. ಉತ್ತಮ ಸಮಾಜ ನಿರ್ಮಾಣಕ್ಕೆ ಶಾಸ್ತ್ರ ಮತ್ತು ಶಸ್ತ್ರದ ಭಯ ಇರಬೇಕಂತೆ. ಇವೆರಡನ್ನೂ ಮನುಷ್ಯ ಮೀರಿ ನಡೆಯುತ್ತಿರುವ ಕಾರಣ ಜೀವನದಲ್ಲಿ ಶಾಂತಿ ನೆಮ್ಮದಿಯಿಲ್ಲ. ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ನೈತಿಕ ಮೌಲ್ಯಗಳ ಸಂರಕ್ಷಣೆ ಅಗತ್ಯತೆ ಬಹಳಷ್ಟಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಸೋಮವಾರ ಶ್ರೀ ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ನೈತಿಕ ಮೌಲ್ಯಗಳ ಸಂರಕ್ಷಣೆ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಧರ್ಮ ಅರ್ಥ ಕಾಮ ಮತ್ತು ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಚಿದನ್ನಾದರೂ ಸಂಪಾದಿಸದಿದ್ದರೆ ಜೀವನ ವ್ಯರ್ಥವಾಗುವುದು. ಜೀವನ ಹೂದೋಟದಲ್ಲಿ ಅರಳುವ ಹೂಗಳೆಷ್ಟೋ ಬಾಡುವ ಜೀವಗಳು ಎಷ್ಟೋ ಹೇಳಲಾಗದು. ಅವರವರ ಬದುಕಿನಲ್ಲಿ ಅಳವಡಿಸಿಕೊಂಡ ನೀತಿ ನಿಯತ್ತುಗಳೇ ಕಾರಣವಾಗುತ್ತವೆ. ಭೌತಿಕ ಬದುಕಿನ ಸಂಪನ್ಮೂಲಗಳಗಲಿ ಸಿರಿ ಸಂಪತ್ತಿನ ಸಂಗ್ರಹವಾಗಲಿ ಮಾನವನಿಗೆ ಸಂತೃಪ್ತಿ ತಂದು ಕೊಡಲಾರವು. ಇದರೊಂದಿಗೆ ಒಂದಿಷ್ಟಾದರೂ ಆಧ್ಯಾತ್ಮ ಚಿಂತನೆ ಇರಬೇಕಾಗುತ್ತದೆ. ಇಂದು ಎಲ್ಲೆಡೆ ಶಾಂತಿಗಾಗಿ ಹುಡುಕಾಟ ನಡೆದಿದೆ. ಆದರೆ ಕಳೆದು ಹೋದ ಸ್ಥಾನದಲ್ಲಿಲ್ಲ. ಬೇರೆಲ್ಲಿಯೋ ಅನ್ವೇಷಣೆ ನಡೆಯುತ್ತಿದೆ. ಮಂತ್ರ ತೀರ್ಥ ಗುರು ದೈವ ದೇವರು ಮತ್ತು ವೈದ್ಯರಲ್ಲಿ ಯಾವ ಭಾವನೆಗಳನ್ನು ಇಟ್ಟುಕೊಂಡು ನಡೆಯುತ್ತೇವೆಯೋ ಅದಕ್ಕೆ ತಕ್ಕ ಫಲಗಳನ್ನು ಮನುಷ್ಯ ಪಡೆಯುವುದರಲ್ಲಿ ಯಾವುದೇ ಅನುಮಾನವಿಲ್ಲ. ನೀತಿಯಿಲ್ಲದ ಶಿಕ್ಷಣ ಭೀತಿ ಇಲ್ಲದ ಶಾಸನ, ಮಿತಿ ಇಲ್ಲದ ಜೀವನ, ಸೀಮಾತೀತವಾದ ಸ್ವಾತಂತ್ರ್ಯ ಇವು ರಾಷ್ಟ್ರ ವಿಘಾತಗಳೆಂದು ಶ್ರೀಮದ್ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ನಿರೂಪಿಸಿದ್ದನ್ನು ಯಾರೂ ಮರೆಯಲಾಗದು. ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ



ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಹಮ್ಮಿಕೊಂಡ ಎಲ್ಲಾ ಕಾರ್ಯಗಳು ಅತ್ಯಂತ ಯಶಸ್ವಿಯಾಗಿ ಜರುಗಿದ್ದು ತಮಗೆ ಸಂತೋಷ ತಂದಿದೆ ಎಂದರು.

ಸಮಾರಂಭವನ್ನು ಚಿಕ್ಕಮಗಳೂರು ಶಾಸಕ ಹೆಚ್ .ಡಿ.ತಮ್ಮಯ್ಯ ಹಾಗೂ ಮೈಸೂರು ಜಪದಕಟ್ಟಿಮಠದ ಡಾ|| ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ಉದ್ಘಾಟಿಸಿದರು.

ಶಾಸಕ ಹೆಚ್.ಡಿ.ತಮ್ಮಯ್ಯ ಮಾತನಾಡಿ ಸ್ವಸ್ಥ ಸಮಾಜ ಕಟ್ಟಿ ಬೆಳೆಸಲು ನೈತಿಕ ನೀತಿ ರೀತಿಗಳ ಪರಿಪಾಲನೆಯ ಅಗತ್ಯವಿದೆ. ಸಂಪತ್ತಿನ ಬದುಕಿನಲ್ಲಿ ಬಾಳುವ ಮನುಷ್ಯನಿಗೆ ಗುಣವಂತರು ಗುಣಾದರ್ಶಗಳು ಕಾಣಲಾರವು. ಅನ್ಯಾಯ ಅಸತ್ಯ ಹೇಳುವ ಜನರು ಹೆಚ್ಚಿರುವಾಗ ಸತ್ಯವಂತರು ಸುಮ್ಮನಿರುವ ಕಾಲ ಬಂದಿದೆ. ಸರ್ವೋದಯದ ಬಾಳಿಗೆ ಸಂತ ಮಹಂತರು ಶ್ರಮಿಸಿದ್ದಾರೆ. ಅನ್ನ ದಾನ ವಿದ್ಯಾ ದಾನ ಮಾಡಿದ ಕೀರ್ತಿ ವೀರಶೈವ ಮಠಗಳಿಗೆ ಸಲ್ಲುತ್ತದೆ ಎಂದರು.

ನೇತೃತ್ವ ವಹಿಸಿದ ಕವಲೇದುರ್ಗ ಭುವನಗಿರಿ ಸಂಸ್ಥಾನಮಠದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ವೈಚಾರಿಕತೆಯ ಹೆಸರಿನಲ್ಲಿ ಸತ್ಯ ಸಂಸ್ಕೃತಿ ಮತ್ತು ಪರಂಪರೆಗಳ ಬಗೆಗೆ ನಿರ್ಲಕ್ಷ ಮನೋಭಾವ ಹೆಚ್ಚುತ್ತಿದೆ. ಎಲ್ಲಿ ನೋಡಿದಲ್ಲಿ ಮೋಸ ವಂಚನೆ ಕುಯುಕ್ತಿ ಜನರು ಹೆಚ್ಚುತ್ತಿರುವಾಗ ಸಾತ್ವಿಕರು ಮೌನ ವಹಿಸುವುದು ಅನಿವಾರ್ಯವಾಗಿದೆ. ಮಾತಿನಿಂದಲೇ ಸ್ವರ್ಗ ತೋರಿಸಬಲ್ಲೆ ಎಂದು ಹೇಳುವವರು ಇರುವಾಗ ಸಾಧನೆ ಶ್ರಮ ವಹಿಸಿ ಕೆಲಸ ಮಾಡುವವರನ್ನು ಗುರುತಿಸುವವರು ಬಹಳ ವಿರಳರಾಗಿದ್ದಾರೆ. ಸಾತ್ವಿಕ ತಾತ್ವಿಕ ಮೌಲ್ಯಾಧಾರಿತ ಚಿಂತನಗಳನ್ನು ಸಂರಕ್ಷಿಸುವ ಅವಶ್ಯಕತೆ ಬಹಳಷ್ಟಿದೆ ಎಂದರು. ಬೀರೂರು ಶ್ರೀಮದ್ರಂಭಾಪುರಿ ಖಾಸಾ ಶಾಖಾ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ನುಡಿದರು.

ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ಶಂಕರದೇವರ ಮಠ ಚಿಕ್ಕಮಗಳೂರು, ಶಾಂತಮಲ್ಲ ಶಿವಾಚಾರ್ಯ ಸ್ವಾಮಿಗಳು ಕಿಲ್ಲಾ ಬೃಹನ್ಮಠ ರಾಯಚೂರು, ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಶ್ರೀನಿವಾಸ ಸರಡಗಿ, ಅಭಿನವ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು ಸೋಮವಾರ ಪೇಟೆ ರಾಯಚೂರು ಇವರು ನುಡಿ ತರಂಗದಲ್ಲಿ ಉಪದೇಶಾಮೃತ ನೀಡಿದರು.

ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು. ಕೇದಾರ ಶಿವಶಾಂತವೀರ ಶಿವಾಚಾರ್ಯ ಸ್ವಾಮಿಗಳು ಹಿರೇಮಠ ಚನ್ನಗಿರಿ, ವೀರಸಂಗಮೇಶ್ವರ ಶಿವಾಚಾರ್ಯ ಸ್ವಾಮಿಗಳು ಹಿರೇಮಠ ಚಳಗೇರಿ, ತೆಂಡೆಕೇರೆ ಗಂಗಾಧರ ಶಿವಾಚಾರ್ಯ ಸ್ವಾಮಿಗಳು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯ ಸ್ವಾಮಿಗಳು ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಕನ್ನೂರು-ಸಿಂಧನೂರಿನ ಸೋಮನಾಥ ಶಿವಾಚಾರ್ಯ ಸ್ವಾಮಿಗಳು ಸ್ವಾಗತಿಸಿದರು. ಗುರುಲಿಂಗಯ್ಯ ಹಿರೇಮಠ ಹಿತ್ತಲಶಿರೂರ ಇವರಿಂದ ಭಕ್ತಿ ಗೀತೆ ಜರುಗಿತು. ಶ್ರೀ ರಂಭಾಪುರಿ ಪೀಠದ ಗಿರಿಜಾ ಕಲ್ಲೋಳಿಮಠ ಮತ್ತು ಲಾವಣ್ಯ ಮಂಜುನಾಥ ನಿರೂಪಿಸಿದರು. ಬೆಳಿಗ್ಗೆ ವಸಂತೋತ್ಸವ ಜರುಗಿತು.



**ವಿಜಯಪುರ ಪಟ್ಟಣದ ಶ್ರೀ ಚೆನ್ನಕೇಶವ ಸ್ವಾಮಿ ಬ್ರಹ್ಮ ರಥೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಜಿಲ್ಲಾ ಉಸ್ತುವಾರಿ ಸಚಿವ ಕೆಎಚ್ ಮುನಿಯಪ್ಪ ರವರು ಪುರಸಭಾ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಕಾಂಗ್ರೆಸ್ ಮುಖಂಡ ಕೆ ಎಂ ಸತೀಶ್ ಕುಮಾರ್ ರವರ ನಿವಾಸಕ್ಕೆ ತೆರಳಿ ಕಾಂಗ್ರೆಸ್ ಮುಖಂಡರುಗಳೊಂದಿಗೆ ಸಮಾಲೋಚನೆ ನಡೆಸಿದ್ದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ನಂಜಣ್ಣ, ಪುರಸಭಾ ಮಾಜಿ ಸದಸ್ಯ ಮುನಿ ಚಿನ್ನಪ್ಪ, ಸುಧಾಸತೀಶ್, ಶಾಂತಲಾ ಶಂಕರ್ ಇದ್ದರು**

## ಹೊಂಗನೂರು ಡೇರಿ ಅಧ್ಯಕ್ಷರಾಗಿ ನಂಜಯ್ಯ, ಉಪಾಧ್ಯಕ್ಷರಾಗಿ ರಂಗಮ್ಮ ಆಯ್ಕೆ

**ಚಾಮರಾಜನಗರ:** ಚಾಮರಾಜನಗರ ತಾಲೂಕಿನ ಹೊಂಗನೂರು ಹಾಲು ಉತ್ಪಾದಕರ ಸಹಕಾರ ಸಂಘ ಆಡಳಿತ ಕಾಂಗ್ರೆಸ್ ಬೆಂಬಲಿಗರ ಪಾಲಾಗಿದ್ದು, ಕಾಂಗ್ರೆಸ್ ಬೆಂಗಲಿತರಾದ ಆರ್. ನಂಜಯ್ಯ ಅಧ್ಯಕ್ಷರಾಗಿ, ರಂಗಮ್ಮ ಉಪಾಧ್ಯಕ್ಷ ರಾಗಿ ಆಯ್ಕೆಯಾಗಿದ್ದಾರೆ.

ಸಂಘದ ಕಚೇರಿ ಸಭಾಂಗಣದಲ್ಲಿ ನಡೆದ ಅಧ್ಯಕ್ಷ- ಉಪಾಧ್ಯಕ್ಷರ ಆಯ್ಕೆ ಚುನಾವಣೆ ನಡೆಯಿತು. ಅಧ್ಯಕ್ಷ ಸ್ಥಾನ ಕ್ಕೆ ಕಾಂಗ್ರೆಸ್ ಬೆಂಬಲಿರಾದ ಆರ್. ನಂಜಯ್ಯ, ಉಪಾಧ್ಯಕ್ಷ ಸ್ಥಾನ ಕ್ಕೆ ರಂಗಮ್ಮ ನಾಮಪತ್ರ ಸಲ್ಲಿಸಿದ್ದರು. ಮತ್ತೊಂದು ಬಣದಿಂದ ಅಧ್ಯಕ್ಷ ಸ್ಥಾನ ಕ್ಕೆ ಆರ್. ಮಹದೇವಸ್ವಾಮಿ, ಯಶೋಧಮ್ಮ ಸೇರಿ ಮೂವರು ನಾಮಪತ್ರ ಸಲ್ಲಿದ್ದರು. ಬಳಿಕ ಚುನಾವಣೆ ಮತದಾನ ನಡೆದು ಆರ್. ನಂಜಯ್ಯ ಏಳು ಮತಗಳ ನ್ನು ಪಡೆದು ಅಧ್ಯಕ್ಷ ರಾಗಿ ಅಯ್ಕೆ ಯಾದರೆ ಕ್ರಮವಾಗಿ ಮಹದೇವಸ್ವಾಮಿ, ಮೂರು ಮತ, ಯಶೋಧಮ್ಮ ಒಂದು ಮತಗಳನ್ನು ಪಡೆದುಕೊಂಡರು.

ಉಪಾಧ್ಯಕ್ಷ ಸ್ಥಾನ ಕ್ಕೆ ರಂಗಮ್ಮ ಒಬ್ಬರೆ ನಾಮಪತ್ರ ಸಲ್ಲಿಸಿದ ರಿ ದ ಚುನಾವಣಾಧಿಕಾರಿ ಕೀರ್ತಿಕುಮಾರ್ ಅವಿರೋಧ ಆಯ್ಕೆಯನ್ನು ಅಧಿಕೃತ ವಾಗಿ ಘೋಷಣೆ ಮಾಡಿದರು. ಸಂಘದ ನೂತನ ನಿರ್ದೇಶಕರಾದ ಪುಟ್ಟೇಗೌಡ, ಬಿಳಿಗಿರಿ ರಂಗನಾಯಕ, ಪುಟ್ಟರಾಜು, ಗೌರಮ್ಮ, ಸುಶೀಲಮ್ಮ, ಸುಧಾ, ಪ್ರಕಾಶ್ , ಡೇರಿ ಇಓ ಪಿ.ಮಹೇಶ ಇದ್ದರು. ಹೊಂಗನೂರು ಡೇರಿಗೆ ಕಾಂಗ್ರೆಸ್ ಬೆಂಬಲಿಗರು ಅಧ್ಯಕ್ಷ ಉಪಾಧ್ಯಕ್ಷ ರಾಗಿ ಆಯ್ಕೆ ಯಾಗುತ್ತಿದ್ದ ಂತೆ



ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ನೂತನ ಅಧ್ಯಕ್ಷ , ಉಪಾಧ್ಯಕ್ಷ ರನ್ನು ಸನ್ಮಾನಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷೆ ವಿಶಾಲಾಕ್ಷಿ ದಿವಾಕರ್, ಉಪಾಧ್ಯಕ್ಷ ನವೀನ್ ಕುಮಾರ್, ಸದಸ್ಯರಾದ ರವಿಕುಮಾರ್, ಶಂಕರ್,ತಾ.ಪಂ. ಮಾಜಿ ಸದಸ್ಯ ಸಿ. ಮಹದೇವ್, ಜಿಲ್ಲಾ ಸೇವಾ ದಳದ ಅಧ್ಯಕ್ಷ ಹೊಂಗನೂರು ಜಯರಾಜ್, ಎಸ್ ಡಿಎಂಸಿ ಅಧ್ಯಕ್ಷ ಮಹದೇವಸ್ವಾಮಿ, ಮುಖಂಡ ರಾದ ಕುನ್ನನಾಯಕ, ಬಸವರಾಜನಾಯಕ, ಡೋಲು ನಂಜುಂಡ, ಎಚ್. ಬಿ.ಕುಮಾರ್, ಮದನ್, ಎಸ್ ಡಿಪಿ ದುಂಡಯ್ಯ ಇತರರು ಹಾಜರಿದ್ದರು.

# ಕಾರ್ಮಿಕರ ಸಂಘದಿಂದ ಪ್ರತಿಭಟನೆ

**ಚಾಮರಾಜನಗರ:** ಕೆಲಸದಿಂದ ವಜಾ ಮಾಡಿರುವ ಕಾರ್ಮಿಕರನ್ನು ಕೂಡಲೇ ಕೆಲಸಕ್ಕೆ ಮರು ನೇಮಕ ಮಾಡಿಕೊಳ್ಳಬೇಕು ಎಂದು ಆಗ್ರಹಿಸಿ ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಾರ್ಮಿಕರ ಸಂಘದ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಯಿತು.

ನಗರದ ಜಿಲ್ಲಾಸ್ಪತ್ರೆ ಮುಂಭಾಗ ಜಮಾಯಿಸಿದ ಪ್ರತಿಭಟನಾ ಕಾರರು ಕೆಲಕಾಲ ಪ್ರತಿಭಟನೆ ನಡೆಸಿದರು. ಸಿಮ್ಸ್‌ನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಆಗುತ್ತಿರುವ ಶೋಷಣೆ ಯನ್ನು ಪ್ರಶ್ನಿಸಿದ ಕಾರಣಕ್ಕಾಗಿ ಸುಳ್ಳು ಪ್ರಕರಣವನ್ನು ದಾಖಲಿಸಿ ಕೆಲಸದಿಂದ ವಜಾ ಮಾಡಿರುವ ಸಂಘದ ಪದಾಧಿಕಾರಿಗಳು ಹಾಗೂ ಕಾರ್ಮಿಕರನ್ನು ಕೂಡಲೇ ಕೆಲಸಕ್ಕೆ ಮರು ನೇಮಕ ಮಾಡಿಕೊಳ್ಳಬೇಕು.

ಉಪ ಕಾರ್ಮಿಕ ಆಯುಕ್ತರ ಆದೇಶದಂತೆ 5 ಜನ ಕಾರ್ಮಿಕರ 3 ತಿಂಗಳ ವೇತನವನ್ನು ಕೂಡಲೇ ಪಾವತಿ ಮಾಡಬೇಕು. ಅಲ್ಲದೇ ಶುಶ್ರೂಷಕರ ವೇತನವನ್ನು ಪಾವತಿ ಮಾಡಬೇಕು ಎಂದು ಆಗ್ರಹಿಸಿದರು. ಕೊರೋನಾ ವಾರಿಯರ್ಸ್ ಆಗಿ ಕೆಲಸ ಮಾಡಿದ ಶುಶ್ರೂಷಕರಾದ ಪೂರ್ಣಿಮಾ ಹಾಗೂ ರಂಜಿತಾರವರಿಗೆ ಹೆರಿಗೆ ರಜೆ ಹಾಕಿದ ಕಾರಣಕ್ಕಾಗಿ ಕೆಲಸ ನಿರಾಕರಿಸಿದ್ದು ತಕ್ಷಣವೇ ಕಾರ್ಮಿಕ ಅಧಿಕಾರಿಗಳ ಮುಂದೆ ಒಪ್ಪಿಕೊಂಡಂತೆ ಕೆಲಸ ನೀಡಬೇಕು. ಹೊರಗುತ್ತಿಗೆ ಏಜೆನ್ಸಿಯವರು ಸುಮಾರು 2 ವರ್ಷಗಳ ಕಾಲ ಪ್ರತಿ ತಿಂಗಳು ಸುಮಾರು 2 ಸಾವಿರ ರೂ. ಗಳನ್ನು ಕಡಿತ ಮಾಡಿರುವುದನ್ನು ಪ್ರಶ್ನಿಸಿದಕ್ಕಾಗಿ 2022ರ ಆಗಸ್ಟ್ ತಿಂಗಳಿಂದ ಕೆಲಸ ನಿರಾಕರಿಸಿರುವ ಸುಮಾರು 15 ಜನ ಕೊರೋನಾ ವಾರಿಯರ್ಸ್ ಆಗಿ ಕೆಲಸ ಮಾಡಿ ಕೆಲಸಕ್ಕೆ ಅರ್ಜಿ ಸಲ್ಲಿಸಿರುವ ಮೊದಲನೇ ಬ್ಯಾಚ್‌ನ ಶುಶ್ರೂಷಕರನ್ನು ಕೆಲಸಕ್ಕೆ ಮರು ನೇಮಕ ಮಾಡಿಕೊಳ್ಳಬೇಕು ಎಂದು ಒತ್ತಾಯಿಸಿದರು.



# ಇಂಡಿಯನ್ ನ್ಯಾಷನಲ್ ಆರ್ಮಿಗೆ ರಾಮ್‌ರಾವ್ ಕೊಡುಗೆ ಅಪಾರ

**ಚಾಮರಾಜನಗರ:** ಇಂಡಿಯನ್ ನ್ಯಾಷನಲ್ ಆರ್ಮಿಗೆ ಹಾಗೂ ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ರಾಮ್‌ರಾವ್ ಅವರ ಕೊಡುಗೆ ಅಪಾರವಾಗಿದೆ. ಇಂತಹ ಮಹನೀಯರ ಆದರ್ಶಗಳನ್ನು ಇಂದಿನ ಪೀಳಿಗೆಯ ಮಕ್ಕಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ದೇಶಕ್ಕೆ ಕೀರ್ತಿ ತರುವಂತಹ ಕೆಲವನ್ನು ಮಾಡಬೇಕು ಎಂದು ಭಾರತ ಸೇವಾದಳದ ಜಿಲ್ಲಾಧ್ಯಕ್ಷ ಬಿ.ವಿ.ವೆಂಕಟಪ್ಪನಾಗಪ್ಪಶೆಟ್ಟಿ ತಿಳಿಸಿದರು.

ನಗರದ ಭಾರತಸೇವಾದಳದ ಕಚೇರಿಯಲ್ಲಿ ಐಎನ್‌ಎ ರಾಮ್‌ರಾವ್ ಜನ್ಮದಿನದ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದ ಅವರು, ಇಂಡಿಯನ್ ನ್ಯಾಷನಲ್ ಆರ್ಮಿಯನ್ನು ನೇತಾಜಿ ಸುಭಾಷ್‌ಚಂದ್ರಬೋಸ್ ಅವರು ಕಟ್ಟಿದ್ದರು. ಅದಕ್ಕೆ ರಾಮ್‌ರಾವ್ ಅವರ ಕೊಡುಗೆ ಸಾಕಷ್ಟಿದೆ. ಅದಕ್ಕಾಗಿಯೇ ಅವರು ಐಎನ್‌ಎ ರಾಮ್‌ರಾವ್ ಎಂದೇ ಚಿರಪರಿಚಿತರಾದರು ಎಂದು ತಿಳಿಸಿದರು.

ಸೇವೆಗಾಗಿ ಬಾಳು ಎಂಬ ಧ್ಯೇಯವಾಕ್ಯದೊಂದಿಗೆ ನಾ.ಸು. ಹರ್ಡಿಕರ್ ಅವರಿಂದ ಸ್ಥಾಪಿತವಾದಂತಹ ಭಾರತ ಸೇವಾದಳದ ಸಂಸ್ಥೆ ಉಳಿವಿಗೆ ಐಎನ್‌ಎ ರಾಮ್‌ರಾವ್ ಅವರೇ ಮೂಲ ಕಾರಣ ಎಂದರೆ ತಪ್ಪಾಗಲಾರದು. ರಾಮ್‌ರಾವ್ ಅವರು ವಿಧಿವಶರಾದ ಸಂದರ್ಭದಲ್ಲಿ ಅವರ ಚಿತಾಭಸ್ಮ ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ಕಳುಹಿಸಿಕೊಡಲಾಯಿತು. ಅವರ ಚಿತಾಭಸ್ಮವನ್ನು ಎಲ್ಲರೂ ಗೌರವಪೂರ್ವಕವಾಗಿ ನದಿಗಳಲ್ಲಿ ವಿಸರ್ಜಿಸುವಂತಹ ಸೂಚನೆ ಇತ್ತು. ಅದನ್ನು ನಮ್ಮ ಜಿಲ್ಲೆಯ ಎಲ್ಲ ಸಾರ್ವಜನಿಕರು ಗೌರವ ನೀಡುವ ಮೂಲಕ ಅವರ ಚಿತಾಭಸ್ಮವನ್ನು ಗೌರವ ಪೂರ್ವಕವಾಗಿ ನದಿಯಲ್ಲಿ ವಿಸರ್ಜಿಸಲಾಯಿತು. ಆ



ಸಂದರ್ಭದಲ್ಲಿ ನಾನೂ ಕೂಡಾ ಸೇವಾದಳದಲ್ಲಿ ಸೇವೆ ಸಲ್ಲಿಸುತ್ತಿದ್ದೆ ಎಂದು ಸ್ಮರಿಸಿದರು.

ಜಿಲ್ಲಾ ಉಪಾಧ್ಯಕ್ಷ ಎಸ್.ನಾಗರಾಜು ಮಾತನಾಡಿ, ರಾಮ್‌ರಾವ್ ಅವರಂತ ದೇಶಭಕ್ತರ ಜನ್ಮದಿನಚರಣೆ ನಡೆಸುತ್ತಿರುವುದು ನಿಜಕ್ಕೂ ಅವಿಸ್ಮರಣೀಯ. ಸೇವೆಗಾಗಿ ಬಾಳು ಎಂಬ ತತ್ವ ಅಳವಡಿಸಿಕೊಂಡಿದ್ದಾರೆ. ಮಕ್ಕಳಲ್ಲೂ ಇಂತಹ ಮನೋಭಾವನೆಯನ್ನು ಬೆಳೆಸುವಂತಾಗಬೇಕು ಎಂದರು.

ಕೋಶಾಧ್ಯಕ್ಷರಾದ ವಿ.ಶ್ರೀನಿವಾಸಪ್ರಸಾದ್ ಅವರು ಮಾತನಾಡಿ, ಭಾರತ ಸೇವಾದಳದ ಮೊದಲ ದಂಡನಾಯಕರಾದ ಐಎನ್‌ಎ ರಾಮ್‌ರಾವ್ ಅವರು ನಮ್ಮ ಜಿಲ್ಲೆಯವರು ಎಂಬುದು ನಮಗೆ ಹೆಮ್ಮೆಯ ಸಂಗತಿ. ರಾಮ್‌ರಾವ್ ಅವರು ತಮ್ಮ ಜೀವನವನ್ನೆ ಸೇವೆಗಾಗಿಯೇ ಮುಡುಪಾಗಿಟ್ಟದ್ದ ಮಹಾತ್ ಚೇತನ ಎಂದು ಬಣ್ಣಿಸಿದರು. ಐಎನ್‌ಎ ರಾಮ್ ರಾವ್ ಅವರು ನಮ್ಮ ಚಾಮರಾಜನಗರ ಜಿಲ್ಲೆಯವರಾಗಿರುವ ಕಾರಣ ಅವರ ಸೇವಾ ಮನೋಭಾವನೆಯನ್ನು ಗುರುತಿಸುವ ಮೂಲಕ ನಗರದ ಪ್ರಮುಖ ಸ್ಥಳದಲ್ಲಿ ಅವರ ಪುತ್ಥಳಿಯನ್ನು ಪ್ರತಿಷ್ಠಾಪನೆ ಮಾಡಬೇಕು. ಯಾವುದಾದರೂ ಒಂದು ರಸ್ತೆಗೆ ಅವರ ಹೆಸರನ್ನು ನಾಮಕರಣ ಮಾಡಬೇಕು ಎಂದು ಇದೇ ಸಂದರ್ಭದಲ್ಲಿ ಸರ್ಕಾರಕ್ಕೆ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ವಿ.ಮಹದೇವಯ್ಯ, ತಾಲೂಕು ಸಮನ್ವಯ ಶಿಕ್ಷಣಾಧಿಕಾರಿ ರಾಜೇಂದ್ರ, ಜಿಲ್ಲಾ ಸಮಿತಿ ಸದಸ್ಯ ವೆಂಕಟೇಶ್ ನಾಯಕ್, ಚಾನಗರ ತಾಲೂಕು ಉಪಾಧ್ಯಕ್ಷರಾದ ಸಿ.ಮಲ್ಲಿಕಾರ್ಜುನ, ಜಿಲ್ಲಾ ಸಂಘಟಕ ಅರುಣ್ .ಈ, ಸಿಆರ್‌ಪಿ ಮಹೇಶ್ ಮತ್ತಿತರರಿದ್ದರು.

# ಸಂಜೆ ಟಿಪ್ಸ್


Freedom Rice Bran Oil

## ಹೊಸ ಅಭಿಯಾನವನ್ನು ಪ್ರಾರಂಭಿಸಿದ ಫ್ರೀಡಂ ರೈಸ್ ಬ್ರಾನ್ ಆಯಿಲ್

ಜೆಮಿನಿ ಎಡಿಬಲ್ಸ್ ಫ್ಯಾಟ್ಸ್ ಇಂಡಿಯಾ ಲಿಮಿಟೆಡ್ 'ಕೊಲೆಸ್ಟ್ರಾಲ್ ಕಿ ಸಫಾಯಿ ಕಾ ಸ್ಪೆಷಲಿಸ್ಟ್' ಎಂಬ ಶೀರ್ಷಿಕೆಯ ಫ್ರೀಡಂ ರೈಸ್ ಬ್ರ್ಯಾನ್ ಆಯಿಲ್ ಮೇಲೆ ಅಭಿಯಾನವನ್ನು ಆಯೋಜಿಸಿತು.. ಒಳಗಿನಿಂದ ಕೊಲೆಸ್ಟ್ರಾಲ್ ಅನ್ನು ಶುದ್ಧೀಕರಿಸಲು ಸಹಾಯ ಮಾಡುವ ಅಕ್ಕಿ ಹೊಟ್ಟು ಎಣ್ಣೆಯನ್ನು ಅಳವಡಿಸಿಕೊಳ್ಳಲು ವ್ಯಕ್ತಿಗಳಿಗೆ ಅಧಿಕಾರ ನೀಡಲು ಇದು ಅವರ ಚಾಲ್ತಿಯಲ್ಲಿರುವ ಪ್ರಚಾರ ಸರಣಿ 'ರೈಸ್ ಬ್ರ್ಯಾನ್ ಆಯಿಲ್ ಕರೇ ಅಂದರ್ ಸೆ ಸಫಾಯಿ' (ರೈಸ್ ಬ್ರಾನ್ ಆಯಿಲ್ ಒಳಗಿನಿಂದ ಸ್ವಚ್ಛಗೊಳಿಸುತ್ತದೆ) ಎರಡನೇ ಜಾಹೀರಾತು. ಫ್ರೀಡಂ ರೈಸ್ ಬ್ರಾನ್ ಆಯಿಲ್ ಪ್ರತಿ ಮಿಲಿಯನ್ಗೆ 10,000+ ಭಾಗಗಳ ಒರಿಝಾನಾಲ್ ಅನ್ನು ಹೊಂದಿದ್ದು, ನೈಸರ್ಗಿಕ ಉತ್ಕರ್ಷಣ ನಿರೋಧಕಗಳಾದ ಟೋಕೋಫೆರಾಲ್ ಮತ್ತು ಟೊಕೊಟ್ರಿನಾಲ್ಗಳಂತಹ ಪದಾರ್ಥಗಳನ್ನು ಹೊಂದಿರುವುದರಿಂದ ದೈನಂದಿನ ಅಡುಗೆಗಾಗಿ ಫ್ರೀಡಂ ರೈಸ್ ಬ್ರಾನ್ ಎಣ್ಣೆಯನ್ನು ಬಳಸುವ ಮಹತ್ವದ ಬಗ್ಗೆ ಸಾರ್ವಜನಿಕರಿಗೆ ತಿಳಿಸುವ ಉದ್ದೇಶವನ್ನು ಈ ಅಭಿಯಾನ ಹೊಂದಿದೆ. ಅವರು ಹೃದಯದ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುತ್ತಾರೆ ಮತ್ತು ಉತ್ತಮ ಕೊಲೆಸ್ಟ್ರಾಲ್ನ ಹೆಚ್ಚಳವನ್ನು ಸಕ್ರಿಯವಾಗಿ ಉತ್ತೇಜಿಸುತ್ತಾರೆ ಮತ್ತು ಕೆಟ್ಟ ಕೊಲೆಸ್ಟ್ರಾಲ್ ಮಟ್ಟವನ್ನು ಪರಿಣಾಮಕಾರಿಯಾಗಿ ಕಡಿಮೆ ಮಾಡುತ್ತಾರೆ, ಗ್ರಾಹಕರಿಗೆ ತಮ್ಮ ಯೋಗಕ್ಷೇಮವನ್ನು ಹೆಚ್ಚಿಸಲು ಮಾರ್ಗವನ್ನು ನೀಡುತ್ತಾರೆ.ಈ ಅಭಿಯಾನವು 'ಜಮಿ ಹುಯಿ ಚಿಕನಾಯಿ ಕೊ ಸಾಫ್ ಕರ್ನೆ ಕೆ ಲಿಯೇ ಹಮ್ ಸ್ಪೆಷಲಿಸ್ಟ್ ಕೊ ಬುಲಾತೆ ಹೈ' (ಅಡುಗೆಮನೆಯ ಚಿಮಣಿಯಿಂದ ಮೊಂಡುತನದ ಕಲೆಗಳನ್ನು ಸ್ವಚ್ಛಗೊಳಿಸಲು ನಾವು ತಜ್ಞರನ್ನು ಕರೆಯುತ್ತೇವೆ) ಎಂಬ ಸಂದೇಶದ ಸುತ್ತ ಸುತ್ತುತ್ತದೆ, ಇದು ಬಿಲ್ಟ್-ಅಪ್ ಕೊಲೆಸ್ಟ್ರಾಲ್ ಅನ್ನು ತೆರವುಗೊಳಿಸುವುದರ ಮೇಲೆ ಕೇಂದ್ರೀಕರಿಸುತ್ತದೆ. ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುವ ಮೂಲಕ ಉತ್ತಮ ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸುವ ಮೂಲಕ ಹೃದಯದ ಆರೋಗ್ಯವನ್ನು ಸಕ್ರಿಯವಾಗಿ ಬೆಂಬಲಿಸುತ್ತದೆ.


## ಭೇಲ್ ಪುರಿ ಸ್ಯಾಂಡ್ವಿಚ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಮಂಡಕ್ಕಿ ನೂರು ಗ್ರಾಂ, ಈರುಳ್ಳಿ, ಟೊಮ್ಯಾಟೊ (ಚಿಕ್ಕದಾಗಿ ಹೆಚ್ಚಿದ್ದು), ಆಲೂಗಡ್ಡೆ (ಬೇಯಿಸಿ, ಚಿಕ್ಕದಾಗಿ ಹೆಚ್ಚಿದ್ದು), ತುರಿದ ಕ್ಯಾರೆಟ್, ಪುದೀನಾ ಚಟ್ನಿ, ಉಪ್ಪು, ನಿಂಬೆರಸ, ಸೇವ್ ಪುರಿ, ಕೊತ್ತಂಬರಿ ಸೊಪ್ಪು, ಸ್ಯಾಂಡ್ವಿಚ್ ಬ್ರೆಡ್.

### ಮಾಡುವ ವಿಧಾನ

**ಪುದೀನಾ ಚಟ್ನಿ ತಯಾರಿಸಲು:** ಒಂದು ಕಟ್ಟು ಪುದೀನಾ, ಒಂದು ಕಟ್ಟು ಕೊತ್ತಂಬರಿ ಸೊಪ್ಪು, ಹಸಿಮೆಣಸನ್ನು ನಯವಾಗಿ ಮಿಕ್ಸಿಯಲ್ಲಿ ಅರೆಯಿರಿ. ಅರೆಯುವಾಗ ಕೊಂಚ ನೀರು ಮತ್ತು ಉಪ್ಪನ್ನು ಸೇರಿಸಿ. ಚಟ್ನಿ ತಯಾರಿಸಿದ ಬಳಿಕ ಬದಿಗೆ ತೆಗೆದಿಡಿ. ಬ್ರೆಡ್ ಪೀಸ್ ಗೆ ಸವರಲು ಈ ಚಟ್ನಿಯನ್ನು ಬಳಸಬೇಕು.

**ಮಾಡುವ ವಿಧಾನ:** ಒಂದು ಪಾತ್ರೆಯಲ್ಲಿ ಈರುಳ್ಳಿ, ಆಲೂಗಡ್ಡೆ, ಟೊಮ್ಯಾಟೋ, ಕ್ಯಾರೆಟ್ ಮತ್ತು ಮಂಡಕ್ಕಿ ಸೇರಿಸಿ ಚೆನ್ನಾಗಿ ಕಲಸಿ. ಈ ಪಾತ್ರೆಗೆ ಒಂದು ದೊಡ್ಡ ಚಮಚ ಪುದೀನಾ ಚಟ್ನಿ, ನಿಂಬೆರಸ, ಉಪ್ಪು ಸೇರಿಸಿ ಚಮಚ ಬಳಸಿ ಕಲಸಿ. ಇದಕ್ಕೆ ಸೇವ್ ಪುರಿ ಮತ್ತು ಕೊತ್ತಂಬರಿ ಸೊಪ್ಪು ಹಾಕಿ ಕಲಸಿ. ಈಗ ಸಾಂಡ್ವಿಚ್ ತಯಾರಿಸಲು ಬ್ರೆಡ್ ನ ಒಂದು ಭಾಗಕ್ಕೆ (ಅಥವಾ ಬನ್ ನ ಒಳಭಾಗ) ಕೊಂಚ ಚಟ್ನಿ ಸವರಿ. ಸವರಿದ ಹೋಳಿನ ಮೇಲೆ ಭೇಲ್ ಪುರಿಯನ್ನು ದಪ್ಪನಾಗಿ ಹರಡಿ. ಈಗ ಇನ್ನೊಂದು ಬ್ರೆಡ್ ನ್ನು ಇದರ ಮೇಲಿರಿಸಿ. ರುಚಿಯಾದ ಭೇಲ್ ಪುರಿ ಸ್ಯಾಂಡ್ವಿಚ್ ಈಗ ತಯಾರಾಗಿದೆ. ಇದನ್ನು ಗ್ರೀನ್ ಚಟ್ನಿಯೊಂದಿಗೆ ಆಸ್ವಾದಿಸಿ.

## ನಟಿ ಜಯಪ್ರದಾ ಜೀವನದ ಗುಟ್ಟು



ಭಾರತೀಯ ಚಿತ್ರರಂಗದಲ್ಲಿ ಅತ್ಯಂತ ಸುಂದರ ನಟಿಯರಲ್ಲಿ ಅಗ್ರ ಸ್ಥಾನದಲ್ಲಿರುವ ಜಯಪ್ರದಾ ಅವರು ತಮ್ಮ ಅಲೌಕಿಕ ಸೌಂದರ್ಯ, ಅಗಾಧ ಪ್ರತಿಭೆ ಮತ್ತು ಯಶಸ್ವಿ ವೃತ್ತಿಜೀವನದಿಂದ ಇಂದಿಗೂ ಅಭಿಮಾನಿಗಳಿಗೆ ಅಚ್ಚು ಮೆಚ್ಚು.. ಆದರೆ ಈ ಹಿರಿಯ ನಟಿ ವೈಯಕ್ತಿಕ ಬದುಕಿನ ಬಗ್ಗೆ ಇನ್ನೂ ಅವರ ಅಭಿಮಾನಿಗಳಿಗೆ ತಿಳಿದಿಲ್ಲ..

ಆಂಧ್ರಪ್ರದೇಶದ ರಾಜಮಂಡ್ರಿಯಲ್ಲಿ ಲಲಿತಾ ರಾಣಿಯಾಗಿ ಜನಿಸಿದ ಜಯಪ್ರದಾ ಭಾರತೀಯ ಚಿತ್ರರಂಗದ ಅಪ್ರತಿಮ ನಟಿಯಾಗಿ 70 ಮತ್ತು 80 ರ ದಶಕದ ಸಿನಿರಂಗವನ್ನು ಆಳ್ವಿಕೆ ಮಾಡಿದ ತಾರೆ... 1985 ರ ಸುಮಾರಿಗೆ ಅವರು ಬಾಲಿವುಡ್ನ ಅತಿ ಹೆಚ್ಚು ಸಂಭಾವನೆ ಪಡೆಯುವ ನಟಿಯಾಗಿದ್ದರು.. ಇದು ಅವರ ವೃತ್ತಿಜೀವನದ ಉತ್ತುಂಗದ ಸಮಯವಾಗಿತ್ತು. ಆದರೆ ಇದೇ ವೇಳೆ ಎದುರಾಗಿದ್ದ ಸಂಕಷ್ಟಗಳನ್ನು ನಿವಾರಿಸಲು ಜಯಪ್ರದಾ ಜೀವನದಲ್ಲಿ ಬೆಳಕಾಗಿ ಬಂದಿದ್ದು.. ನಿರ್ಮಾಪಕ ಶ್ರೀಕಾಂತ್.. ಅಂದಿನಿಂದ ಅವರೊಂದಿಗೆ ಬೆಳೆದ ಸ್ನೇಹ.. ಪ್ರೀತಿಯಾಗಿ ತಿರುಗಿತು.. ಶ್ರೀಕಾಂತ್ ನಹತಾ ಮತ್ತು ಜಯಪ್ರದಾ ಅವರ ಪ್ರೇಮ ಪ್ರಕರಣ ಮತ್ತು ಮದುವೆ ಮನರಂಜನಾ ಜಗತ್ತಿನಲ್ಲಿ ಸಾಕಷ್ಟು ವಿವಾದಗಳನ್ನು ಸೃಷ್ಟಿಸಿತ್ತು. ಏಕೆಂದರೆ ಶ್ರೀಕಾಂತ್ ಅವರಿಗೆ ಮೊದಲೇ ಮದುವೆಯಾಗಿತ್ತು.. ಮದುವೆಯಾಗಿ ಮೂರು ಮಕ್ಕಳಿರುವವವರನ್ನು ಮದುವೆಯಾಗಿದ್ದಾರೆ ಎನ್ನುವ ದೊಡ್ಡ ಆರೋಪವನ್ನು ಹೊತ್ತುಕೊಂಡರು.. ದುರಂತವೆಂದರೇ ಶ್ರೀಕಾಂತ್ ಅವರು ತಮ್ಮ ಮೊದಲ ಹೆಂಡತಿಗೆ ವಿಚ್ಛೇದನ ನೀಡಿರಲಿಲ್ಲ. ಆದರೂ ಜಯಪ್ರದಾ ಹುಚ್ಚಿಯಂತೆ ಶ್ರೀಕಾಂತ್ ಅವರನ್ನು ಪ್ರೀತಿಸುತ್ತಿದ್ದರು.. 1986 ರ ಸಂದರ್ಶನವೊಂದರಲ್ಲಿ, ಜಯಪ್ರದಾ ವಿವಾಹಿತ ವ್ಯಕ್ತಿ ಶ್ರೀಕಾಂತ್ ನಹತಾ ಅವರೊಂದಿಗಿನ ಸಂಬಂಧದ ಬಗ್ಗೆ ಮಾತನಾಡಿದ್ದರು.



## 'ಜೋಳದ ರೊಟ್ಟಿ' ಗುಟ್ಟು



### ಹೆಲ್ತ್ ಟಿಪ್ಸ್

ಜೋಳವು ಸಿರಿಧಾನ್ಯಗಳಲ್ಲಿ ಒಂದಾಗಿದ್ದು, ಅನೇಕ ಆರೋಗ್ಯ ಪ್ರಯೋಜನಗಳನ್ನ ಒಂದಿದೆ. ಜೋಳವು ಪೋಷಕಾಂಶಗಳಿಂದ ಸಮೃದ್ಧವಾಗಿದ್ದು, ಜೋಳದಿಂದ ತಯಾರಿಸಿದ ರೊಟ್ಟಿ ತುಂಬಾ ಶಕ್ತಿಯುತ ಆಹಾರವಾಗಿದೆ. ಯಾಕಂದ್ರೆ, ಜೋಳದ ಹಿಟ್ಟು ಆರೋಗ್ಯಕ್ಕೆ ತುಂಬಾನೇ ಒಳ್ಳೆಯದು.

ಜೋಳದ ರೊಟ್ಟಿ ತಿನ್ನುವುದರಿಂದ ರೋಗ ನಿರೋಧಕ ಶಕ್ತಿ ಹೆಚ್ಚಾಗುತ್ತದೆ. ಆದ್ದರಿಂದ ಇದನ್ನು ತಿನ್ನುವುದು ರೋಗಗಳ ವಿರುದ್ಧ ಹೋರಾಡುವ ಶಕ್ತಿಯನ್ನ ನೀಡುತ್ತದೆ. ಇದರಲ್ಲಿ ನಾರಿನಂಶವೂ ಅಧಿಕವಾಗಿದೆ ಮತ್ತು ಜೀರ್ಣಕ್ರಿಯೆಗೆ ತುಂಬಾ ಒಳ್ಳೆಯದು.

ಜೋಳದಿಂದ ತಯಾರಿಸಿದ ರೊಟ್ಟಿಗಳಲ್ಲಿ ಕಬ್ಬಿಣದ ಅಂಶ ಲಭ್ಯವಿದ್ದು, ರಕ್ತಹೀನತೆ ಸಮಸ್ಯೆಯಿಂದ ಬಳಲುತ್ತಿರುವವರು ಇವುಗಳನ್ನ ತಿನ್ನುವುದ್ರಿಂದ ಸಮಸ್ಯೆಯಿಂದ ಹೊರಬರಬಹುದು. ನೀವು ಈ ರೊಟ್ಟಿಗಳನ್ನ ಆಗಾಗ್ಗೆ ತಿನ್ನುತ್ತಿದ್ದರೆ, ದೇಹದಲ್ಲಿ ವಯಸ್ಸಾದ ಛಾಯೆಗಳು ಸಹ ಕಡಿಮೆಯಾಗುತ್ವೆ.

ಅವು ದೇಹದಲ್ಲಿನ ಫ್ರೀ ರಾಡಿಕಲ್'ಗಳನ್ನ ಸಹ ನಾಶಪಡಿಸುತ್ತವೆ. ಅಂತೆಯೇ, ತೂಕ ಇಳಿಸಿಕೊಳ್ಳಲು ಬಯಸುವವರು ಈ ರೊಟ್ಟಿಗಳನ್ನ ತಿನ್ನುವುದ್ರಿಂದ ತ್ವರಿತವಾಗಿ ತೂಕ ಇಳಿಸಿಕೊಳ್ಳಬಹುದು. ಇನ್ನು ರೊಟ್ಟಿ ತಕ್ಷಣ ಶಕ್ತಿಯ ಮಟ್ಟವನ್ನ ಹೆಚ್ಚಿಸುತ್ತದೆ.

ಇದು ದೇಹದಲ್ಲಿನ ಫ್ರೀ ರಾಡಿಕಲ್ಗಳನ್ನು ಸಹ ನಾಶಪಡಿಸುತ್ತದೆ. ಜೋಳದ ರೊಟ್ಟಿ ತಿನ್ನುವುದರಿಂದ ಕೊಲೆಸ್ಟ್ರಾಲ್ ಮಟ್ಟವನ್ನ ಕಡಿಮೆ ಮಾಡಬಹುದು. ಹೃದಯದ ಆರೋಗ್ಯಕ್ಕೆ ಒಳ್ಳೆಯದು. ಅಂತೆಯೇ, ಮಧುಮೇಹ ಮತ್ತು ಬಿಪಿ ಇರುವವರು ಸಹ ರೊಟ್ಟಿ ತಿನ್ನುವ ಉತ್ತಮ.

## ಗ್ರೀನ್ ಟೀ ಹೇರ್ ಪ್ಯಾಕ್

### ಬ್ಯೂಟಿ ಟಿಪ್ಸ್



ಗ್ರೀನ್ ಟೀ ಆರೋಗ್ಯಕ್ಕೆ ಉತ್ತಮ. ಅಲ್ಲದೇ ಇದರಿಂದ ಕೂದಲಿನ ಆರೋಗ್ಯವನ್ನು ಕೂಡ ಕಾಪಾಡಿಕೊಳ್ಳಬಹುದು. ಇದರಲ್ಲಿರುವ ಪೋಷಕಾಂಶಗಳು ನೆತ್ತಿಯ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಉದ್ದವಾದ, ಬಲವಾದ ಕೂದಲನ್ನು ಹೊಂದಲು ಸಹಾಯ ಮಾಡುತ್ತದೆ. ಹಾಗಾಗಿ ಕೂದಲಿನ ಆರೋಗ್ಯಕ್ಕಾಗಿ ಗ್ರೀನ್ ಟೀಯಿಂದ ತಯಾರಿಸಿದ ಹೇರ್ ಪ್ಯಾಕ್ ಗಳನ್ನು ಬಳಸಿ. 1/2 ಕಪ್ ಬಿಸಿ ನೀರಿಗೆ ಗ್ರೀನ್ ಟೀ ಎಲೆಗಳನ್ನು ಸೇರಿಸಿ 5 ನಿಮಿಷ ಕುದಿಸಿ. ಈ ನೀರಿಗೆ ಸಾಸಿವೆ ಪುಡಿಯನ್ನು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಈ ಪೇಸ್ಟ್ ನ್ನು ನೆತ್ತಿಗೆ ಹಚ್ಚಿ ಕೂದಲನ್ನು 15 ನಿಮಿಷಗಳ ಕಾಲ ಮಸಾಜ್ ಮಾಡಿ. 40 ನಿಮಿಷಗಳ ಕಾಲ ಹಾಗೆ ಬಿಟ್ಟು ಬಳಿಕ ವಾಶ್ ಮಾಡಿ, ಇದನ್ನು ವಾರಕ್ಕೊಮ್ಮೆ ಮಾಡಿದರೆ ಉತ್ತಮ ಫಲಿತಾಂಶ ಪಡೆಯಬಹುದು.

ಗ್ರೀನ್ ಟೀ ಪುಡಿಯನ್ನು ತೆಗೆದುಕೊಂಡು ಅದಕ್ಕೆ 1 ಚಮಚ ಆಲಿವ್ ಆಯಿಲ್ 1 ಚಮಚ ಬೆಳ್ಳುಳ್ಳಿ ಪೇಸ್ಟ್ ಸೇರಿಸಿ ಮಿಕ್ಸ್ ಮಾಡಿ ಒದ್ದೆ ಕೂದಲಿಗೆ ಹಚ್ಚಿ. 15 ನಿಮಿಷಗಳ ಕಾಲ ಮಸಾಜ್ ಮಾಡಿ. 1 ಗಂಟೆಗಳ ಕಾಲ ಹಾಗೆ ಬಿಟ್ಟು ಬಳಿಕ ವಾಶ್ ಮಾಡಿ, ಇದನ್ನು ತಿಂಗಳಿಗೆ 2 ಬಾರಿ ಮಾಡಿ.



## ಜನಪ್ರಿಯವಾದ ಇಂಡೋನೇಷ್ಯಾದ ಬಾಲಿ ದ್ವೀಪ

ಇಂಡೋನೇಷ್ಯಾದ ಬಾಲಿ ದ್ವೀಪ ಜನಪ್ರಿಯವಾದ ಪ್ರವಾಸಿ ತಾಣವಾಗಿದೆ. ತಿಳಿನೀಲಿಯ ಜಲರಾಶಿ, ದಟ್ಟನೆಯ ಕಾಡು, ದ್ವೀಪದ ಅಂದವನ್ನು ಹೆಚ್ಚಿಸಿವೆ.

ನುಸಾ ಪೆನಿಡಾ, ನುಸಾ ಲೆಂಬೊಂಗನ್ ಸಿನೆನನ್ ದ್ವೀಪಗಳಿಂದ ಬಾಲಿ ಆವೃತವಾಗಿದೆ. ಪಶ್ಚಿಮದಲ್ಲಿ ಜಾವಾ, ಪೂರ್ವದಲ್ಲಿ ಲೊಂಬೊಲ್ ದ್ವೀಪಗಳಿವೆ.

ಈ ದ್ವೀಪದಲ್ಲಿ ಬಹುತೇಕರು ಹಿಂದೂ ಅಲ್ಪಸಂಖ್ಯಾತರಾಗಿದ್ದಾರೆ. ಹಾಗಾಗಿ ಇಲ್ಲಿ ಭಾರತೀಯ ಸಂಸ್ಕೃತಿಯನ್ನು ಕಾಣಬಹುದಾಗಿದೆ.

1980 ರ ಬಳಿಕ ಬಾಲಿಗೆ ಬರುವ ಪ್ರವಾಸಿಗರ ಸಂಖ್ಯೆ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗಿದೆ. ಬಾಲಿಯಲ್ಲಿ ಪ್ರವಾಸೋದ್ಯಮ ಸಂಬಂಧಿತ ವ್ಯವಹಾರ ಆರ್ಥಿಕತೆಯ ಶೇ. 80 ರಷ್ಟು ಪಾಲು ಹೊಂದಿದೆ. ಸಾಂಪ್ರದಾಯಿಕ ಮತ್ತು ಆಧುನಿಕ ನೃತ್ಯ, ಶಿಲ್ಪಕಲೆ, ಚಿತ್ರಕಲೆ, ಚರ್ಮ, ಲೋಹದ ಕೆಲಸ, ಸಂಗೀತವನ್ನು ಒಳಗೊಂಡಂತೆ ಹೆಚ್ಚು ಅಭಿವೃದ್ಧಿ ಹೊಂದಿದ ಕಲೆಗಳಿಗೆ ಹೆಸರುವಾಸಿಯಾಗಿದೆ.

ಮಾರ್ಚ್ 2017 ರಲ್ಲಿ ಟ್ರಿಪ್ ಅಡ್ವೈಸರ್ ಪ್ರಯಾಣಿಕರ ಆಯ್ಕೆ ಪ್ರಶಸ್ತಿಯಲ್ಲಿ ಬಾಲಿದ್ವೀಪಕ್ಕೆ ವಿಶ್ವದಲ್ಲಿ ಅಗ್ರಸ್ಥಾನವನ್ನು ನೀಡಲಾಗಿದೆ.

ಇಲ್ಲಿನ ಬಾಲಿ ಕೋರಲ್(ಹವಳ) ಪ್ರದೇಶ ಸಮುದ್ರದ ವೈವಿಧ್ಯತೆಯನ್ನು ಒಳಗೊಂಡಿದೆ. ಬಾಲಿಯಲ್ಲಿ ಚಿಲುಮೆಯೊಂದರ ನೀರಲ್ಲಿ ಸ್ನಾನ ಮಾಡಿದರೆ ಮೈ ಮನಸ್ಸಿನ ಜೊತೆಗೆ ಆತ್ಮವೂ ಶುದ್ಧಿಯಾಗುತ್ತದೆ ಎಂಬ ನಂಬಿಕೆ ಇಲ್ಲಿನ ಹಿಂದೂಗಳಲ್ಲಿದೆ. ಪ್ರಕೃತಿಯಲ್ಲಿ ದೇವರನ್ನು ಕಾಣಬೇಕೆಂಬ ನಂಬಿಕೆಗೆ ಅನುಗುಣವಾಗಿ ಈ ಪ್ರದೇಶವಿದೆ. ದೇವರಿಗೂ ಆಕರ್ಷಣೆನಿಸುವಷ್ಟು ಚೆಂದದ ದ್ವೀಪವಾಗಿದೆ ಬಾಲಿ. ಉಬುಡ್ ಸಮೀಪದ ಮನುಕಯಾ ಪ್ರಾಂತ್ಯದ ತಂಪಕ್ ಸಿರಿಂಗ್ ನಲ್ಲಿರುವ ದೇವಾಲಯ, ಚಿಲುಮೆ ಬಾಲಿಯ ಜನರ ನಂಬಿಕೆಯ ಸ್ಥಳಗಳಾಗಿವೆ. ನೀವು ಒಮ್ಮೆ ಬಾಲಿಗೆ ಭೇಟಿ ನೀಡಿ ಅಲ್ಲಿನ ಸೌಂದರ್ಯವನ್ನು ಸವಿದು ಬನ್ನಿ. ಅಂತರರಾಷ್ಟ್ರೀಯ ಪ್ರವಾಸಗಳನ್ನು ಆಯೋಜಿಸುವ ಸಂಸ್ಥೆಗಳನ್ನು ಸಂಪರ್ಕಿಸಿದರೆ ಹೆಚ್ಚಿನ ಮಾಹಿತಿ ಸಿಗುತ್ತದೆ. ಮಾಹಿತಿ ಪಡೆದು ಪೂರ್ವ ಸಿದ್ಧತೆಯೊಂದಿಗೆ ಪ್ರವಾಸ ಕೈಗೊಳ್ಳಿ.





ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com


## ರಾಶಿ ಭವಿಷ್ಯ

**ಮೇಷ:** ನೆಮ್ಮದಿ ಶಾಂತಿ, ಗೆಳೆಯರಿಂದ ಸಹಾಯ, ಮಾನಸಿಕ ಒತ್ತಡ, ಮಾತಿಗೆ ಮರುಳಾಗದಿರಿ.

**ವೃಷಭ:** ಬಹು ಸೌಖ್ಯ, ಮಾನಸಿಕ ಒತ್ತಡ, ಮೂಗಿನ ಮೇಲೆ ಕೋಪ, ಚೋರ ಭಯ, ಅಕಾಲ ಭೋಜನ.

**ಮಿಥುನ:** ಆಕಸ್ಮಿಕ ಖರ್ಚು, ಪರರ ಮಾತಿಗೆ ಕಿವಿ ಕೊಡಬೇಡಿ, ಸಾಲ ಭಾದೆ, ಸ್ತ್ರೀಯರು ತಾಳ್ಮೆಯಿಂದ ಇರಿ.

**ಕಟಕ:** ನಾನಾ ವಿಚಾರಗಳಲ್ಲಿ ಆಸಕ್ತಿ, ನೀಚ ಜನರಿಂದ ದೂರವಿರಿ, ವಿದೇಶ ಪ್ರಯಾಣ, ಕುಟುಂಬ ಸೌಖ್ಯ.

**ಸಿಂಹ:** ಕೆಲಸ ಕಾರ್ಯಗಳಲ್ಲಿ ವಿಳಂಬ, ವಿಪರೀತ ವ್ಯಸನ, ಅಧಿಕ ತಿರುಗಾಟ, ಸರ್ಕಾರಿ ಕೆಲಸದವರಿಗೆ ತೊಂದರೆ.

**ಕನ್ಯಾ:** ಮನಸ್ತಾಪ, ಹಿತಶತ್ರು ಭಾದೆ, ಕಾರ್ಯ ಸಾಧನೆ, ಲಾಭ.

**ತುಲಾ:** ಮಿತ್ರರಿಂದ ನಿಂದನೆ, ಅನರ್ಥ, ಮಕ್ಕಳಿಂದ ನೋವು, ರೋಗಭಾದೆ, ಯತ್ನ ಕಾರ್ಯಭಂಗ.

**ವೃಶ್ಚಿಕ:** ಎಷ್ಟೇ ಹಣ ಬಂದರೂ ಉಳಿಯುವುದಿಲ್ಲ, ಸ್ವಯಂಕೃತ ಅಪರಾಧ, ಕಾರ್ಯ ವಿಘಾತ, ವಾದ ವಿವಾದ.

**ಧನಸ್ಸು:** ಕೆಲಸದಲ್ಲಿ ಏಕಾಗ್ರತೆ, ಗುರಿಯನ್ನು ಸಾಧಿಸುವಿರಿ, ಸ್ತ್ರೀಯರಿಗೆ ಶುಭ, ಹಿರಿಯರಲ್ಲಿ ಭಕ್ತಿ.

**ಮಕರ:** ರಾಜಕೀಯ ಕ್ಷೇತ್ರದವರಿಗೆ ಶುಭ, ದೈವಿಕ ಚಿಂತನೆ, ಅನ್ಯರ ಮನಸ್ಸು ಗೆಲ್ಲುವಿರಿ, ರೋಗಭಾದೆ.

**ಕುಂಭ:** ಅಮೂಲ್ಯ ವಸ್ತುಗಳ ಖರೀದಿ, ಹಣಕಾಸಿನ ಪರಿಸ್ಥಿತಿ ಉತ್ತಮ, ಪ್ರತಿಷ್ಠಿತ ಜನರ ಪರಿಚಯ.

**ಮೀನ:** ಬಾಕಿ ವಸೂಲಿ, ಉದ್ಯೋಗದಲ್ಲಿ ಅಭಿವೃದ್ಧಿ, ಧನ ಲಾಭ, ಅನಾವಶ್ಯಕ ವಿಷಯಗಳಿಂದ ದೂರವಿರಿ.

## ಎಪಿಲೆಪ್ಸಿ ಜಾಗೃತಿ ದಿನ




ಈ ಮೆದುಳಿನ ಅಸ್ವಸ್ಥತೆಯ ಬಗ್ಗೆ ಸಾರ್ವಜನಿಕರ ತಿಳುವಳಿಕೆಯನ್ನು ಹೆಚ್ಚಿಸಲು ಮತ್ತು ಅದರ ಸುತ್ತಲಿನ ಭಯ ಮತ್ತು ಕಳಂಕವನ್ನು ತೊಡೆದುಹಾಕಲು ವಾರ್ಷಿಕವಾಗಿ ಮಾರ್ಚ್ 26 ರಂದು ಎಪಿಲೆಪ್ಸಿ ಜಾಗೃತಿ ದಿನ ಅಥವಾ ನೇರಳೆ ದಿನವನ್ನು ಆಚರಿಸಲಾಗುತ್ತದೆ. ಗ.ಖ.ನಲ್ಲಿ 3.5 ದಶಲಕ್ಷಕ್ಕೂ ಹೆಚ್ಚು ಜನರು ಅಪಸ್ಮಾರದಿಂದ ಬಳಲುತ್ತಿದ್ದಾರೆ ಮತ್ತು ಪ್ರಪಂಚದಾದ್ಯಂತ 50 ದಶಲಕ್ಷಕ್ಕೂ ಹೆಚ್ಚು ಜನರು ಅಪಸ್ಮಾರದಿಂದ ಬಳಲುತ್ತಿದ್ದಾರೆ ಎಂದು ನೀವು ತಿಳಿದಿರುವ ಸಾಧ್ಯತೆಯಿದೆ. ಒಳ್ಳೆಯ ಸುದ್ದಿ ಎಂದರೆ ಅಪಸ್ಮಾರವನ್ನು ಸರಿಯಾಗಿ ಪತ್ತೆಹಚ್ಚಿ ಚಿಕಿತ್ಸೆ ನೀಡಿದರೆ ಸುಲಭವಾಗಿ ನಿರ್ವಹಿಸಬಹುದು, ಆದ್ದರಿಂದ ಅರಿವು ಮತ್ತು ಸಂಶೋಧನೆ ಮುಖ್ಯವಾಗಿದೆ. ಕೆನಡಾದ ನೋವಾ ಸ್ಕಾಟಿಯಾದ ಕ್ಯಾಸಿಡಿ ಮೇಗನ್ ಅವರು ಮಾರ್ಚ್ 26, 2008 ರಂದು ಮೊದಲ ಕಾರ್ಯಕ್ರಮದೊಂದಿಗೆ ಎಪಿಲೆಪ್ಸಿ ಜಾಗೃತಿ ದಿನವನ್ನು ಸ್ಥಾಪಿಸಿದರು. ತನ್ನದೇ ಆದ ರೋಗನಿರ್ಣಯ ಮತ್ತು ಅಪಸ್ಮಾರದೊಂದಿಗೆ ಬದುಕುವ ಹೋರಾಟದಿಂದ ಪ್ರೇರೇಪಿಸಲ್ಪಟ್ಟ ಅವರು, ಈ ಸಾಮಾನ್ಯ ನರವೈಜ್ಞಾನಿಕ ಅಸ್ವಸ್ಥತೆಯನ್ನು ಅರ್ಥಮಾಡಿಕೊಳ್ಳುವ ಪ್ರತಿಯೊಬ್ಬರ ಪ್ರಾಮುಖ್ಯತೆಯನ್ನು ಅವರು ಅರಿತುಕೊಂಡರು. ಜನರು ಕಲಿಯಲು, ತೊಡಗಿಸಿಕೊಳ್ಳಲು ಮತ್ತು ಸಾರ್ವಜನಿಕರ ಅಪಸ್ಮಾರದ ಶಿಕ್ಷಣವನ್ನು ಬೆಂಬಲಿಸಲು ಮತ್ತು ಅದರ ಸುತ್ತಲಿನ ಪುರಾಣಗಳು ಮತ್ತು ಭಯಗಳನ್ನು ಹೋಗಲಾಡಿಸಲು ಅವಳು ಒಂದು ಮಾರ್ಗವನ್ನು ಸೃಷ್ಟಿಸಿದಳು. ಅಪಸ್ಮಾರವು ಮೆದುಳಿನಲ್ಲಿನ ವಿದ್ಯುತ್ ಅಡಚಣೆಗಳಿಂದ ಉಂಟಾಗುತ್ತದೆ, ಇದರ ಪರಿಣಾಮವಾಗಿ ವಿವಿಧ ರೀತಿಯ ರೋಗಗ್ರಸ್ತವಾಗುವಿಕೆಗಳು ಉಂಟಾಗುತ್ತವೆ. ಏನಾಗುತ್ತಿದೆ ಎಂಬುದನ್ನು ಅರ್ಥಮಾಡಿಕೊಳ್ಳದ ಜನರಿಗೆ ಇದು ಭಯಾನಕ ಸ್ಥಿತಿಯಾಗಿರಬಹುದು, ಇದು ಅನಾರೋಗ್ಯ ಮತ್ತು ಅದರೊಂದಿಗೆ ವಾಸಿಸುವವರ ಸಾಮರ್ಥ್ಯಗಳ ಬಗ್ಗೆ ಅನೇಕ ಅನಗತ್ಯ ಊಹೆಗಳು ಮತ್ತು ಕಾನೂನುಗಳಿಗೆ ಕಾರಣವಾಗಿದೆ. ಮೈಗ್ರೇನ್, ಪಾರ್ಶ್ವವಾಯು ಮತ್ತು ಆಲ್ಝೈಮರ್ನ ನಂತರ ಇದು ನಾಲ್ಕನೇ ಸಾಮಾನ್ಯ ನರವೈಜ್ಞಾನಿಕ ಅಸ್ವಸ್ಥತೆಯಾಗಿದೆ. 26 ಅಮೆರಿಕನ್ನರಲ್ಲಿ ಒಬ್ಬರು ತಮ್ಮ ಜೀವನದಲ್ಲಿ ಒಂದು ಹಂತದಲ್ಲಿ ಅಪಸ್ಮಾರವನ್ನು ಅಭಿವೃದ್ಧಿಪಡಿಸುತ್ತಾರೆ ಎಂದು ಅಂದಾಜುಗಳು ತೋರಿಸುತ್ತವೆ. 2009 ರಲ್ಲಿ, ಅನಿತಾ ಕೌಫ್ಮನ್ ಫೌಂಡೇಶನ್ ಪರ್ಪಲ್ ಡೇ ಅನ್ನು ಪ್ರಾರಂಭಿಸಲು ನೋವಾ ಸ್ಕಾಟಿಯಾದ ಎಪಿಲೆಪ್ಸಿ ಅಸೋಸಿಯೇಷನ್ನೊಂದಿಗೆ ಪಾಲುದಾರಿಕೆ ಹೊಂದಿತು, ಗ.ಖ ಮತ್ತು ಅಂತರಾಷ್ಟ್ರೀಯವಾಗಿ ದಿನದ ಉದ್ದೇಶಕ್ಕಾಗಿ ಹೆಚ್ಚು ಸಾಮೂಹಿಕ ಗಮನ ಮತ್ತು ರಚನಾತ್ಮಕ ಪ್ರಚಾರಗಳನ್ನು ತರುತ್ತದೆ. ಅದೇ ವರ್ಷ ಪರ್ಪಲ್ ಡೇ ಕಾರ್ಯಕ್ರಮಗಳಲ್ಲಿ 100,000 ವಿದ್ಯಾರ್ಥಿಗಳು, 95 ಕೆಲಸದ ಸ್ಥಳಗಳು ಮತ್ತು 116 ರಾಜಕಾರಣಿಗಳು ಭಾಗವಹಿಸಿದ್ದರು. ಅನಿತಾ ಕೌಫ್ಮನ್ ಪ್ರತಿಷ್ಠಾನವು 2011 ರಲ್ಲಿ ಪರ್ಪಲ್ ಡೇ ಅನ್ನು ಟ್ರೇಡ್ಮಾರ್ಕ್ ಮಾಡಿದೆ ಮತ್ತು ಅದು ತನ್ನ ವ್ಯಾಪ್ತಿಯನ್ನು ವಿಸ್ತರಿಸುವುದನ್ನು ಮುಂದುವರೆಸಿದೆ.

# ಉದ್ಯಮಶೀಲತೆಗಾಗಿ 5,000 ಕೋಟಿ ರೂ.ನೀಡಲು ಮುಂದಾದ ಬಜಾಜ್

**ಮೈಸೂರು:** ಬಜಾಜ್ ಗ್ರೂಪ್ ಮುಂದಿನ 5 ವರ್ಷಗಳಲ್ಲಿ ಸಾಮಾಜಿಕ ಪ್ರಭಾವದ ಉಪಕ್ರಮಗಳಿಗೆ ರೂ. 5,000 ಕೋಟಿ ರೂಪಾಯಿಗಳನ್ನು ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ (ಸಿಎಸ್‌ಆರ್) ಮತ್ತು ದತ್ತಿ ಕಾರ್ಯಕ್ರಮಗಳಿಗೆ ನೀಡುವ ಬದ್ಧತೆಯನ್ನು ಪ್ರಕಟಿಸಿದೆ. ಕೌಶಲ್ಯ ಅಭಿವೃದ್ಧಿಯ ಮೇಲೆ ತೀವ್ರ ಗಮನಹರಿಸುವ, 'ಬಜಾಜ್ ಬಿಯಾಂಡ್' ಅಡಿಯಲ್ಲಿ ಗುಂಪಿನ ಎಲ್ಲ ಸಿಎಸ್‌ಆರ್ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಿದೆ. ಇದು ಭವಿಷ್ಯದ 2 ಕೋಟಿಗೂ ಹೆಚ್ಚು ಯುವಕರಿಗೆ ಪ್ರಯೋಜನವನ್ನು ನೀಡುತ್ತದೆ ಮತ್ತು ಭಾರತದ ಬೆಳೆಯುತ್ತಿರುವ ಆರ್ಥಿಕತೆ ನೀಡುವ ಉದ್ಯೋಗ ಮತ್ತು ಉದ್ಯಮಶೀಲತೆಯ ಅವಕಾಶಗಳ ಲಾಭವನ್ನು ಪಡೆಯಲು ಅವರಿಗೆ ಅನುವು ಮಾಡಿಕೊಡುತ್ತದೆ.

ಸಾಮಾಜಿಕ ಹೊಣೆಗಾರಿಕೆಯು ಬಜಾಜ್ ಕುಟುಂಬದ ವ್ಯವಹಾರಗಳಲ್ಲಿ ಮತ್ತು ತಲೆಮಾರುಗಳ ಮೂಲಕ ಲೋಕೋಪಕಾರಿ ಪ್ರಯತ್ನಗಳಲ್ಲಿ ಆಳವಾಗಿ ಹೆಣೆದುಕೊಂಡಿದೆ. ಕಳೆದ 10 ವರ್ಷಗಳಲ್ಲಿ ಬಜಾಜ್



ಗ್ರೂಪ್ ಸುಮಾರು 4000 ಕೋಟಿ ರೂಪಾಯಿಗಳನ್ನು ಕೌಶಲ್ಯ ಮತ್ತು ಶಿಕ್ಷಣ, ಆರೋಗ್ಯ, ಜೀವನೋಪಾಯ, ನೀರಿನ ಸಂರಕ್ಷಣೆ ಮತ್ತು ಅಭಿವೃದ್ಧಿಯ ಹಲವಾರು ಇತರ ಕ್ಷೇತ್ರಗಳ ಮೇಲೆ ಹೆಚ್ಚಾಗಿ ಕೇಂದ್ರೀಕರಿಸಿದ ಸಿಎಸ್‌ಆರ್ ಉಪಕ್ರಮಗಳಿಗೆ ವೆಚ್ಚ ಮಾಡಿದೆ. ಈ ಉಪಕ್ರಮಗಳ ಕುರಿತು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ, ಬಜಾಜ್ ಎಲೆಕ್ಟ್ರಿಕಲ್ಸ್ ಲಿಮಿಟೆಡ್‌ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಶೇಖರ್ ಬಜಾಜ್, ನಮ್ಮ ಉಪಕ್ರಮಗಳು ಭಾರತದ ಯುವಕರನ್ನು ಸಬಲೀಕರಣಗೊಳಿಸುವ ಪರಿವರ್ತಕ ಪರಿಣಾಮವನ್ನು ಪ್ರದರ್ಶಿಸಿವೆ. ಇಂದು, ನಾವು ಬಜಾಜ್ ಬಿಯಾಂಡ್ ಅನ್ನು ಅನಾವರಣಗೊಳಿಸುತ್ತೇವೆ, ಭವಿಷ್ಯದ ಪೀಳಿಗೆಯನ್ನು ಯಶಸ್ಸಿಗೆ ಅಗತ್ಯವಿರುವ ಸಾಧನಗಳೊಂದಿಗೆ ಸಜ್ಜುಗೊಳಿಸುವ ನಮ್ಮ ಧ್ಯೇಯವನ್ನು ಮುಂದುವರಿಸುತ್ತೇವೆ ಎಂದು ಹೇಳಿದರು. ಬಜಾಜ್ ಫಿನ್‌ಸರ್ವ್ ಲಿಮಿಟೆಡ್‌ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಸಂಜೀವ್ ಬಜಾಜ್, ನಮ್ಮ ಸಂಸ್ಥಾಪಕ ಜಮ್ನಾಲಾಲ್ ಬಜಾಜ್ ಅವರಿಂದ ಸ್ಫೂರ್ತಿ ಪಡೆದಿರುವ ಬಜಾಜ್ ಗ್ರೂಪ್ ಸಮಾಜದ 'ಸಾಮಾನ್ಯ ಒಳಿತಿಗಾಗಿ' ಮತ್ತು ರಾಷ್ಟ್ರದ ಸೇವೆಗಾಗಿ ಕೆಲಸ ಮಾಡುವ ಪರಂಪರೆಯನ್ನು ಹೊಂದಿದೆ. ಕೌಶಲ್ಯವು ನಮ್ಮ ಸಾಮಾಜಿಕ ಪ್ರಭಾವದ ಉಪಕ್ರಮಗಳ ಹೃದಯಭಾಗದಲ್ಲಿದೆ ಮತ್ತು ಯುವಕರು ಮತ್ತು ಅವರ ಕುಟುಂಬದ ಯೋಗಕ್ಷೇಮದ ಮೇಲೆ ಧನಾತ್ಮಕ ಗುಣಕ ಪರಿಣಾಮವನ್ನು ನಾವು ನೋಡಿದ್ದೇವೆ. ಬ್ಯಾಂಕಿಂಗ್, ಹಣಕಾಸು ಮತ್ತು ವಿಮೆಯಲ್ಲಿನ ನಮ್ಮ ಪ್ರಮಾಣಪತ್ರ ಕಾರ್ಯಕ್ರಮ (ಸಿಪಿಬಿಎಫ್‌ಐ) ಪ್ರಸ್ತುತ ಪ್ರತಿಭೆಗಳ ಕೊರತೆಯನ್ನು ಕಾಣುತ್ತಿರುವ ವೇಗವಾಗಿ ವಿಸ್ತರಿಸುತ್ತಿರುವ ಹಣಕಾಸು ಸೇವಾ ವಲಯದಲ್ಲಿ ಉದ್ಯೋಗಕ್ಕಾಗಿ ಯುವಕರನ್ನು ಸಿದ್ಧಪಡಿಸುತ್ತದೆಎಂದು ತಿಳಿಸಿದರು.

## ಪಾಕ್ ಬಹುಧರ್ಮೀಯತೆಯ ಬಗ್ಗೆ ಹೆಮ್ಮೆಪಡಿ: ಪಿಎಂ

**ಇಸ್ಲಾಮಾಬಾದ್:** ಹೋಳಿ ಹಬ್ಬದ ಪ್ರಯುಕ್ತ ಪಾಕ್ ಪ್ರಧಾನಿ ಶೆಹಬಾಜ್ ಶರೀಫ್ ಹಿಂದೂ ಸಮುದಾಯಕ್ಕೆ ಶುಭ ಕೋರುತ್ತ, ವ್ಯತ್ಯಾಸಗಳನ್ನು ಶಕ್ತಿಯೆಂದು ತಿಳಿದು ಸಂಭ್ರಮಿಸಿ ಎಂದು ಪಂಜಾಬ್ ಪ್ರಾಂತ್ಯದ ಜನರಿಗೆ ಕರೆ ನೀಡಿದರು. ಸಂದರ್ಭದಲ್ಲಿ 700 ಹಿಂದೂ ಪರಿವಾರಗಳಿಗೆ ಹೋಳಿಯ ಪ್ಯಾಕೇಜ್ ಘೋಷಿಸಲಾಯಿತು. ಬಣ್ಣಗಳ ಹಬ್ಬ ಹೋಳಿಯ ದಿನ ಹಿಂದೂ ಪರಿವಾರಕ್ಕೆ ಶುಭ ಕೋರುತ್ತೇನೆ. ಪಾಕಿಸ್ತಾನಿಗಳಾದ ನಾವು ನಮ್ಮಲ್ಲಿನ ವಿವಿಧ ಸಂಪ್ರದಾಯ, ಭಾಷೆ, ಮತ್ತು ಧರ್ಮಗಳ ಬಗ್ಗೆ ಹೆಮ್ಮೆ ಪಡಬೇಕು ಎಂದು ಶರೀಫ್ ಸಂದೇಶ ನೀಡಿದರು. ಅಧ್ಯಕ್ಷ ಆಸಿಫ್ ಅಲಿ ಜರ್ದಾರಿ ಕೂಡ ಈ ಸಂದರ್ಭದಲ್ಲಿ ಶುಭ ಕೋರಿದರು.



## ಸುಪ್ರಿಯಾ ಶ್ರೀನೇಟ್ ಪೋಸ್ಟ್‌ಗೆ ಕೌಂಟರ್ ಕೊಟ್ಟ ಕಂಗನಾ



ನವದೆಹಲಿ: ಕಾಂಗ್ರೆಸ್ ನಾಯಕಿ ಸುಪ್ರಿಯಾ ಶ್ರೀನೇಟ್ ಅವರು ಸೋಮವಾರ ನಟಿ ಕಂಗನಾ ರಣಾವತ್ ಅವರ ಆಕ್ಷೇಪಾರ್ಹ ಫೋಟೋದೊಂದಿಗೆ ಪೋಸ್ಟ್ ಒಂದನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದರು. ಸುಪ್ರಿಯಾ ಶ್ರೀನೇಟ್ ಅವರ ವಿವಾದಿತ ಪೋಸ್ಟ್‌ಗೆ ಬಿಜೆಪಿ ಕಿಡಿಕಾರಿದ್ದು, ಅವರನ್ನು ತಕ್ಷಣವೇ ವಜಾಗೊಳಿಸಬೇಕು ಎಂದು ಆಗ್ರಹಿಸಿದೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ನಟಿ ಕಂಗನಾ ರಣಾವತ್‌ಗೆ ಬಿಜೆಪಿ ಮಂಡಿ ಕ್ಷೇತ್ರದಿಂದ ಟಿಕೆಟ್ ನೀಡಿದೆ. ಇದೇ ಸಂದರ್ಭದಲ್ಲಿ ವಿವಾದಿತ ಪೋಸ್ಟ್ ಹಂಚಿಕೊಂಡಿರುವ ಸುಪ್ರಿಯಾ, ಕಂಗನಾ ಅವರ ಬೋಲ್ಡ್ ಫೋಟೋದೊಂದಿಗೆ ಮಂಡಿಯಲ್ಲಿ ಏನು ನಡೆಯುತ್ತಿದೆ ಎಂದು ಬರೆದು ಪೋಸ್ಟ್ ಹಂಚಿಕೊಂಡಿದ್ದರು. ಶ್ರೀನೇಟ್ ವಿವಾದಿತ ಪೋಸ್ಟ್‌ಗೆ ಕೌಂಟರ್ ಕೊಟ್ಟಿರುವ ಕಂಗನಾ, ಕಲಾವಿದೆಯಾಗಿ ಕಳೆದ 20 ವರ್ಷಗಳ ನನ್ನ ವೃತ್ತಿಜೀವನದಲ್ಲಿ ನಾನು ಎಲ್ಲಾ ರೀತಿಯ ಮಹಿಳೆಯ ಪಾತ್ರಗಳನ್ನು ನಿರ್ವಹಿಸಿದ್ದೇನೆ. ರಾಣಿಯಲ್ಲಿನ ನಿಷ್ಕಪಟ ಹುಡುಗಿಯಿಂದ ಧಾಕಡ್‌ನಲ್ಲಿ ಮೋಹಕ ಗೂಢಚಾರಿಕೆಯವರೆಗೆ, ಮಣಿಕರ್ಣಿಕಾದಲ್ಲಿ ದೇವತೆಯಿಂದ ಚಂದ್ರಮುಖಿಯಲ್ಲಿ ರಾಕ್ಷಸಿಯಾಗಿ, ರಜ್ಜೋದಲ್ಲಿ ವೇಶ್ಯೆಯಿಂದ ತಲೈವಿಯ ಕ್ರಾಂತಿಕಾರಿ ನಾಯಕಿಯವರೆಗೆ ಎಲ್ಲಾ ಪಾತ್ರಗಳನ್ನು ಮಾಡಿದ್ದೇನೆ. ನಾವು ಪೂರ್ವಾಗ್ರಹಗಳ ಸಂಕೋಲೆಯಿಂದ ನಮ್ಮ ಹೆಣ್ಣುಮಕ್ಕಳನ್ನು ಮುಕ್ತಗೊಳಿಸಬೇಕು, ಅವರ ದೇಹದ ಅಂಗಗಳ ಬಗ್ಗೆ ಕುತೂಹಲಗಳನ್ನು ಬದಿಗೊತ್ತಿ ಮೇಲೇರಬೇಕು. ಮತ್ತು ಎಲ್ಲಕ್ಕಿಂತ ಹೆಚ್ಚಾಗಿ ನಾವು ಜೀವನ ಅಥವಾ ಸನ್ನಿವೇಶಗಳಿಗೆ ಸವಾಲು ಹಾಕುವ ಲೈಂಗಿಕ ಕಾರ್ಯಕರ್ತರನ್ನು ಕೆಲವು ರೀತಿಯ ನಿಂದನೆ ಅಥವಾ ದೂಷಣೆಯಾಗಿ ಬಳಸುವುದನ್ನು ತಡೆಯಬೇಕು. ಪ್ರತಿಯೊಬ್ಬ ಮಹಿಳೆಯೂ ತನ್ನ ಘನತೆಗೆ ಅರ್ಹಳು ಎಂದು ಕಂಗನಾ ಎಕ್ಸ್ ಪೋಸ್ಟ್‌ನಲ್ಲಿ ಬರೆದಿದ್ದಾರೆ.



## ಭಾರತದೊಂದಿಗೆ ಉತ್ತಮ ಬಾಂಧವ್ಯ ಹೊಂದಬೇಕು; ಮಾಲ್ಡೀವ್ಸ್ ಮಾಜಿ ಅಧ್ಯಕ್ಷ

**ಮಾಲೆ:** ಮಾಲ್ಡೀವ್ಸ್‌ನಲ್ಲಿ ಉಂಟಾಗಿರುವ ಹಣಕಾಸು ಬಿಕ್ಕಟ್ಟನ್ನು ಸರಿಪಡಿಸಿಕೊಳ್ಳಲು ಹಠ ಬಿಟ್ಟು ನೆರೆಯ ದೇಶಗಳೊಂದಿಗೆ ಒಳ್ಳೆಯ ಬಾಂಧವ್ಯ ಹೊಂದಬೇಕು ಎಂದು ಮೊಹಮ್ಮದ್ ಮುಯಿಜುಗೆ ಮಾಜಿ ಅಧ್ಯಕ್ಷ ಇಬ್ರಾಹಿಮ್ ಮೊಹಮದ್ ಸೋಲಿಹ್ ಸಲಹೆ ನೀಡಿದ್ದಾರೆ. ಇತ್ತೀಚೆಗಷ್ಟೆ ಭಾರತ ತಮ್ಮ ಸಾಲ ಮನ್ನಾ ಮಾಡಬೇಕು ಎಂದು ಅಧ್ಯಕ್ಷ ಮುಯಿಜು ಕೇಳಿಕೊಂಡಿದ್ದರು. ನೆರೆಹೊರೆಯವರು ನಮಗೆ ಸಹಾಯ ಮಾಡುತ್ತಾರೆಂದು ನಾನು ನಂಬಿದ್ದೇನೆ. ಇದಕ್ಕಾಗಿ ನಾವು ಹಠ ಬಿಟ್ಟು ಮಾತುಕತೆಗೆ ಮುಂದಾಗಬೇಕು. ಆದರೆ ಮುಯಿಜು ಇದಕ್ಕೆ ತಯಾರಿಲ್ಲ? ಎಂದ ಸೋಲಿಹ್, ನಮ್ಮ ಸರ್ಕಾರಕ್ಕೆ ಈಗ ಪರಿಸ್ಥಿತಿ ಅರ್ಥವಾಗಲು ಶುರುವಾಗಿದೆ ಎಂದರು. ಭಾರತವನ್ನು ಮಾಲ್ಡೀವ್ಸ್‌ನಿಂದ ಹೊರಹಾಕುವ ಭರವಸೆಯೊಂದಿಗೆ ಚುನಾವಣೆ ಎದುರಿಸಿದ್ದ ಚೀನಾ ಪರ ನಾಯಕ ಮುಯಿಜು ಇತ್ತೀಚೆಗೆ ಭಾರತೀಯ ಅಧಿಕಾರಿಗಳನ್ನು ವಾಪಸ್ ಕರೆಸಿಕೊಳ್ಳುವಂತೆ ಭಾರತ ಸರ್ಕಾರಕ್ಕೆ ತಾಕೀತು ಮಾಡಿದ್ದರು.





## ಅರುಣಾಚಲ ಪ್ರದೇಶ: ಮತ್ತೆ ಚೀನಾ ಕಿರಿಕ್!

**ಅರುಣಾಚಲ ಪ್ರದೇಶ:** ಅರುಣಾಚಲ ಪ್ರದೇಶ ಚೀನಾದ ಭಾಗ. ಭಾರತ ಅಕ್ರಮವಾಗಿ ಆಕ್ರಮಿಸಿಕೊಂಡಿದೆ ಎಂದು ಚೀನಾ ಕಿರಿಕ್ ಎತ್ತಿದೆ.

ಅರುಣಾಚಲ ಪ್ರದೇಶ ಭಾರತದ ನೈಸರ್ಗಿಕ ಭಾಗ. ಆ ರಾಜ್ಯದ ಮೇಲೆ ಚೀನಾ ಹಕ್ಕು ಸಾಧಿಸುವುದು ಅಸಂಬದ್ಧ ಎಂದು ಕೇಂದ್ರ ಸಚಿವ ಎಸ್.ಜೈಶಂಕರ್ ಹೇಳಿಕೆಗೆ ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್ ಪ್ರತಿಕ್ರಿಯೆ ನೀಡಿದ್ದಾರೆ.

ಭಾರತ ಮತ್ತು ಚೀನಾ ನಡುವಿನ ಗಡಿಯನ್ನು ಎಂದಿಗೂ ಇತ್ಯರ್ಥಪಡಿಸಲಾಗಿಲ್ಲ. ಅರುಣಾಚಲ ಪ್ರದೇಶಕ್ಕೆ ಚೀನಾದ ಅಧಿಕೃತ ಹೆಸರು ಜಂಗ್ನಾನ್. ಭಾರತವು ಕಾನೂನುಬಾಹಿರವಾಗಿ ಆಕ್ರಮಿಸಿಕೊಂಡಿದೆ. ಅದು ಮೊದಲು ಚೀನಾದ ಭಾಗವಾಗಿತ್ತು ಎಂದು ಲಿನ್ ಹೇಳಿದ್ದಾರೆ.

ಚೀನಾವು ಈ ಪ್ರದೇಶದ ಮೇಲೆ ಪರಿಣಾಮಕಾರಿ ಆಡಳಿತವನ್ನು ಹೊಂದಿದೆ. ಅಕ್ರಮವಾಗಿ ವಶಪಡಿಸಿಕೊಂಡ ಭೂಪ್ರದೇಶವನ್ನು ಭಾರತವು 1987 ರಲ್ಲಿ ಅರುಣಾಚಲ ಪ್ರದೇಶ ಎಂದು ಕರೆಯಿತು. ನಾವು ಅವರ ಕ್ರಮಗಳ ವಿರುದ್ಧ ಬಲವಾದ ಹೇಳಿಕೆಗಳನ್ನು ನೀಡಿದ್ದೇವೆ. ಅವರ ಕ್ರಮವು ನಿಷ್ಪರಿಣಾಮಕಾರಿಯಾಗಿದೆ ಎಂದು ಲಿನ್ ಪ್ರತಿಪಾದಿಸಿದ್ದಾರೆ. ಅರುಣಾಚಲ ಪ್ರದೇಶದ ಮೇಲಿನ ಹಕ್ಕು ಕುರಿತು ಚೀನಾ ಈ ತಿಂಗಳಲ್ಲಿ ನಾಲ್ಕನೇ ಬಾರಿ ಮಾತನಾಡಿದೆ. ಮಾ.9 ರಂದು ಅರುಣಾಚಲ ಪ್ರದೇಶಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ ಭೇಟಿಯ ಬಗ್ಗೆ ಭಾರತದೊಂದಿಗೆ ರಾಜತಾಂತ್ರಿಕ ಪ್ರತಿಭಟನೆ ಸಲ್ಲಿಸಿರುವುದಾಗಿ ಬೀಜಿಂಗ್ ಹೇಳಿತ್ತು.

## ಕೇಜ್ರಿವಾಲ್‌ಗಾಗಿ ಡಿಪಿ ಕ್ಯಾಂಪೇನ್ ಆರಂಭಿಸಿದ ಆಪ್!

**ನವದೆಹಲಿ:** ಸಿಎಂ ಅರವಿಂದ ಕೇಜ್ರಿವಾಲ್‌ಬಂಧನ ವಿರೋಧಿಸಿ ಆಮ್ ಆದ್ಮಿ ಪಕ್ಷ ಸೋಶಿಯಲ್ ಮೀಡಿಯಾ ಅಭಿಯಾನವನ್ನು ಆರಂಭಿಸಿದೆ. ಇಂದಿನಿಂದ ಆಮ್ ಆದ್ಮಿ ಪಕ್ಷದ ಎಲ್ಲಾ ಶಾಸಕರು, ಸಚಿವರು, ಕಾರ್ಯಕರ್ತರು ತಮ್ಮ ಸೋಶಿಯಲ್ ಮೀಡಿಯಾದ ಡಿಸ್ಪ್ಲೇ ಫೋಟೊ ಬದಲಾಯಿಸಲಿದ್ದಾರೆ ಎಂದು ಆಪ್ ಸಚಿವೆ ಆತಿಶಿ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ರಾಷ್ಟ್ರದ ಸಂವಿಧಾನ, ಪ್ರಜಾಪ್ರಭುತ್ವವನ್ನು ಉಳಿಸುವ ಸಲುವಾಗಿ ಈ ಅಭಿಯಾನ ಆರಂಭಿಸುತ್ತಿದ್ದು ಪಕ್ಷದ ಎಲ್ಲಾ



ಕಾರ್ಯಕರ್ತರು ಫೇಸ್ಬುಕ್, ಇನ್ಸ್ಟಾಗ್ರಾಂ, ಟ್ವಿಟ್ಟರ್ ಖಾತೆಯಲ್ಲಿ ಜೈಲು ಕಂಬಿಗಳ ಹಿಂದಿರುವ ಕೇಜ್ರಿವಾಲ್ ಅವರ ಫೋಟೊವನ್ನು ಡಿಪಿ ಆಗಿ ಬದಲಾಯಿಸಲಿದ್ದಾರೆ ಹಾಗೂ ಮೋದಿಯ ದೊಡ್ಡ ಭಯ ಕೇಜ್ರಿವಾಲ್ ಎಂಬ ಕ್ಯಾಪ್ಷನ್ ಹಾಕಲಿದ್ದಾರೆ' ಎಂದು ಸಚಿವೆ ಆತಿಶಿ ತಿಳಿಸಿದ್ದಾರೆ. ಪ್ರಧಾನಿ ಮೋದಿಯನ್ನು ಪ್ರಶ್ನಿಸುವ ನಾಯಕ ಅರವಿಂದ ಕೇಜ್ರಿವಾಲ್ ಮಾತ್ರ ಹೀಗಾಗಿ ಯಾವುದೇ ಸಾಕ್ಷಿಗಳಿಲ್ಲದಿದ್ದರೂ ಅವರನ್ನು ಜಾರಿ ನಿರ್ದೇಶನಾಲಯದ ಮೂಲಕ ಬಂಧಿಸಲಾಗಿದೆ ಎಂದು ಸುದ್ದಿಘೋಷ್ಠಿಯಲ್ಲಿ ಆರೋಪಿಸಿದ್ದಾರೆ.




## ಲಂಡನ್‌ನಲ್ಲಿ ಭಾರತೀಯ ಪಿಎಚ್‌ಡಿ ವಿದ್ಯಾರ್ಥಿನಿ ಸಾವು

**ಲಂಡನ್:** ಚೈಸ್ತಾ ಕೋಚಾರ್(33) ಎಂಬ ಭಾರತೀಯ ಮೂಲದ ಪಿಎಚ್‌ಡಿ ವಿದ್ಯಾರ್ಥಿನಿ, ಲಂಡನ್‌ನಲ್ಲಿ ಸೈಕಲ್‌ನಲ್ಲಿ ಹೋಗುತ್ತಿದ್ದ ವೇಳೆ. ಕಸದ ಲಾರಿ ಬಂದು ಡಿಕ್ಕಿಯಾಗಿದ್ದು, ಸಾವನ್ನಪ್ಪಿದ್ದಾಳೆ. ಇನ್ನು ಕಸದ ಲಾರಿ ಡಿಕ್ಕಿ ಹೊಡೆದಾಗ, ಅಲ್ಲೇ ಇದ್ದ ಆಕೆಯ ಪತಿ, ಆಕೆಯನ್ನು ಹತ್ತಿರದ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಲು ಪ್ರಯತ್ನಿಸಿದರೂ ಕೂಡ, ಚಿಕಿತ್ಸೆ ಫಲಿಸದೇ, ಚೈಸ್ತಾ ಸಾವನ್ನಪ್ಪಿದ್ದಾಳೆ. ಲಂಡನ್ ಸ್ಕೂಲ್ ಆಪ್ ಎಕಾನಾಮಿಕ್ಸ್ ನಲ್ಲಿ ಬಿಹೇವಿಯರಲ್ ಸೈನ್ಸ್‌ನಲ್ಲಿ ಪಿಹೆಚ್‌ಡಿ ಮಾಡುತ್ತಿದ್ದರು. ಚೈಸ್ತಾ ಹರಿಯಾಣಾದ ಗುರುಗ್ರಾಮ್ ನಿವಾಸಿಯಾಗಿದ್ದು, ಭಾರತ ಸೇರಿ ವಿದೇಶದ ಹಲವು ವಿಶ್ವವಿದ್ಯಾಲಯದಲ್ಲಿ ಪದವಿ ಮುಗಿಸಿ, ಲಂಡನ್‌ನಲ್ಲಿ ಪಿಹೆಚ್‌ಡಿ ಮಾಡುತ್ತಿದ್ದರು.



## ರಂಜಾನ್ ವೇಳೆ ಗಾಜಾದಲ್ಲಿ ಕದನ ವಿರಾಮಕ್ಕೆ ವಿಶ್ವಸಂಸ್ಥೆ ಕರೆ

**ಗಾಜಾ:** ಮುಸಲ್ಮಾನರ ಪವಿತ್ರ ತಿಂಗಳ ರಂಜಾನ್ ಸಮಯದಲ್ಲಿ ಗಾಜಾದಲ್ಲಿ ಕದನ ವಿರಾಮ ಘೋಷಿಸಬೇಕು ಎಂದು ವಿಶ್ವಸಂಸ್ಥೆ ಸೆಕ್ಯುರಿಟಿ ಕೌನ್ಸಿಲ್ ಹೇಳಿದೆ.

ಇದು ಗಾಜಾದಲ್ಲಿನ ಕದನ ಹೋರಾಟ ನಿಲ್ಲಿಸಲು ಯುಎನ್ ಮೊದಲ ಬೇಡಿಕೆಯಾಗಿದೆ. ದಕ್ಷಿಣ ಇಸ್ರೇಲ್‌ನಲ್ಲಿ ಅಕ್ಟೋಬರ್ 7 ರಂದು ಹಮಾಸ್ ನ ಹಠಾತ್ ದಾಳಿಯ ಸಮಯದಲ್ಲಿ ಬಂಧಿತರಾಗಿರುವ ಎಲ್ಲಾ ಒತ್ತೆಯಾಳುಗಳನ್ನು ಬಿಡುಗಡೆ ಮಾಡುವಂತೆ ಒತ್ತಾಯಿಸಿದ ನಿರ್ಣಯಕ್ಕೆ ಯುನೈಟೆಡ್ ಸ್ಟೇಟ್ಸ್ ಬೆಂಬಲಿಸಿಲ್ಲ.



ಆದರೆ, ಈ ಕ್ರಮವು ಆ ಬೇಡಿಕೆಯನ್ನು ಏಪ್ರಿಲ್ 9 ರಂದು ಕೊನೆಗೊಳ್ಳುವ ರಂಜಾನ್ ಸಮಯದಲ್ಲಿ ಕದನ ವಿರಾಮಕ್ಕೆ ಲಿಂಕ್ ಮಾಡುವುದಿಲ್ಲ. ಇಸ್ರೇಲಿ–ಹಮಾಸ್ ಸಂಘರ್ಷದಲ್ಲಿ ''ತಕ್ಷಣದ ಮತ್ತು ನಿರಂತರ ಕದನ ವಿರಾಮ''ವನ್ನು ಬೆಂಬಲಿಸುವ ಯುಎಸ್ ಪ್ರಾಯೋಜಿತ ನಿರ್ಣಯವನ್ನು ಶುಕ್ರವಾರ ರಷ್ಯಾ ಮತ್ತು ಚೀನಾ ವೀಟೋ ಮಾಡಿದ ನಂತರ ಮತ ಬಂದಿದೆ. ಸೋಮವಾರದಂದು ಅನುಮೋದಿಸಲಾದ ನಿರ್ಣಯವು ಗಿಖ, ಈಜಿಪ್ಟ್ ಮತ್ತು ಕತಾರ್ನ ಯುದ್ಧವನ್ನು ನಿಲ್ಲಿಸಲು ಮಾತುಕತೆಗಳನ್ನು ಘಾಸಿಗೊಳಿಸಬಹುದು ಎಂದು ಯುನೈಟೆಡ್ ಸ್ಟೇಟ್ಸ್ ಎಚ್ಚರಿಸಿದೆ.

## ಚೀನಾದ ರಾಯಭಾರಿಗೆ ಫಿಲಿಪ್ಪೀನ್ಸ್ ಸಮನ್ಸ್

**ಫಿಲಿಪ್ಪೀನ್ಸ್:** ಪಡೆ ನಡೆಸಿದ ಜಲಫಿರಂಗಿ ದಾಳಿಯ ಬಗ್ಗೆ ಚೀನಾ ಸರಕಾರಕ್ಕೆ ಅಧಿಕೃತ ಖಂಡನೆ ಮತ್ತು ಆಕ್ಷೇಪಣೆ ಸಲ್ಲಿಸಲಾಗಿದೆ ಎಂದು ಫಿಲಿಪ್ಪೀನ್ಸ್ ಸರಕಾರ ಸೋಮವಾರ ಹೇಳಿದೆ.

ಫಿಲಿಪ್ಪೀನ್ಸ್ ಗೆ ಚೀನಾದ ರಾಯಭಾರಿಯನ್ನು ಕರೆಸಿಕೊಂಡು ಆಕ್ಷೇಪಣೆ ಸಲ್ಲಿಸಲಾಗಿದೆ ಎಂದು ಫಿಲಿಪ್ಪೀನ್ಸ್ ವಿದೇಶಾಂಗ ಇಲಾಖೆ ಹೇಳಿದೆ. ಇದಕ್ಕೂ ಮುನ್ನ, ಫಿಲಿಪ್ಪೀನ್ಸ್‌ನಲ್ಲಿರುವ ಚೀನಾದ ರಾಯಭಾರಿ ಕಚೇರಿಯೂ ಫಿಲಿಪ್ಪೀನ್ಸ್ ಸರಕಾರಕ್ಕೆ ಆಕ್ಷೇಪಣೆ ಸಲ್ಲಿಸಿದ್ದು, ದಕ್ಷಿಣ ಚೀನಾ ಸಮುದ್ರದಲ್ಲಿ ಫಿಲಿಪ್ಪೀನ್ಸ್ ನೌಕೆಗಳ ಅಕ್ರಮ ಪ್ರವೇಶವನ್ನು ವಿರೋಧಿಸಿದೆ ಎಂದು ಚೀನಾದ ಅಧಿಕಾರಿಗಳು ಹೇಳಿದ್ದಾರೆ.



ದಕ್ಷಿಣ ಚೀನಾ ಸಮುದ್ರದ ದ್ವೀಪಸಮೂಹದ ಬಳಿಯ ಸೆಕೆಂಡ್ ಥಾಮಸ್ ಶೋಲ್‌ನಲ್ಲಿರುವ ತನ್ನ ನೌಕಾನೆಲೆಗೆ ಅಗತ್ಯದ ವಸ್ತುಗಳನ್ನು ಮತ್ತು ತುಕಡಿಗಳನ್ನು ಸಾಗಿಸುತ್ತಿದ್ದ ಉನ್ಯೆಝಾ 4 ಹಡಗಿನ ಮೇಲೆ ವಿವಾದಾತ್ಮಕ ದಕ್ಷಿಣ ಚೀನಾ ಸಮುದ್ರ ಪ್ರದೇಶದಲ್ಲಿ ಚೀನಾದ ಕರಾವಳಿ ರಕ್ಷಣಾ ಪಡೆ ಜಲಫಿರಂಗಿ ದಾಳಿ ನಡೆಸಿದ್ದು ನೌಕಾಪಡೆಯ ಮೂವರು ಸಿಬಂದಿಗಳು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಈ ಘಟನೆಯನ್ನು ಖಂಡಿಸಿರುವ ಅಮೆರಿಕ, ದಕ್ಷಿಣ ಚೀನಾ ಸಮುದ್ರದಲ್ಲಿ ಸಶಸ್ತ್ರ ದಾಳಿಯ ವಿರುದ್ಧ ತನ್ನ ದೀರ್ಘಾವಧಿಯ ಮಿತ್ರ ಫಿಲಿಪ್ಪೀನ್ಸ್ ಅನ್ನು ರಕ್ಷಿಸುವ ಬದ್ಧತೆಯನ್ನು ಪುನರುಚ್ಚರಿಸಿದೆ.

## ಪಾಕ್ ಚುನಾವಣೆಯ ಕುರಿತ ವರದಿ ಬಹಿರಂಗಕ್ಕೆ ಇಮ್ರಾನ್ ಖಾನ್ ಆಗ್ರಹ

**ಇಸ್ಲಮಾಬಾದ್:** ಪಾಕಿಸ್ತಾನದಲ್ಲಿ ಫೆಬ್ರವರಿ 8ರಂದು ನಡೆದಿದ್ದ ಸಾರ್ವತ್ರಿಕ ಚುನಾವಣೆಯ ಕುರಿತು ಯುರೋಪಿಯನ್ ಯೂನಿಯನ್ನ ವರದಿಯನ್ನು ಬಹಿರಂಗಗೊಳಿಸಬೇಕು ಎಂದು ಮಾಜಿ ಪ್ರಧಾನಿ ಇಮ್ರಾನ್ಖಾನ್ ಅವರ ಪಾಕಿಸ್ತಾನ್ ತೆಹ್ರೀಕೆ ಇನ್ಸಾಫ್(ಪಿಟಿಐ) ಪಕ್ಷ ಆಗ್ರಹಿಸಿದೆ.

ಫೆಬ್ರವರಿ 8ರ ಸಾರ್ವತ್ರಿಕ ಚುನಾವಣೆಗೂ ಮುನ್ನ ಯುರೋಪಿಯನ್ ಯೂನಿಯನ್ ನಿಯೋಗ ಪಾಕಿಸ್ತಾನಕ್ಕೆ ಭೇಟಿ ನೀಡಿತ್ತು ಮತ್ತು ಚುನಾವಣೆಯ ಬಗ್ಗೆ ತನ್ನ ವರದಿಯನ್ನು ಪಾಕಿಸ್ತಾನದ ಚುನಾವಣಾ ಆಯೋಗಕ್ಕೆ ಹಸ್ತಾಂತರಿಸಿರುವುದಾಗಿ ಹೇಳಿದೆ. ಇದು ಅತ್ಯಂತ ಸೂಕ್ಷ್ಮ ಮತ್ತು ಮಹತ್ವದ ವರದಿಯಾಗಿರುವುದರಿಂದ



ಅದನ್ನು ತಕ್ಷಣ ಸಾರ್ವಜನಿಕರಿಗಾಗಿ ಬಿಡುಗಡೆಗೊಳಿಸಬೇಕು ಎಂದು ಪಿಟಿಐ ವಕ್ತಾರ ರವೂಫ್ ಹಸನ್ ಇಸ್ಲಮಾಬಾದ್‌ನಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಆಗ್ರಹಿಸಿದ್ದಾರೆ.

ಫೆಬ್ರವರಿ 8ರ ಸಾರ್ವತ್ರಿಕ ಚುನಾವಣೆಯಲ್ಲಿ ಕೆಲವು ರಾಜಕೀಯ ಪ್ರಮುಖರ ಸ್ಪರ್ಧೆಯನ್ನು ನಿರ್ಬಂಧಿಸಲಾಗಿತ್ತು. ಸಭೆ ಸೇರುವ ಸ್ವಾತಂತ್ರ್ಯ, ಅಭಿವ್ಯಕ್ತಿ ಸ್ವಾತಂತ್ರ್ಯದ ಮೇಲಿನ ನಿರ್ಬಂಧ, ಇಂಟರ್ನೆಟ್ ಬಳಕೆಗೆ ನಿರ್ಬಂಧ , ಚುನಾವಣಾ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪದ ಬಗ್ಗೆ ಹಲವು ದೂರುಗಳು ಕೇಳಿಬಂದಿವೆ ಎಂದು ಪಾಕ್ ಚುನಾವಣೆಯ ಬಗ್ಗೆ ಯುರೋಪಿಯನ್ ಯೂನಿಯನ್ನ ವಿದೇಶಾಂಗ ವ್ಯವಹಾರಗಳ ವಿಭಾಗದ ಮುಖ್ಯ ವಕ್ತಾರ ಪೀಟರ್ ಸ್ಟ್ಯಾನೊ ಪ್ರತಿಕ್ರಿಯಿಸಿದ್ದರು.

## ಟ್ರಂಪ್ ಕುರಿತು ಟ್ರೋಲ್ ಮಾಡಿದ ಜೋ ಬೈಡನ್

**ವಾಷಿಂಗ್ಟನ್:** ತನ್ನದೇ ಸ್ವಂತ ಗಾಲ್ಫ್ ಕ್ಲಬ್‌ನಲ್ಲಿ 2 ಚಿನ್ನದ ಪ್ರಶಸ್ತಿಗಳನ್ನು ಗೆದ್ದ ಬಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ ಯುಎಸ್ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಯುಎಸ್ ಹಾಲಿ ಅಧ್ಯಕ್ಷ ಜೋ ಬೈಡನ್ ಟ್ರೋಲ್ ಮಾಡಿದ್ದಾರೆ. ಭಾನುವಾರದಂದು ತಮ್ಮ ಸಾಮಾಜಿಕ ಮಾಧ್ಯಮ ಪ್ಲಾಟ್ಫಾರ್ಮ್ ಟ್ರೂತ್ ಸೋಷಿಯಲ್ ಪೋಸ್ಟ್ ಮಾಡಿರುವ ಡೊನಾಲ್ಡ್ ಟ್ರಂಪ್, ಇಂದು ರಾತ್ರಿ ವೆಸ್ಟ್ ಪಾಮ್ ಬೀಚ್‌ನಲ್ಲಿರುವ ಟ್ರಂಪ್ ಇಂಟರ್ನ್ಯಾಷನಲ್ ಗಾಲ್ಫ್ ಕ್ಲಬ್‌ನಲ್ಲಿ ಕ್ಲಬ್ ಚಾಂಪಿಯನ್ಶಿಪ್ ಟ್ರೋಫಿ ಮತ್ತು ಹಿರಿಯ ಕ್ಲಬ್ ಚಾಂಪಿಯನ್ಶಿಪ್ ಟ್ರೋಫಿಯನ್ನು ಗೆದ್ದಿರುವುದು ನನಗೆ ದೊಡ್ಡ ಗೌರವವಾಗಿದೆ.

ನಾನು ಎರಡೂ ಪ್ರಶಸ್ತಿಯನ್ನು ಗೆದ್ದಿದ್ದೇನೆ ಎಂದು ಹೆಮ್ಮೆಯಿಂದ ಬರೆದುಕೊಂಡಿದ್ದಾರೆ. ಇದೀಗ ಟ್ರಂಪ್ ಅವರ ಪೋಸ್ಟ್‌ನ ಸ್ಕ್ರೀನ್ಶಾಟ್ ಅನ್ನು ಎಕ್ಸ್‌ನಲ್ಲಿ ಹಂಚಿಕೊಂಡ ಜೋ ಬೈಡನ್, ಅಭಿನಂದನೆಗಳು, ಡೊನಾಲ್ಡ್. ಇದೊಂದು ದೊಡ್ಡ ಸಾಧನೆ ಎಂದು ಬರೆಯುವ ಮೂಲಕ ವ್ಯಂಗ್ಯವಾಡಿದ್ದಾರೆ. ಈ ವರ್ಷದ ನಂತರದ ಸಾರ್ವತ್ರಿಕ ಚುನಾವಣೆಗಳಿಗೆ ಉಭಯ ನಾಯಕರ ನಡುವೆ ಮತ್ತೆ ಪೈಪೋಟಿ ಏರ್ಪಡುವ ನಿರೀಕ್ಷೆ ಇದೆ. ಕೊನೆಯ ಬಾರಿಗೆ 2020 ರಲ್ಲಿ ಯುನೈಟೆಡ್ ಸ್ಟೇಟ್ಸ್ ಅಧ್ಯಕ್ಷರಾಗಿದ್ದ ಟ್ರಂಪ್ ಅವರನ್ನು ಬಿಡೆನ್ ಸೋಲಿಸಿದ್ದರು.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸೀರೆಯಲ್ಲಿ ಸಖತ್ತಾಗಿ ಕಂಡ ನಟಿ ಪ್ರಿಯಾಮಣಿ



ಬೆಂಗಳೂರಿನ ಬೆಡಗಿ ಪ್ರಿಯಾಮಣಿ ಇದೀಗ ಬಾಲಿವುಡ್‌ನಲ್ಲಿ ಮಿಂಚುತ್ತಿದ್ದಾರೆ. 'ಜವಾನ್' ಸಕ್ಸಸ್ ನಂತರ ಕನ್ನಡದ ಹುಡುಗಿಗೆ ಬಿಟೌನ್‌ನಲ್ಲಿ ಬೇಡಿಕೆ ಜಾಸ್ತಿ ಆಗಿದೆ. ಹಾಗಾಗಿ ಹೊಸ ಹೊಸ ಫೋಟೋ ಶೂಟ್ ಗಳಲ್ಲಿ ಅವರು ಭಾಗಿ ಆಗುತ್ತಲೇ ಇದ್ದಾರೆ. ನಿನ್ನೆಯಷ್ಟೇ ಅವರು ಹೊಸ ಫೋಟೋಗಳನ್ನು ಹಂಚಿಕೊಂಡಿದ್ದು, ರವಿಕೆ ರಹಿತ ಸೀರೆ ತೊಟ್ಟು ಸಖತ್ತಾಗಿಯೇ ಪೋಸ್ ನೀಡಿದ್ದಾರೆ. ಆ ಫೋಟೋಗಳಿಗೆ ಅಭಿಮಾನಿಗಳು ಫಿದಾ ಆಗಿದ್ದಾರೆ.

ಪ್ರಿಯಾಮಣಿ ಪ್ರತಿಭಾವಂತ ನಟಿ. ಯಾವುದೇ ಅಡ್ಡದಾರಿ ತುಳಿಯದೇ ತಮ್ಮ ಬದುಕನ್ನು ಕಟ್ಟಿಕೊಂಡವರು. ಹಾಗಾಗಿ ಯಾವುದಕ್ಕೂ ಮುಲಾಜು ನೋಡದೇ ನೇರವಾಗಿ ಹೇಳುತ್ತಾರೆ. ಇತ್ತೀಚೆಗಷ್ಟೇ ಅವರು ಬಾಲಿವುಡ್‌ನ ಕರಾಳ ಸತ್ಯವನ್ನು ರಿವೀಲ್ ಮಾಡಿದ್ದರು. ಪಬ್ಲಿಸಿಟಿಗಾಗಿ ಸೆಲೆಬ್ರಿಟಿಗಳು ಏನೆಲ್ಲ ಮಾಡುತ್ತಾರೆ ಎಂಬುದನ್ನು ಬಹಿರಂಗ ಪಡಿಸಿದ್ದರು. ಬಾಲಿವುಡ್ ಸೆಲೆಬ್ರೆಟಿಗಳು ಜಿಮ್‌ಗೆ ಹೋಗಲಿ, ಸಲೂನ್‌ಗೆ ಹೋಗಲಿ, ಮನೆ, ಪಾರ್ಟಿ, ವಿಮಾನ ನಿಲ್ದಾಣಕ್ಕೆ ಹೋದ್ರು ಪಾಪರಾಜಿಗಳು ಮುತ್ತಿಕೊಳ್ತಾರೆ. ಹೇಗೆ ಬರ್ತಾರೆ ಇವರೆಲ್ಲಾ ಅಂತ ಅನೇಕರು ಯೋಚಿಸುತ್ತಾರೆ. ಇದಕ್ಕೆಲ್ಲಾ ಈಗ ಪ್ರಿಯಾಮಣಿ ಸ್ಪಷ್ಟನೆ ನೀಡಿದ್ದರು.

ಟಿವಿ ಸಂದರ್ಶನವೊಂದರಲ್ಲಿ ಮಾತಾಡಿದ ಪ್ರಿಯಾಮಣಿ, ಸೆಲೆಬ್ರಿಟಿಗಳು ಒಂದು ರೀತಿ ಪಬ್ಲಿಸಿಟಿ ಗಿಟ್ಟಿಸಿಕೊಳ್ಳುವ ತಂತ್ರ ಎಂದಿದ್ದಾರೆ. ಸೆಲೆಬ್ರೆಟಿಗಳು ಸೂಟ್‌ನಲ್ಲಿ ಇರೋದು, ಸಲೂನ್‌ಗೆ ಹೋದಾಗಲೂ ಪಾಪರಾಜಿಗಳ ಕ್ಯಾಮೆರಾಗೆ ಸಿಗ್ತಾರೆ. ಪಾಪರಾಜಿಗಳೇ ಅವರ ಹಿಂದೆ ಓಡಾಡ್ತಿರುತ್ತಾರೆ ಎಂದು ಜನಸಾಮಾನ್ಯರು ಊಹಿಸಿರುತ್ತಾರೆ. ಆದರೆ ಅಸಲಿ ಸಂಗತಿಯೇ ಬೇರೇ ಇದೆ ಎಂದಿದ್ದರು. ಪ್ರಚಾರಕ್ಕಾಗಿ ಪಿಆರ್‌ಗಳ ಮೂಲಕ ಸೆಲೆಬ್ರೆಟಿಗಳೇ ಪಾಪರಾಜಿಗಳಿಗೆ ದುಡ್ಡು ಕೊಟ್ಟು ಕರೆಸಿಕೊಳ್ತಾರೆ. ದುಡ್ಡು ಕೊಟ್ಟರಷ್ಟೇ ಅವರು ಬಂದು ಫೋಟೋ-ವಿಡಿಯೋ ತೆಗೆದು ಪ್ರಚಾರ ಮಾಡೋದು ಅಂತ ನಟಿ ಪ್ರಿಯಾಮಣಿ ಹೇಳಿದ್ದರು. ಪ್ರಿಯಾಮಣಿ ಹೇಳಿಕೆ ಈಗ ಸಖತ್ ಸದ್ದು ಮಾಡುತ್ತಿದೆ. ಗಾಸಿಪ್ ಪ್ರಿಯರ ಚರ್ಚೆಗೆ ಗ್ರಾಸವಾಗಿದೆ.

ನೇರವಂತಿಕೆಯ ಜೊತೆಗೆ ಅನೇಕ ಸಮಾಜಮುಖಿ ಕಾರ್ಯಗಳಲ್ಲೂ ಅವರು ತೊಡಗಿದ್ದಾರೆ. ಮೊನ್ನೆಯಷ್ಟೇ ದೇವಸ್ಥಾನವೊಂದಕ್ಕೆ ಮೆಕ್ಯಾನಿಕಲ್ ಆನೆಯೊಂದನ್ನು ಉಡುಗೊರೆಯಾಗಿ ನೀಡಿದ್ದಾರೆ ಪ್ರಿಯಾಮಣಿ. ನಟಿಯ ನಡೆಗೆ ಅಭಿಮಾನಿಗಳು ಶ್ಲಾಘಿಸಿದ್ದಾರೆ ಎರ್ನಾಕುಲಂ ಕಾಲಡಿ ತ್ರಿಕ್ಕದಲ್ಲಿರುವ ಮಹಾದೇವ ದೇವಸ್ಥಾನಕ್ಕೆ ಮೆಕ್ಯಾನಿಕಲ್ ಆನೆಯನ್ನು ಗಿಫ್ಟ್ ಆಗಿ ಪ್ರಿಯಾಮಣಿ ನೀಡಿದ್ದಾರೆ. ಇದರ ಗಾತ್ರ ಮತ್ತು ಎತ್ತರ ನಿಜವಾದ ಆನೆಯನ್ನು ಮೀರಿಸುವಂತಿದೆ. ಇದನ್ನು ನೋಡಿ ಗ್ರಾಮಸ್ಥರು ಬೆರಗಾಗಿದ್ದಾರೆ.

ಪ್ರಿಯಾಮಣಿ ದೇವಸ್ಥಾನಕ್ಕೆ ಉಡುಗೊರೆಯಾಗಿ ನೀಡಿದ ಮೆಕ್ಯಾನಿಕಲ್ ಆನೆಯು 3 ಮೀಟರ್ ಎತ್ತರ ಮತ್ತು 800 ಕೆಜಿ ತೂಕವಿದೆ. ರೋಬೋ ಆನೆಯನ್ನು ದೇಶದಾದ್ಯಂತ ತೆಗೆದುಕೊಂಡು ಹೋಗಲು ಅನುಮತಿ ಕೂಡ ನೀಡುತ್ತಾರೆ ಎಂದು ದೇವಾಲಯದ ಅಧಿಕಾರಿಗಳು ನಿರ್ಧಾರವನ್ನು ತೆಗೆದುಕೊಂಡಿದ್ದಾರೆ.

# ಏಪ್ರಿಲ್ 19ಕ್ಕೆ ಒಟಿಟಿಯಲ್ಲಿ ಆರ್ಟಿಕಲ್ 370




ಬಾಕ್ಸ್ ಆಫೀಸಿನಲ್ಲಿ ಸಖತ್ ಕಮಾಯಿ ಮಾಡಿರುವ ಬಾಲಿವುಡ್ ನ ಆರ್ಟಿಕಲ್ 370 ಚಿತ್ರವು ಸದ್ಯಲ್ಲದೇ ಒಟಿಟಿಯಲ್ಲೂ ಕಾಣಿಸಿಕೊಳ್ಳಲಿದೆ. ಚುನಾವಣೆಯನ್ನು ಮುಂದಿಟ್ಟುಕೊಂಡು ಈ ಚಿತ್ರವನ್ನು ಆತುರಾತುರವಾಗಿ ತರುತ್ತಿದ್ದಾರೆ ಎನ್ನುವ ಆರೋಪದ ನಡುವೆಯೂ ಏಪ್ರಿಲ್ 19ಕ್ಕೆ ಈ ಸಿನಿಮಾ ಒಟಿಟಿಯಲ್ಲಿ ಸ್ಟ್ರೀಮಿಂಗ್ ಆಗಲಿದೆ.

ಈ ಸಿನಿಮಾವನ್ನು ಮೆಚ್ಚಿಕೊಳ್ಳದವರೇ ಇಲ್ಲ. ಈ ಹಿಂದೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಮ್ಮ ಕುಟುಂಬದೊಂದಿಗೆ ದೆಹಲಿಯಲ್ಲಿ ಆರ್ಟಿಕಲ್ 370 ಸಿನಿಮಾ ನೋಡಿದ್ದರು. ಈ ಕುರಿತಂತೆ ಅವರು ಟ್ವೀಟ್ ಮಾಡಿದ್ದರು. ಈ ಸಿನಿಮಾ ಕುರಿತಂತೆ ಅನೇಕರು ಮೆಚ್ಚುಗೆ ವ್ಯಕ್ತ ಪಡಿಸಿದ್ದರು. ಕಾಶ್ಮೀರದಲ್ಲಿ ಆರ್ಟಿಕಲ್ 370 ತೆಗೆದಿದ್ದರ ಬಗ್ಗೆ ಮನಮುಟ್ಟುವಂತೆ ಸಿನಿಮಾದಲ್ಲಿ ಹೇಳಿದ್ದಾರೆ. ಇದು ನೈಜ ಘಟನೆಗಳ ಪ್ರೇರಣೆಯಿಂದ ಆಗಿರುವ ಸಿನಿಮಾ' ಎಂದು ಬರೆದುಕೊಂಡಿದ್ದಾರೆ. ಈ ಸಿನಿಮಾ ನೋಡುವಾಗ ಭಾವುಕರಾದ ಸಂಗತಿಯನ್ನೂ ಅವರು ಬಿಚ್ಚಿಟ್ಟಿದ್ದರು. ಈ ಹಿಂದೆ ಪ್ರಧಾನಿ ನರೇಂದ್ರ ಮೋದಿ ಕೂಡ ಆರ್ಟಿಕಲ್ 370 ಚಿತ್ರದ ಬಗ್ಗೆ ತಮ್ಮ ಭಾಷಣದಲ್ಲಿ ಉಲ್ಲೇಖ ಮಾಡಿದ್ದರು. ಕಾಶ್ಮೀರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮೋದಿ, 'ಆರ್ಟಿಕಲ್ 370 ಸಿನಿಮಾ ಜಮ್ಮು ಕಾಶ್ಮೀರದ ವಿಶೇಷ ಅಧಿಕಾರವನ್ನು ಯಾಕೆ ತಗೆಯಲಾಯಿತು ಎನ್ನುವುದನ್ನು ಸ್ಪಷ್ಟವಾಗಿ ತಿಳಿಸುತ್ತದೆ ಎಂದು ಹೇಳಿದ್ದರು.

ಮೋದಿಯ ಈ ಭಾಷಣವನ್ನು ಕೇಳಿರುವ ಆರ್ಟಿಕಲ್ 370 ಸಿನಿಮಾದ ನಾಯಕಿ ಯಾಮಿನಿ ಗೌತಮ್, ಮೋದಿ ಅವರಿಗೆ ಧನ್ಯವಾದಗಳನ್ನು ತಿಳಿಸಿದ್ದರು. ಈ ನೈಜ ಕಥೆಯನ್ನು ನಿಮಗೆ ಮತ್ತು ಎಲ್ಲರಿಗೂ ಒಪ್ಪುವಂತೆ ಸಿನಿಮಾ ಮಾಡಿದ್ದೇವೆ ಎನ್ನುವ ಭರವಸೆಯನ್ನು ನಾನು ಮತ್ತು ನನ್ನ ತಂಡ ನೀಡಲಿದೆ ಎಂದು ಯಾಮಿನಿ ಪ್ರತಿಕ್ರಿಯೆ ನೀಡಿದ್ದರು. ಅಂದಹಾಗೆ ಕನ್ನಡತಿ ಪ್ರಿಯಾ ಮಣಿ ಹಾಗೂ ಬಾಲಿವುಡ್ ಹೆಸರಾಂತ ನಟಿ ಯಾಮಿನಿ ಗೌತಮ್ ಕಾಂಬಿನೇಷನ್ ನ ಲ್ಲಿ ಈ ಸಿನಿಮಾ ಮೂಡಿ ಬಂದಿದೆ. ಸಿನಿಮಾದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾತ್ರಗಳು ಇವೆ. ಯಾಮಿ ಗೌತಮ್ ಖಡಕ್ ಎನ್.ಐ.ಎ ಅಧಿಕಾರಿಯಾಗಿ ಕಾಣಿಸಿಕೊಂಡಿದ್ದಾರೆ.



# ಚಂದನ್ ಶೆಟ್ಟಿ ನಟನೆಯ

## ವಿದ್ಯಾರ್ಥಿ ವಿದ್ಯಾರ್ಥಿನಿಯರೇ ಚಿತ್ರೀಕರಣ ಮುಕ್ತಾಯ



ಅರುಣ್ ಅಮುಕ್ತ ನಿರ್ದೇಶನದ, ಚಂದನ್ ಶೆಟ್ಟಿ ನಾಯಕನಾಗಿ ನಟಿಸಿರುವ 'ವಿದ್ಯಾರ್ಥಿ ವಿದ್ಯಾರ್ಥಿನಿಯರೇ' ಚಿತ್ರವೀಗ ಯಶಸ್ವಿಯಾಗಿ ಚಿತ್ರೀಕರಣ ಮುಗಿಸಿಕೊಂಡಿದೆ. ಈ ಹಿನ್ನೆಲೆಯಲ್ಲಿ ಒಂದು ಅಚ್ಚುಕಟ್ಟಾದ ಪತ್ರಿಕಾಗೋಷ್ಠಿಯ ಮೂಲಕ ಮಾಧ್ಯಮಗಳನ್ನು ಮುಖಾಮುಖಿಯಾಗಿರುವ ಚಿತ್ರತಂಡ ಖುಷಿಯನ್ನು ಹಂಚಿಕೊಂಡಿದೆ. ಒಟ್ಟಾರೆ ಸಿನಿಮಾ ಬಗ್ಗೆ, ಮುಂದಿನ ಕಾರ್ಯವೈಖರಿಗಳ ಬಗ್ಗೆ ಒಂದಷ್ಟು ವಿಚಾರಗಳನ್ನು ವಿನಿಮಯ ಮಾಡಿಕೊಂಡಿದೆ. ಚಿತ್ರೀಕರಣ ಶುರುವಾದಲ್ಲಿಂದ ಮೊದಲ್ಗೊಂಡು, ಇಲ್ಲಿಯವರೆಗೂ ನಿರ್ದೇಶಕರು ಅತ್ಯಂತ ಕ್ರಿಯಾಶೀಲವಾಗಿ ಪ್ರೇಕ್ಷಕರನ್ನು ಹಿಡಿದಿಟ್ಟುಕೊಂಡು ಬಂದಿದ್ದಾರೆ. ಈ ಪತ್ರಿಕಾ ಗೋಷ್ಠಿಯನ್ನೂ ಕೂಡಾ ಅದರ ಭಾಗವೆಂಬಂಥಾ ಫೀಲ್ ಹುಟ್ಟಿಸುವಂತೆ ಚಿತ್ರತಂಡ ಆಯೋಜಿಸಿದ್ದದ್ದು ವಿಶೇಷ.

ವಿದ್ಯಾರ್ಥಿ ವಿದ್ಯಾರ್ಥಿನಿಯರೇ ಚಿತ್ರದಲ್ಲಿ ಪಾತ್ರಗಳನ್ನು ನಿರ್ವಹಿಸಿರುವ ಪ್ರಶಾಂತ್ ಸಂಬರ್ಗಿ, ಹಿರಿಯ ನಟಿ ಭವ್ಯಾ, ಸುನೀಲ್ ಪುರಾಣಿಕ್, ರಘು ರಾಮನಕೊಪ್ಪ ಮುಂತಾದವರು ಈ ಪತ್ರಿಕಾ ಗೋಷ್ಠಿಯಲ್ಲಿ ಭಾಗಿಯಾಗಿದ್ದರು. ಅವರೆಲ್ಲರೂ ಸಿನಿಮಾದ ಬಗ್ಗೆ, ಚಿತ್ರತಂಡ ಮತ್ತು ಚಿತ್ರೀಕರಣದ ಅನುಭವಗಳ ಬಗ್ಗೆ ಮನಬಿಚ್ಚಿ ಮಾತಾಡಿದ್ದಾರೆ. ಈ ಮೂಲಕ ವಿದ್ಯಾರ್ಥಿ ವಿದ್ಯಾರ್ಥಿನಿಯರೇ ಚಿತ್ರದ ಬಗ್ಗೆ ಮತ್ತಷ್ಟು ಕುತೂಹಲ ಮೂಡಿಕೊಳ್ಳುವಂತೆ ಮಾಡಿದ್ದಾರೆ. ಇದೇ ವೇದಿಕೆಯಲ್ಲಿ ಪಾತ್ರಗಳನ್ನು ಪರಿಚಯಿಸುವ ವೀಡಿಯೋ ಮತ್ತು ತಾಂತ್ರಿಕ ವರ್ಗವನ್ನು ಪರಿಚಯಿಸೋ ವೀಟಿಯನ್ನು ಮಾಧ್ಯಮ ಪ್ರತಿನಿಧಿಗಳ ಮುಂದೆ ಪ್ರದರ್ಶಿಸಲಾಯಿತು.

ನಿರ್ದೇಶಕ ಅರುಣ್ ಅಮುಕ್ತ ಪಕ್ಕಾ ಪ್ಲಾನ್ ಮಾಡಿಕೊಂಡು, ಅಂದುಕೊಂಡಂತೆಯೇ ಚಿತ್ರೀಕರಣ ಮುಗಿಸಿಕೊಂಡಿದ್ದಾರೆ. ಬೆಂಗಳೂರು, ಮೈಸೂರು, ಮಂಗಳೂರು, ಚಿಕ್ಕಮಗಳೂರು ಮುಂತಾದೆಡೆಗಳಲ್ಲಿ ಅವ್ಯಾಹತವಾಗಿ ಐವತ್ತು ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದೆ ಎಂದು ಕಾರ್ಯಕಾರಿ ನಿರ್ಮಾಪಕ ಶ್ರೀಕಾಂತ್ ಜಿ ಕಶ್ಯಪ್ ಮಾಹಿತಿ ನೀಡಿದರು. ಕುಂಬಳ ಕಾಯಿ ಒಡೆದಾದ ನಂತರದಲ್ಲೀಗ ಬಿರುಸಿನಿಂದ ಪೊ?ಸ್ಟ್ ಪೊ?ರಡಕ್ಷನ್ ಕಾರ್ಯಗಳಿಗೆ ಚಾಲನೆ ಸಿಕ್ಕಿದೆ. ಜೂನ್ ಹೊತ್ತಿಗೆಲ್ಲ ಎಲ್ಲ ಕೆಲಸ ಕಾರ್ಯಗಳನ್ನೂ ಮುಗಿಸಿಕೊಂಡು, ಲೋಕಸಭಾ ಚುನಾವಣಾ ಫಲಿತಾಂಶ ಬಂದ ಬೆನ್ನಲ್ಲಿಯೇ ಈ ಸಿನಿಮಾ ಬಿಡುಗಡೆಗೊಳಿಸಲು ಚಿತ್ರತಂಡ ಯೋಜನೆ ಹಾಕಿಕೊಂಡಿದೆ.

ರ್‍ಯಾಪರ್ ಚಂದನ್ ಶೆಟ್ಟಿ ಇದೀಗ ನಾಯಕ ನಟನಾಗಿಯೂ ರೂಪಾಂತರಗೊಂಡಿದ್ದಾರೆ. ವಿದ್ಯಾರ್ಥಿ ವಿದ್ಯಾರ್ಥಿನಿಯರೇ ಚಿತ್ರದಲ್ಲಂತೂ ಅವರದ್ದು ಭಿನ್ನ ಶೇಡುಗಳನ್ನು ಹೊಂದಿರುವ ಪಾತ್ರವಂತೆ. ಅವರ ಪಾತ್ರಕ್ಕೆ ಮೂರು ಆಯಾಮಗಳಿವೆ. ಆ ಮೂರೂ ಪಾತ್ರಗಳಿಗಾಗಿ ಅವರು ತಿಂಗಳುಗಟ್ಟಲೆ ಶ್ರಮವಹಿಸಿ ತಯಾರಿ ನಡೆಸಿದ್ದಾರೆ. ಆ ಮೂರೂ ಶೇಡುಗಳ ಒಂದಕ್ಕೊಂದು ತದ್ವಿರುದ್ಧ ದಿಕ್ಕಿನವುಗಳು. ಚಂದನ್ ಅಸಲೀ ವ್ಯಕ್ತಿತ್ವಕ್ಕೆ ವಿರುದ್ಧವಾಗಿರೋ ಆ ಪಾತ್ರಗಳನ್ನು ನಿಭಾಯಿಸೋದು ಸವಾಲಾಗಿತ್ತಂತೆ. ಆದರೆ, ಅವಿರತವಾದ ಶ್ರಮದಿಂದ, ಅದೆಲ್ಲದಕ್ಕೂ ನ್ಯಾಯ ಸಲ್ಲಿಸಿದ ಖುಷಿ ಚಂದನ್ ಅವರಲ್ಲಿದೆ. ಆ ಬಗ್ಗೆ ಚಿತ್ರತಂಡದಲ್ಲೂ ಒಂದು ಮೆಚ್ಚುಗೆ ಇದ್ದೇ ಇದೆ.

ಅರುಣ್ ಅಮುಕ್ತ ಪಾಲಿಗಿದು ಮಹತ್ವಾಕಾಂಕ್ಷೆಯ ಚಿತ್ರ. ತಾರಾ ಬಳಗ, ತಾಂತ್ರಿಕತೆ ಸೇರಿದಂತೆ ಎಲ್ಲ ದಿಕ್ಕಿನಲ್ಲಿಯೂ ವಿದ್ಯಾರ್ಥಿ ವಿದ್ಯಾರ್ಥಿನಿಯರೇ ಚಿತ್ರ ಭಿನ್ನವಾಗಿ ಮೂಡಿ ಬಂದಿವೆ ಎಂಬುದು ಚಿತ್ರತಂಡದ ಭರವಸೆ. ಸುಬ್ರಮಣ್ಯ ಕುಕ್ಕೆ ಮತ್ತು ಎ.ಸಿ ಶಿವಲಿಂಗೇಗೌಡ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಕುಮಾರ್ ಗೌಡ ಛಾಯಾಗ್ರಹಣ, ಭರ್ಜರಿ ಚೇತನ್ ಮತ್ತು ವಾಸುಕಿ ವೈಭವ್ ಸಾಹಿತ್ಯ, ಪವನ್ ಗೌಡ ಸಂಕಲನ, ಟೈಗರ್ ಶಿವು, ನರಸಿಂಹ ಸಾಹಸ ನಿರ್ದೇಶನ ಈ ಚಿತ್ರಕ್ಕಿರಲಿದೆ. ಅಮರ್, ಭಾವನಾ, ಮಾನಸಿ, ಮನೋಜ್ ವಿವಾನ್, ಭವ್ಯ, ಸುನೀಲ್ ಪುರಾಣಿಕ್, ಅರವಿಂದ ರಾವ್, ಸಿಂಚನಾ, ರಘು ರಾಮನಕೊಪ್ಪ, ಪ್ರಶಾಂತ್ ಸಂಬರ್ಗಿ, ಕಾಕ್ರೋಚ್ ಸುಧಿ ಮುಂತಾದವರು ನಟಿಸಿದ್ದಾರೆ. ಇನ್ನುಳಿದಂತೆ ವಿಜೇತ್ ಕೃಷ್ಣ, ವಾಸು ದೀಕ್ಷಿತ್ ಮತ್ತು ಶಶಾಂಕ್ ಶೇಷಗಿರಿ ಸಂಗೀತ ನಿರ್ದೇಶನ ಈ ಚಿತ್ರಕ್ಕಿದೆ.

# ಕೊಹ್ಲಿ, ಕಾರ್ತಿಕ್, ಮಹಿಪಾಲ್ ಸ್ಫೋಟಕ ಆಟ ಪ್ರದರ್ಶನ



**ಬೆಂಗಳೂರು:** ವಿರಾಟ್ ಕೊಹ್ಲಿ ಸ್ಫೋಟಕ ಅರ್ಧಶತಕ ಮತ್ತು ಕೊನೆಯಲ್ಲಿ ಕಾರ್ತಿಕ್, ಮಹಿಪಾಲ್ ಅವರ ಸಿಕ್ಸರ್ ಬೌಂಡರಿ ನೆರವಿನಿಂದ ಆರ್‌ಸಿಬಿ ತವರಿನಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ 4 ವಿಕೆಟ್‌ಗಳ ರೋಚಕ ಜಯ ಸಾಧಿಸಿ ಟೂರ್ನಿಯಲ್ಲಿ ಮೊದಲ ಗೆಲುವು ದಾಖಲಿಸಿದೆ.

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಗೆಲ್ಲಲು 177 ರನ್‌ಗಳ ಕಠಿಣ ಗುರಿಯನ್ನು ಪಡೆದ ಆರ್‌ಸಿಬಿ ಇನ್ನೂ 4 ಎಸೆತ ಬಾಕಿ ಇರುವಂತೆಯೇ 6 ವಿಕೆಟ್ ನಷ್ಟಕ್ಕೆ 178 ರನ್ ಹೊಡೆದು ಮೊದಲ ಜಯ ದಾಖಲಿಸಿತು.

ಕೊನೆಯ 30 ಎಸೆತಗಳಲ್ಲಿ 59 ರನ್ ಬೇಕಿತ್ತು. 16ನೇ ಓವರ್‌ನಲ್ಲಿ 12 ರನ್ ಬಂದರೂ ಕೊಹ್ಲಿ 77 ರನ್(49 ಎಸೆತ, 11 ಬೌಂಡರಿ, 2 ಸಿಕ್ಸರ್) ಹೊಡೆದು ಔಟಾದ ಕಾರಣ ಪಂದ್ಯ ರೋಚಕ ತಿರುವು ಪಡೆದುಕೊಂಡಿತ್ತು. 16.2 ನೇ ಓವರ್‌ನಲ್ಲಿ ಅನುಜ್ ರಾವತ್ ಎಲ್‌ಬಿ ಔಟಾಗಿದ್ದರಿಂದ ಪಂದ್ಯ ಪಂಜಾಬ್ ಕಡೆಗೆ ವಾಲಿತ್ತು.

ಈ ವೇಳೆ ಜೊತೆಯಾದ ಕಾರ್ತಿಕ್ ಮತ್ತು ಇಂಪ್ಯಾಕ್ಟ್ ಪ್ಲೇಯರ್ ಮಹಿಪಾಲ್ ಮುರಿಯದ 7ನೇ ವಿಕೆಟಿಗೆ ಕೇವಲ 18 ಎಸೆತಗಳಲ್ಲಿ 48 ರನ್ ಜೊತೆಯಾಟವಾಡಿ ಆರ್‌ಸಿಬಿಗೆ ಗೆಲುವು ತಂದುಕೊಟ್ಟರು. ವಿಕೆಟ್ ಪತನವಾಗುತ್ತಿದ್ದರೂ ಕ್ರೀಸ್‌ನಲ್ಲಿ ನಿಂತು ಸ್ಫೋಟಕ ಅರ್ಧಶತಕ ಸಿಡಿಸಿದ ಕೊಹ್ಲಿ ಅರ್ಹವಾಗಿಯೇ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನಾರದರು.

17ನೇ ಓವರ್‌ನಲ್ಲಿ 11 ರನ್ ಬಂದರೆ 18ನೇ ಓವರ್‌ನಲ್ಲಿ 13 ರನ್ ಬಂತು. 19ನೇ ಓವರ್‌ನಲ್ಲಿ ಕಾರ್ತಿಕ್ ಬೌಂಡರಿ, ಸಿಕ್ಸ್ ಸಿಡಿಸಿದ ಪರಿಣಾಮ 13 ರನ್ ಬಂತು. ಕೊನೆಯ 6 ಎಸೆತದಲ್ಲಿ 10 ರನ್ ಬೇಕಿತ್ತು. ಅರ್ಶ್‌ದೀಪ್ ಸಿಂಗ್ ಎಸೆದ ಮೊದಲ ಎಸೆತವನ್ನು ಕಾರ್ತಿಕ್ ಸಿಕ್ಸರ್‌ಗೆ ಅಟ್ಟಿದರು. ಎರಡನೇ ಎಸೆತದಲ್ಲಿ ಬೌಂಡರಿಗೆ ಸಿಡಿಸಿ ತವರು ನೆಲದಲ್ಲಿ ಆರ್‌ಸಿಬಿಗೆ ಜಯ ತಂದುಕೊಟ್ಟರು.

ಕಾರ್ತಿಕ್ ಔಟಾಗದೇ 28 ರನ್(10 ಎಸೆತ, 3 ಬೌಂಡರಿ, 2 ಸಿಕ್ಸರ್), ಮಹಿಪಾಲ್ ಔಟಾಗದೇ 17 ರನ್ (8 ಎಸೆತ, 2 ಬೌಂಡರಿ, 1 ಸಿಕ್ಸರ್) ರನ್ ಹೊಡೆದರು.

ಆರ್‌ಸಿಬಿ ಆರಂಭದಲ್ಲೇ ವಿಕೆಟ್ ಕಳೆದುಕೊಂಡಿತು. ನಾಯಕ ಡುಪ್ಲೆಸಿಸ್ 3 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಬೆನ್ನಲ್ಲೇ ಕ್ಯಾಮರೂನ್ ಗ್ರೀನ್ 3 ರನ್ ಗಳಿಸಿ ಔಟಾದರು. ನಂತರ ಬಂದ ರಜತ್ ಪಾಟಿದರ್ 18 ರನ್ ( 18 ಎಸೆತ, 1 ಬೌಂಡರಿ) ಹೊಡೆದು ಬೌಲ್ಡ್ ಆದರು. ಬೆನ್ನಲ್ಲೇ ಮ್ಯಾಕ್ಸ್‌ವೆಲ್ 3 ರನ್ ಗಳಿಸಿ ಹರ್‌ಪ್ರೀತ್ ಬ್ರಾರ್‌ಗೆ ಬೌಲ್ಡ್ ಆದರು.

ಟಾಸ್ ಸೋತು ಮೊದಲ ಬ್ಯಾಟ್ ಮಾಡಿದ ಪಂಜಾಬ್ ಕಿಂಗ್ಸ್‌ಗೆ ನಾಯಕ ಶಿಖರ್ ಧವನ್ ಬಲ ತುಂಬಿ 45 ರನ್ (37 ಎಸೆತ, 4 ಬೌಂಡರಿ) ಹೊಡೆದು ಔಟಾದರು. ನಂತರ ಪ್ರಭಾಸಿಮ್ರಾನ್ ಸಿಂಗ್ 25 ರನ್, ಲಿವಿಂಗ್ ಸ್ಟೋನ್ 17 ರನ್, ಸ್ಯಾಮ್ ಕರ್ರನ್ 23 ರನ್ ರನ್ ಹೊಡೆದರು. ಕೊನೆಯಲ್ಲಿ ಶಶಾಂಕ್ ಸಿಂಗ್ 21 ರನ್ ( 8 ಎಸೆತ, 1 ಬೌಂಡರಿ, 2 ಸಿಕ್ಸರ್) ಜಿತೇಶ್ ಶರ್ಮಾ 27 ರನ್ (20 ಎಸೆತ, 1 ಬೌಂಡರಿ, 2 ಸಿಕ್ಸರ್) ಹೊಡೆದರು. ಅಂತಿಮವಾಗಿ ಪಂಜಾಬ್ ಕಿಂಗ್ಸ್ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 176 ರನ್ ಗಳಿಸಿತು.

ಸಿರಾಜ್ 2 ಮತ್ತು ಮ್ಯಾಕ್ಸ್‌ವೆಲ್ ತಲಾ ಎರಡು ವಿಕೆಟ್ ಪಡೆದರೆ ಯಶ್ ದಯಾಳ್, ಅಲ್ಜಾರಿ ಜೋಸೆಫ್ ತಲಾ ಒಂದೊಂದು ವಿಕೆಟ್ ಪಡೆದರು.

# ಪಂದ್ಯದ ವೇಳೆ ಕ್ರೀಸ್‌ಗೆ ನುಗ್ಗಿ ಕೊಹ್ಲಿ ಕಾಲು ಹಿಡಿದ ಆರ್‌ಸಿಬಿ ಅಭಿಮಾನಿ ವಶಕ್ಕೆ



ಆರ್‌ಸಿಬಿ ಅಭಿಮಾನಿಯೊಬ್ಬ ಐಪಿಎಲ್ ಪಂದ್ಯದ ವೇಳೆ ಕ್ರೀಸ್‌ಗೆ ನುಗ್ಗಿ ಕೊಹ್ಲಿ ಕಾಲು ಹಿಡಿದ ಘಟನೆ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆದಿದೆ.

ಆರ್‌ಸಿಬಿ ಮತ್ತು ಪಂಜಾಬ್ ಕಿಂಗ್ಸ್ ನಡುವೆ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ರೋಚಕ ಐಪಿಎಲ್ ಪಂದ್ಯ ನಡೆಯುತ್ತಿದೆ. ವಿರಾಟ್ ಕೊಹ್ಲಿ ಬ್ಯಾಟಿಂಗ್ ಬರುತ್ತಿದ್ದಂತೆ ಅಭಿಮಾನಿಯೊಬ್ಬ ಹೈ ಸೆಕ್ಯೂರಿಟಿ ಮಧ್ಯೆಯೂ ಕ್ರೀಸ್ ಒಳಗಡೆ ನುಗ್ಗಿ ಕೊಹ್ಲಿ ಕಾಲು ಹಿಡಿದು ಹುಚ್ಚಾಟ ನಡೆಸಿದ್ದಾನೆ.

ಕೊಹ್ಲಿ ಬರುವುದನ್ನೇ ಕಾಯುತ್ತಿದ್ದ ಅಭಿಮಾನಿ ಎಲ್ಲಾ ರೂಲ್ಸ್‌ಗಳನ್ನು ಮುರಿದು ಕ್ರೀಸ್ ಒಳಗಡೆ ನುಗ್ಗಿ ಏಕಾಏಕಿ ಕೊಹ್ಲಿ ಕಾಲಿಗೆ ಬಿದ್ದು ಬಳಿಕ ಅಪ್ಪಿಕೊಳ್ಳಲು ಪ್ರಯತ್ನಿಸಿದ್ದಾನೆ. ಘಟನೆ ನಡೆದ ಕೂಡಲೇ ಒಳನುಗ್ಗಿದ ಅಭಿಮಾನಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.



# ಸುಧಾಕರ್‌ಗೆ ಶಾಸಕ ಪ್ರದೀಪ್ ಈಶ್ವರ್ ಓಪನ್ ಚಾಲೆಂಜ್!



**ಬೆಂಗಳೂರು:** ಲೋಕಸಭೆ ಚುನಾವಣೆಗೆ ಬಿಜೆಪಿ 5ನೇ ಪಟ್ಟಿಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರಕ್ಕೆ ಡಾ.ಕೆ ಸುಧಾಕರ್ ಅವರಿಗೆ ಟಿಕೆಟ್ ಘೋಷಣೆ ಮಾಡಿದೆ. ಇದರ ಬೆನ್ನಲ್ಲೇ ಚಿಕ್ಕಬಳ್ಳಾಪುರ ಕ್ಷೇತ್ರದ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್, ಬಿಜೆಪಿ ಅಭ್ಯರ್ಥಿ ವಿರುದ್ಧ ವಾಗ್ದಾಳಿ ನಡೆಸಿದ್ದು, ಓಪನ್ ಚಾಲೆಂಜ್ ಹಾಕಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಪ್ರದೀಪ್ ಈಶ್ವರ್ ಅವರು, ಕೆಲವೇ ಕೆಲವು ಬಿಜೆಪಿ ಹಿರಿಯ ನಾಯಕರಿಗೆ ವಿವಿಧ ರೀತಿಯ ಸಹಾಯ ಮಾಡಿದ್ದಾರೆ. ಸೂರ್ಯ ನಮಸ್ಕಾರ, ದೀರ್ಘದಂಡ ನಮಸ್ಕಾರ, ಯೋಗಾಸನ ಸೇರಿದಂತೆ ಸಹಕಾರ ಮಾಡಿದ ಪರಿಣಾಮ ಸುಧಾಕರ್‌ಗೆ ಟಿಕೆಟ್ ನೀಡಲಾಗಿದೆ. ಇದೆಲ್ಲಾ ನಾಯಕರಿಗೆ ಮಾಡಿಸಿದ್ದಕ್ಕೆ ಬಹುಶಃ ಸುಧಾಕರ್ ಗೆ ಟಿಕೆಟ್ ಸಿಕ್ಕಿದೆ. ಕೋವಿಡ್‌ನಲ್ಲಿ ಅಷ್ಟೆಲ್ಲಾ ಭ್ರಷ್ಟಾಚಾರ ಆಯ್ತು, ಇಡೀ ಕೇಂದ್ರ ಸರ್ಕಾರ ಚಿಕ್ಕಬಳ್ಳಾಪುರಕ್ಕೆ ಬಂದು ನಿಂತರೂ ಸುಧಾಕರ್‌ನ ಪಾರ್ಲಿಮೆಂಟ್ ಮೆಟ್ಟಿಲು ಹತ್ತಲು ಬಿಡಲ್ಲ. ಈ ಬಾರಿಯೂ ಚಿಕ್ಕಬಳ್ಳಾಪುರ ಜನ ಸುಧಾಕರ್‌ಗೆ ಮತ್ತೆ ಪಾಠ ಕಲಿಸುತ್ತಾರೆ. ಅಕಸ್ಮಾತ್ ಸುಧಾಕರ್ ಗೆದ್ದರೆ ಕೇಂದ್ರದ ಮಂತ್ರಿಗಳಿಗೆ ಅವರ ಆಸನಗಳನ್ನ ತೋರಿಸುತ್ತಾರೆ, ಆಗ ಯಾವ ವಿಜಯೇಂದ್ರ, ಅಶೋಕ್ ಯಾರೂ ಇರಲ್ಲ. ನಿನ್ನೆ ಬಿಜೆಪಿ ಲಿಸ್ಟ್ ನೋಡಿದಾಗಿನಿಂದ ಪ್ರಜಾಪ್ರಭುತ್ವ ಸಾಯುವುದಕ್ಕೆ ಮುನ್ನುಡಿ ಅಂತ ಅನಿಸಿದೆ ಎಂದು ಟೀಕಿಸಿದ್ದಾರೆ.

ನಾನು ನನ್ನ ಎಲ್ಲಾ ಆದಾಯದ ದಾಖಲೆಗಳನ್ನು ಡಿಕ್ಲೇರ್ ಮಾಡುವುದಕ್ಕೆ ರೆಡಿ, ಸುಧಾಕರ್ ಪ್ರಾಮಾಣಿಕರಾಗಿದ್ದರೆ ಅವರ ಆದಾಯದ ಮೂಲ ಬಿಡುಗಡೆ ಮಾಡುವುದಕ್ಕೆ ಸಿದ್ದ ಇದ್ದಾರಾ? ಪಾರ್ಲಿಮೆಂಟ್ ಪವಿತ್ರವಾದ ಜಾಗ, ಆದರೆ ಹುಕ್ ಆರ್ ಕ್ರುಕ್ ಸುಧಾಕರ್ ಅವರನ್ನು ಪಾರ್ಲಿಮೆಂಟ್ ಮೆಟ್ಟಿಲು ಹತ್ತುವುದಕ್ಕೂ ಕೂಡ ಬಿಡುವುದಿಲ್ಲ. ಬೇಕಿದ್ದರೆ ಕೇಂದ್ರ ಸರ್ಕಾರವೇ ಚಿಕ್ಕಬಳ್ಳಾಪುರಕ್ಕೆ ಬಂದು ನಿಂತುಕೊಳ್ಳಲಿ, ಸುಧಾಕರ್ ಗೆ ಪಾರ್ಲಿಮೆಂಟ್ ಹೋಗೋದಕ್ಕಂತೂ ಬಿಡುವುದಿಲ್ಲ ಎಂದು ಪ್ರದೀಪ್ ಈಶ್ವರ ಶಪಥ ಮಾಡಿದ್ದಾರೆ.

ನನಗೆ ಕುರಿ ಕೊಬ್ಬಲಿ ಅಂತ ಬಿಟ್ಟಿದ್ದೀನಿ ಅಂತಾರೆ, ನಾವೇನು ಕಡಲೆಕಾಯಿ ತಿಂತಾ ಇರ್ತೀವಾ? ಕೋವಿಡ್ ತನಿಖೆಯಿಂದ ಪಾರಾಗಲು ಯಾರ್ಯಾರ ಕಾಲಿಗೆ ಬಿದ್ದಿದ್ದೀರ ಗೊತ್ತಿಲ್ವಾ? ಪ್ರಾಮಾಣಿಕರಾಗಿದ್ದರೆ ಯಾಕೆ ಸುಧಾಕರ್ ಕಾಲಿಗೆ ಬೀಳ್ತಾರೆ? ಡಾ.ಕೆ ಸುಧಾಕರ್ ಒಂಥರಾ ವಿಚಿತ್ರವಾದ ರಾಜಕಾರಣಿ, ಸುಧಾಕರ್ ನನ್ನನ್ನು ಏನು ಬಿಡೋದು, ನಾನೇ ಸುಧಾಕರ್ ಅವರನ್ನು ಬಿಡಲ್ಲ. ಡಾ.ಕೆ ಸುಧಾಕರ್ ಬಂದರೆ ಕಾನೂನು ಸುವ್ಯವಸ್ಥೆ ಹಾಳಾಗುತ್ತದೆ.

**ಫ್ಯಾಮಿಲಿ ಮತ್ತು ಬಾಮೈದನ ಅಕೌಂಟ್ ಹೊರಗಡೆ ಇಡ್ತೀರಾ?:** ಸುಧಾಕರ್ ಭ್ರಷ್ಟಾಚಾರ ಮಾಡಿದ್ದಾರೆ ಅಂತ ಅವರದೇ ಪಕ್ಷದವರು ಹೇಳಿದ್ದಾರೆ. ಸುಧಾಕರ ಬಗ್ಗೆ ಅವರ ಅಹಂಕಾರದ ಬಗ್ಗೆ ಅವರದೇ ನಾಯಕರಿಗೆ ಅಸಮಾಧಾನ ಇದೆ. ಸುಧಾಕರ್ ವಿರುದ್ಧ ಮೆಡಿಕಲ್ ಕಾಲೇಜ್, ಕ್ರಷರ್ ಮಾಲೀಕರಿಂದ ಕಿಕ್ ಬ್ಯಾಕ್ ಪಡೆದುಕೊಂಡ ಆರೋಪ ಇದೆ. ಸುಧಾಕರ್ ಅವರು ಅವರ ಫ್ಯಾಮಿಲಿ ಅಕೌಂಟ್, ಅವರ ಬಾಮೈದನ ಅಕೌಂಟ್ ಹೊರಗಡೆ ಇಡುವುದಕ್ಕೆ ಸಿದ್ಧ ಇದ್ದೀರಾ? ಸುಧಾಕರ್ ಆರೋಗ್ಯ ಸಚಿವರಾಗಿ ಮಾಡದೇ ಇರುವ ಕೆಲಸ ನಾನು ಒಬ್ಬ ಶಾಸಕನಾಗಿ ಮಾಡಿದ್ದೇನೆ. ಸುಧಾಕರ್ ಅವರ ಜೇಬಿನಿಂದ ಮಾಡದೇ ಇರುವ ಕೆಲಸ ನಾನು ಮಾಡಿದ್ದೇನೆ. ಯಾವುದೋ ಸೆಲೆಬ್ರಿಟಿ ಬಂದು ವೋಟು ಕೇಳಿದರೆ ಮತ ಹಾಕುವ ಕಾಲ ಹೋಯ್ತು ಎಂದು ಎಚ್ಚರಿಕೆ ನೀಡಿದರು.

ಅಲ್ಲದೇ, ನೀವು ಎಲ್ಲದಕ್ಕೂ ಆನ್ಸರ್ ಮಾಡಬೇಕು. ಪಾರ್ಲಿಮೆಂಟ್ ಒಂದು ಗೌರವಯುತ ಅವಕಾಶ, ಇಂತಹ ವ್ಯಕ್ತಿ ಪಾರ್ಲಿಮೆಂಟ್ ಗೆ ಹೋದರೆ ಗತಿ ಏನು? ನಾವು ಅಲ್ಲಿಗೆ ಹೋಗೋಕೆ ಬಿಡಲ್ಲ, ಇದು ನನ್ನ ಚಾಲೆಂಜ್. ನನ್ನ ಮೇಲೆ ಹಲವು ಕೇಸ್ ಹಾಕಿಸಿದ್ದರು. ನನ್ನನ್ನ ಸೋಷಿಯಲ್ ಮಿಡಿಯಾದಲ್ಲಿ ಬೈಯ್ತಾರೆ, ಹಾಗಂತ ನಾವು ರಿವೇಂಜ್ ಮಾಡೋಕೆ ಆಗುತ್ತಾ? ಆ ರೀತಿ ಎಲ್ಲ ಮಾಡಬಾರದು. ಟೀಕೆ ಬಂದರೆ ಎಲ್ಲವನ್ನೂ ಜೀರ್ಣಿಸಿಕೊಳ್ಳುವ ಶಕ್ತಿ ಬೇಕು.

# ರೆಡ್ಡಿ ಮರಳಿದ್ದು ಬಿಜೆಪಿಗೆ ದೊಡ್ಡ ಶಕ್ತಿ ಮೈತ್ರಿಗೆ ಗೆಲುವು ಖಚಿತ



**ಬೆಂಗಳೂರು:** ಜನಾರ್ದನ ರೆಡ್ಡಿ ಮರಳಿದ್ದು ಬಿಜೆಪಿಗೆ ದೊಡ್ಡ ಶಕ್ತಿ ಬಂದಂತಾಗಿದೆ. ರಾಜ್ಯದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಪಕ್ಷಕ್ಕೆ ಐತಿಹಾಸಿಕ ಗೆಲುವು ಖಚಿತ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಅವರು ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿಂದು ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಶಾಸಕ ಗಾಲಿ ಜನಾರ್ದನ ರೆಡ್ಡಿ ಅವರ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದರು. ರೆಡ್ಡಿ ಅವರು ಬಿಜೆಪಿ ಜೊತೆ ತಮ್ಮ ಪಕ್ಷವನ್ನು ವಿಲೀನ ಮಾಡಿದ್ದಾರೆ. ಜನಾರ್ದನ ರೆಡ್ಡಿಯವರ ಪತ್ನಿ ಅರುಣ ಲಕ್ಷ್ಮಿ, ಮಾಜಿ ಸಚಿವ ಟಿ.ಜಾನ್ ಅವರ ಪುತ್ರ, ಡಾ.ಥಾಮಸ್ ಜಾನ್ ಅವರೂ ಬಿಜೆಪಿ ಸೇರಿಸುವುದು ಸಂತಸ ತಂದಿದೆ ಎಂದರು.

ಜನಾರ್ದನ ರೆಡ್ಡಿ ತಮ್ಮ ಪಕ್ಷವನ್ನು ಬಿಜೆಪಿಯಲ್ಲಿ ವಿಲೀನಗೊಳಿಸಿದ್ದಾರೆ. ಇದರಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಿಜೆಪಿಗೆ ದೊಡ್ಡ ಶಕ್ತಿ ಬಂದಿದೆ. ಪ್ರಧಾನಿ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಮಂತ್ರಿಯಾಗಿ ಮಾಡುವ ದೃಷ್ಟಿಯಿಂದ ಅವರು ಬಿಜೆಪಿ ಸೇರಿದ್ದಾರೆ. ರಾಜ್ಯದಲ್ಲಿ ಬಿಜೆಪಿ ಪರವಾದ ವಾತಾವರಣವಿದೆ. ಮುಂದಿನ ಲೋಕಸಭಾ ಚುನಾವಣೆಯು ದೇಶದ ಭವಿಷ್ಯ ರೂಪಿಸಲಿದೆ. ಪಕ್ಷದ ಹಿತದೃಷ್ಟಿ, ಏಳಿಗೆಗಾಗಿ ಎಲ್ಲರನ್ನೂ ತೊಡಗಿಸಿಕೊಳ್ಳಲಿದ್ದೇವೆ ಎಂದು ತಿಳಿಸಿದರು.

ಬಳಿಕ ಶಾಸಕ ಜನಾರ್ದನ ರೆಡ್ಡಿ ಮಾತನಾಡಿ, ಕಲ್ಯಾಣ ರಾಜ್ಯ ಪ್ರಗತಿ ಪಕ್ಷವನ್ನು ವಿಲೀನ ಮಾಡಿದ್ದೇವೆ. ನಮ್ಮ ಪಕ್ಷದ ಎಲ್ಲಾ ಕಾರ್ಯಕರ್ತರು, ಬೆಂಬಲಿಗರು ಯಡಿಯೂರಪ್ಪ ಅವರ ಆಶೀರ್ವಾದ, ವಿಜಯೇಂದ್ರರ ನೇತೃತ್ವದಲ್ಲಿ ಬಿಜೆಪಿ ಸೇರಿದ್ದೇವೆ ಎಂದು ತಿಳಿಸಿದರು.

ದೇಶದ ಸಮಗ್ರತೆ, ಸರ್ವತೋಮುಖ ಅಭಿವೃದ್ಧಿಗೆ, ವಿಶ್ವಗುರುವಾಗಿ ಭಾರತವನ್ನು ತರುವ ನಿಟ್ಟಿನಲ್ಲಿ ಕೆಲಸ ಮಾಡಿದ ನರೇಂದ್ರ ಮೋದಿ ಜೀ ಅವರ ಕೈಯನ್ನು ಬಲಪಡಿಸಲು ಬಿಜೆಪಿ ಸೇರಿದ್ದೇವೆ. ಅಮಿತ್ ಶಾ ಜೀ ಅವರು ನನ್ನನ್ನು ದೆಹಲಿಗೆ ಆಹ್ವಾನಿಸಿ, ಬಿಜೆಪಿ ಸೇರಲು ತಿಳಿಸಿದ್ದರು. ಅವರ ಮೇಲಿನ ಪ್ರೀತಿಯಿಂದ ಬಿಜೆಪಿ ಸೇರಿದ್ದೇನೆ ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ, ನಿಕಟಪೂರ್ವ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿಟಿ ರವಿ, ಸಂಸದರಾದ ಪಿಸಿ ಮೋಹನ್, ದೇವೇಂದ್ರಪ್ಪ, ಕರ್ನಾಟಕ ಸಹ ಉಸ್ತುವಾರಿ ಸುಧಾಕರ ರೆಡ್ಡಿ, ಮಾಜಿ ಸಚಿವ ಬಿ.ಶ್ರೀರಾಮುಲು, ಮುಖ್ಯ ಸಚೇತಕ ಎನ್ ರವಿಕುಮಾರ್, ಕೊಪ್ಪಳ ಜಿಲ್ಲಾಧ್ಯಕ್ಷ ನವೀನ್, ಮಾಜಿ ಸಚಿವ ಆನಂದ್ ಸಿಂಗ್ ಮತ್ತಿತರ ಮುಖಂಡರು ಉಪಸ್ಥಿತರಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com